ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 91 ಸಂಚಿಕೆ- 91 | PAGE- 8 ಪುಟ-8 | ಶುಕ್ರವಾರ 16.05.2025 | RS.2/- ಬೆಲೆ 2/-

# ಗಡಿಯಾಚಿನ ಭಯೋತ್ಪಾದನೆ ನಿಲ್ಲುವವರೆಗೆ ಸಿಂಧೂ ಜಲ ಒಪ್ಪಂದ ಸ್ಥಗಿತ:ಜೈಶಂಕರ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.15:ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆಗೆ ಪರಿಹಾರವನ್ನು ಕಂಡುಕೊಳ್ಳುವವರೆಗೆ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸುವ ಬಗ್ಗೆ ಭಾರತದ ನಿಲುವನ್ನು ಗುರುವಾರ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಒತ್ತಿ ಹೇಳಿದರು.

ನವದೆಹಲಿಯಲ್ಲಿ ಹೊಂಡುರಾಸ್ ರಾಯಭಾರ ಕಚೇರಿಯ ಉದ್ಘಾಟನಾ ಸಮಾರಂಭದ ನಂತರ ಮಾಧ್ಯಮಗಳೊಂದಿಗೆ ಜೈಶಂಕರ್ ಮಾತನಾಡಿ,ಪಾಕಿಸ್ತಾನದೊಂದಿಗೆ ಕದನ ವಿರಾಮದ ಹೊರತಾಗಿಯೂ,ಭಾರತವು ಅದರ ಮೇಲೆ ನಿರ್ಬಂಧಗಳನ್ನು ಕಾಯ್ದುಕೊಂಡಿದೆ. ಸಿಂಧೂ ನದಿ ನೀರು ಒಪ್ಪಂದ ಇನ್ನೂ ಸ್ಥಗಿ-ತಗೊಂಡಿದ್ದು, ಪಾಕಿಸ್ತಾನ ಪ್ರತಿ ಹನಿ ನೀರಿಗೂ ಹಾತೊರೆಯುವಂತೆ ಮಾಡಲು ಎಲ್ಲ ಪ್ರಯತ್ನಗಳನ್ನು ಮಾಡಲಾಗುತ್ತಿದೆ.ಭಾರತ-ಪಾಕಿಸ್ತಾನದ ಉದ್ವಿಗ್ನತೆಯ ಕುರಿತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, "ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಲಾಗಿದೆ.ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆಯನ್ನು ವಿಶ್ವಾಸಾರ್ಹವಾಗಿ ಮತ್ತು ಉಗ್ರತ್ವವನ್ನು ಸಂಪೂರ್ಣವಾಗಿ ನಿಲ್ಲಿಸುವವರೆಗೆ ಅಮಾನತುಗೊಳಿಸಲಾಗುತ್ತದೆ.ಕಾಶ್ಮೀರದ ಬಗ್ಗೆ ಚರ್ಚಿಸಲು ಉಳಿದಿರುವ ಏಕೈಕ ವಿಷಯವೆಂದರೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಭಾರತೀಯ ಪ್ರದೇಶವನ್ನು ಬಿಟ್ಟುಕೊಡುವುದು,ನಾವು ಈ ಚರ್ಚೆಗೆ ಸಿದ್ಧರಿದ್ದೇವೆ ಎಂದು ಹೇಳಿದರು."ನಮಗೆ ನಿಜವಾಗಿಯೂ ಅಂತಾರಾಷ್ಟ್ರೀಯ ಬೆಂಬಲ ಸಿಕ್ಕಿತು. ದುಷ್ಕರ್ಮಿಗಳನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂಬ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯ ನಮ್ಮಲ್ಲಿತ್ತು.ಮೇ 7ರಂದು ಆಪರೇಷನ್ ಸಿಂಧೂರ್ ಮೂಲಕ ಅವರನ್ನು ಹೊಣೆಗಾರರನ್ನಾಗಿ ಮಾಡಲಾಯಿತು ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದರು.

ಪಾಕಿಸ್ತಾನದೊಂದಿಗಿನ ನಮ್ಮ ಸಂಬಂಧಗಳು ಮತ್ತು ವ್ಯವಹಾರಗಳು ಸಂಪೂರ್ಣವಾಗಿ ದ್ವಿಪಕ್ಷೀಯವಾಗಿರುತ್ತವೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದರು. ಇದು ವರ್ಷಗಳಿಂದ ರಾಷ್ಟ್ರೀಯ ಒಮ್ಮತವಾಗಿದೆ. ಇದರಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಪಾಕಿಸ್ತಾನದೊಂದಿಗಿನ ಮಾತುಕತೆ ಭಯೋತ್ಪಾದನೆಯ ಬಗ್ಗೆ ಮಾತ್ರ ಎಂದು ಪ್ರಧಾನಿ ಸ್ಪಷ್ಟಪಡಿಸಿದ್ದಾರೆ. ಪಾಕಿಸ್ತಾನವು ಹಸ್ತಾಂತರಿಸಬೇಕಾದ ಭಯೋತ್ಪಾದಕರ ಪಟ್ಟಿಯನ್ನು ಹೊಂದಿದೆ. ಅವರು ಭಯೋತ್ಪಾದಕ ಮೂಲಸೌಕರ್ಯವನ್ನು ಮುಚ್ಚಬೇಕು. ಅವರಿಗೆ ಏನು ಮಾಡಬೇಕೆಂದು ತಿಳಿದಿದೆ. ನಾವು ಅವರೊಂದಿಗೆ ಭಯೋತ್ಪಾದನೆಯನ್ನು ಚರ್ಚಿಸಲು ಸಿದ್ಧರಿದ್ದೇವೆ. ಇವು ಸಾಧ್ಯವಿರುವ ಮಾತುಕತೆಗಳು ಎಂದರು.ಭಾರತ ಮತ್ತು



ಪಾಕಿಸ್ತಾನ ನಡುವಿನ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆ ನಿಂತಿರುವ ಕುರಿತು ಮಾತನಾಡಿದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಮಾಡುವ ಮೂಲಕ ನಾವು ನಿಗದಿಪಡಿಸಿದ ಗುರಿಗಳನ್ನು ಸಾಧಿಸಿದ್ದೇವೆ.ಪ್ರಮುಖ ಗುರಿಗಳನ್ನು ಸಾಧಿಸಿದಾಗಿನಿಂದ, ನಾವು ಸರಿಯಾದ ವಿಧಾನವನ್ನು ತೆಗೆದುಕೊಂಡಿದ್ದೇವೆ ಎಂದು ನಾನು ಭಾವಿಸುತ್ತೇನೆ. ಏಕೆಂದರೆ ಕಾರ್ಯಾಚರಣೆಯ ಆರಂಭದಲ್ಲಿಯೇ ನಾವು ಭಯೋತ್ಪಾದಕ ಮೂಲಸೌಕರ್ಯದ ಮೇಲೆ ದಾಳಿ ಮಾಡಲಾಗಿತ್ತು. ಮೇ 10ರ ಬೆಳಗಿಯೂ ನಮ್ಮ ದಾಳಿಗಳು ಪಾಕಿಸ್ತಾವನ್ನು ತೀವ್ರವಾಗಿ ಜರ್ಜರಿತವಾಗಿದೆ.ಉಪಗ್ರಹ ಚಿತ್ರಗಳು ನಾವು ಎಷ್ಟು ಹಾನಿ ಮಾಡಿದ್ದೇವೆ ಎಂಬುದನ್ನು ತೋರಿಸುತ್ತವೆ.ಗುಂಡಿನ ದಾಳಿಯನ್ನು ನಿಲ್ಲಿಸಲು ಯಾರು ಬಯಸಿದ್ದರು ಎಂಬುದು ಸ್ಪಷ್ಟವಾಗಿದೆ ಎಂದರು.

## ಯುದ್ಧ ಅಥವಾ ಶಾಂತಿ ಕಾಂಗ್ರೆಸ್ ಸರಿಯಾದ ನಿಲುವು ಪ್ರಕಟಿಸಲಿ: ಆರ್.ಅಶೋಕ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.15:ಕಾಂಗ್ರೆಸ್‌ನಲ್ಲಿ ಒಬ್ಬರು ಯುದ್ಧ ಬೇಕು ಎಂದರೆ ಮತ್ತೊಬ್ಬರು ಶಾಂತಿ ಬೇಕು ಎನ್ನುತ್ತಾರೆ.ಎಐಸಿಸಿ ಈ ಬಗ್ಗೆ ಸರಿಯಾದ ನಿಲುವು ಪ್ರಕಟಿಸಲಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಕಾಂಗ್ರೆಸ್ ಆಡಳಿತದಲ್ಲಿದ್ದಾಗ ಅಮೆರಿಕದ ಬಳಿ ಹೋಗಿ ಭಿಕ್ಷೆ ಬೇಡಿದ್ದನ್ನು ನೋಡಿದ್ದೇವೆ. ಮುಂಬೈಯಲ್ಲಿನ ಉಗ್ರ ದಾಳಿಯಲ್ಲಿ 175 ಜನರು ಸತ್ತಿದ್ದರು. ಆಗ ಮನಮೋಹನ್ ಸಿಂಗ್ ನೇತೃತ್ವದ ಯುಪಿಎ ಸರ್ಕಾರ ಪ್ರತಿಕ್ರಿಯೆ ನೀಡಲೇ ಇಲ್ಲ. ಆದರೆ ಈಗ



ಪ್ರಧಾನಿ ಮೋದಿ ತಕ್ಕ ಪ್ರತ್ಯುತ್ತರ ನೀಡಿದ್ದಾರೆ. ಸಿಂಧೂ ನದಿ ಒಪ್ಪಂದಕ್ಕೆ ನಾವು ಸಹಿ ಹಾಕಿಲ್ಲ. ಅದನ್ನು ಪ್ರಧಾನಿ ಮೋದಿ ರದ್ದು ಮಾಡಿದ್ದಾರೆ. ಭಯೋತ್ಪಾದಕ ದಾಳಿಗಳಾದಾಗಲೇ ಕಾಂಗ್ರೆಸ್ ಅದನ್ನು ಮಾಡಬೇಕಿತ್ತು. ಇದನ್ನು ಸಚಿವ ಸಂತೋಷ್ ಲಾಡ್ ಅರಿಯಬೇಕು ಎಂದು ಹೇಳಿದರು.

ಇಡೀ ಜಮ್ಮು ಕಾಶ್ಮೀರ ಪ್ರಧಾನಿ ಮೋದಿಯವರ ಪರವಾಗಿ ನಿಂತಿದೆ. ಅಲ್ಲಿನ ಮುಖ್ಯಮಂತ್ರಿ ಕೂಡ ಕೇಂದ್ರ ಸರ್ಕಾರಕ್ಕೆ ಬೆಂಬಲ ನೀಡಿದ್ದಾರೆ. ಅಲ್ಲಿನ ಅಭಿವೃದ್ಧಿಯನ್ನು ಜನರು ನೋಡಿದ್ದಾರೆ. ಪಾಕ್ ಆಕ್ರಮಿತ ಕಾಶ್ಮೀರ ನಮ್ಮದು. ಅದನ್ನು ಮರಳಿ ಪಡೆಯುತ್ತೇವೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಕಾಂಗ್ರೆಸ್‌ನ ಒಬ್ಬೇ ಒಬ್ಬ ನಾಯಕರು ಈ ಮಾತನ್ನು ಧೈರ್ಯವಾಗಿ ಹೇಳಿಲ್ಲ ಎಂದರು.

ಯಾವುದೇ ಮಧ್ಯಸ್ಥಿಕೆಯನ್ನು ಒಪ್ಪಲ್ಲ ಎಂದು ವಿದೇಶಾಂಗ

(2ನೇ ಪುಟ ನೋಡಿ)

## 4 ಕಳ್ಳತನ ಪ್ರಕರಣದಲ್ಲಿ ಆರೋಪಿ ಬಂಧನ: 4.40 ಲಕ್ಷ ರೂ.ನಗನಾಣ್ಯ ಜಪ್ತಿ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮೇ.15:ಚಿತ್ತಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ 4 ಕಳ್ಳತನ ಪ್ರಕರಣಗಳಲ್ಲಿ ಆರೋಪಿಯೊಬ್ಬನನ್ನು ಬಂಧಿಸಿ 4,40,400 ರೂ.ಮೌಲ್ಯದ ಬೆಳ್ಳಿ ಬಂಗಾರ ಮತ್ತು ನಗದನ್ನು ಜಪ್ತಿ ಮಾಡುವಲ್ಲಿ ಚಿತ್ತಾಪುರ ಠಾಣೆ

(2ನೇ ಪುಟ ನೋಡಿ)

## ಅಮೀನಗಡ ಬಳಿ ರಸ್ತೆ ಅಪಘಾತ:ಇಬ್ಬರ ಸಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.15-ಎರಡು ಕಾರುಗಳ ಮಧ್ಯೆ ಮುಖಾಮುಖಿ ಡಿಕ್ಕಿ ಸಂಭವಿಸಿ ಇಬ್ಬರು ಸಾವನ್ನಪ್ಪಿದ ಘಟನೆ ಜಿಲ್ಲೆಯ ಹುನಗುಂದ ತಾಲೂಕಿನ ಅಮೀನಗಡ ಬಳಿ ಗುರುವಾರ ಮುಂಜಾನೆ ನಡೆದಿದೆ.

ರಾಯಚೂರ-ಬೆಳಗಾವಿ ರಸ್ತೆಯಲ್ಲಿ ಅಮೀನಗಡ ಸಮೀಪದ ಬೇವಿನಮಟ್ಟಿ ಕ್ರಾಸ್ ಹತ್ತಿರ ಈ ದುರ್ಘಟನೆ ನಡೆದಿದ್ದು,ಮೃತರನ್ನು ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ನೆಲವಗಿ ಗ್ರಾಮದ ಗಂಗಮ್ಮ ವೀರೇಶ ಅಂಗಡಿ(50) ಹಾಗೂ ಸಂದೇಶ ಅಂಗಡಿ(18) ಎಂದು ಗುರುತಿಸಲಾಗಿದೆ. ವೀರೇಶ ಅಂಗಡಿ ಮತ್ತು ಸತೀಶ ಅಂಗಡಿ ಅವರಿಗೆ ಗಂಭೀರ ಸ್ವರೂಪದ ಗಾಯಗಳಾಗಿದ್ದು ಅವರನ್ನು ಬಾಗಲಕೋಟೆ ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗೆ ದಾಖಲಿಸಲಾಗಿದೆ.

ಇನ್ನೊಂದು ಕಾರಿನ ಚಾಲಕನಿಗೂ ಸಣ್ಣಪುಟ್ಟ ಗಾಯಗಳಾಗಿವೆ. ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ್ ರೆಡ್ಡಿ, ಹೆಚ್ಚುವರಿ ಎಸ್ಪಿ ಗಳಾದ ಪ್ರಸನ್ ದೇಸಾಯಿ, ಮಹಾಂತೇಶ್ವರ ಜಿದ್ದಿ, ಡಿವೈಎಸ್‌ಪಿ ವಿಶ್ವನಾಥ್ ಕುಲಕರ್ಣಿ, ಸಿಪಿಐ ಕರಿಯಪ್ಪ ಬನ್ನಿ, ಅಮಿನಗಡ ಪಿಎಸ್‌ಐ ಜ್ಯೋತಿ ವಾಲೀಕಾರ, ಕ್ರೈಂ ಪಿಎಸ್‌ಐ ವಾಯ್.ಎಚ್. ಪಠಾಣ

ಭೇಟಿ ನೀಡಿದ್ದರು. ಅಮೀನಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕೆರೆಯಂತಾದ ತಾ.ಪಂ. ಕಚೇರಿಯ ಆವರಣ: ಪರದಾಡಿದ ಸಾರ್ವಜನಿಕರು,ಅಧಿಕಾರಿಗಳು



ಅಫಜಲಪುರ:ಮೇ.15: ನೆನ್ನೆ ರಾತ್ರಿ ಸುರಿದ ಮಳೆಗೆ ಪಟ್ಟಣದ ತಾಲೂಕು ಪಂಚಾಯತ ಕಾರ್ಯಾಲಯ ಮಳೆ ನೀರಿನಿಂದ ಸಂಪೂರ್ಣವಾಗಿ ಕೆ-ರೆಯಂತಾಗಿದೆ.ಕಚೇರಿಗೆ ಬರುವ ಸಾರ್ವಜನಿಕರಷ್ಟೆ ಅಲ್ಲದೇ ಅಧಿಕಾರಿಗಳು ಕಚೇರಿಯ ಒಳಗೆ ಹೋಗದಂತಹ ಸ್ಥಿತಿ ನಿರ್ಮಾಣವಾಗಿದೆ.

(2ನೇ ಪುಟ ನೋಡಿ)

## ಭಾರತ-ಪಾಕ್ ಕದನ ವಿರಾಮ,ನಾನು ಮಧ್ಯಸ್ಥಿಕೆ ವಹಿಸಿಲ್ಲ:ಟ್ರಂಪ್ ಯೂಟರ್ನ್

ಮಲ್ಲಮ್ಮ ನುಡಿ ವಾರ್ತೆ ವಾಷಿಂಗ್ಟನ್:ಮೇ.15: ಭಾರತ ಮತ್ತು ಪಾಕಿಸ್ತಾನ ನಡುವಿನ ಸೇನಾ ಸಂಘರ್ಷವನ್ನು ಕೊನೆಗೊಳಿಸಲು ನೇರವಾಗಿ ಮಧ್ಯಸ್ಥಿಕೆ ವಹಿಸಿದ್ದಾಗಿ ಕಳೆದ ವಾರ ನೀಡಿದ್ದ ಹೇಳಿಕೆಯಿಂದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಿಂದೆ ಸರಿದಿದ್ದಾರೆ.

ಕತಾರ್‌ನ ಅಲ್-ಉದೈದ್ ವಾಯುನೆಲೆಯಲ್ಲಿ ಸೈನಿಕರನ್ನು ಉದ್ದೇಶಿಸಿ ಮಾತನಾಡಿದ ಟ್ರಂಪ್, "ನಾನು ಮಧ್ಯಸ್ಥಿಕೆ ವಹಿಸಿಲ್ಲ, ಆದ-ರೆ ಕದನ ವಿರಾಮಕ್ಕೆ ಸಹಾಯ ಮಾಡಿದೆ" ಎಂದು ಹೇಳಿದ್ದಾರೆ. ಅಮೆರಿಕದ ಸೈನಿಕರನ್ನು ಉದ್ದೇಶಿಸಿ ಮಾತನಾಡಿದ ಟ್ರಂಪ್, ಎರಡು ನೆರೆಯ ರಾಷ್ಟ್ರಗಳ ನಡುವಿನ ದ್ವೇಷ ಮುಗಿದಿದೆ. ಅದರ ಬಗ್ಗೆ ಅವರೂ ಸಂತೋಷಪಟ್ಟಿದ್ದಾರೆ ಎಂದು



ರಾಯಿಟರ್ಸ್ ವರದಿ ಮಾಡಿದೆ. ಸಂಘರ್ಷಗಳನ್ನು ಕೊನೆಗೊಳಿಸುವುದು ತಮ್ಮ ಆದ್ಯತೆಯಾಗಿದ್ದು ಅವುಗಳನ್ನು ಪ್ರಾರಂಭಿಸುವುದಲ್ಲ ಎಂದು ಹೇಳಿದರು.

ಮೇ 10ರಂದು, ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಮಿಲಿಟರಿ ಸಂಘರ್ಷದ ಮಧ್ಯೆ,ಟ್ರಂಪ್ ಟ್ರುತ್ ಸೋಶಿಯಲ್ ಪೋಸ್ಟ್‌ನಲ್ಲಿ ಅಮೆರಿಕದ ಮಧ್ಯಸ್ಥಿಕೆಯಲ್ಲಿ ನಡೆದ ದೀರ್ಘ ರಾತ್ರಿಯ ಮಾತುಕತೆಯ ನಂತರ, ಎರಡೂ ದೇಶಗಳು ಸಂಪೂರ್ಣ ಮತ್ತು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಘೋಷಿಸಿದರು. ನಂತರ, ಭಾರತದ ವಿದೇಶಾಂಗ ಸಚಿವಾಲಯ ಅವರ ಹೇಳಿಕೆಯನ್ನು ನಿರಾಕರಿಸಿತು. ಸೇನಾ ಕದನ ವಿರಾಮವು ಎರಡೂ ದೇಶಗಳ ನಡುವಿನ ಡಿಜಿಎಂಒ ಮಟ್ಟದ ಮಾತುಕತೆಯ ಪರಿಣಾಮವಾಗಿದೆ ಎಂದು ಹೇಳಿತ್ತು. ಪಾಕಿಸ್ತಾನದ ಡಿಜಿ-ಎಂಒ ಭಾರತೀಯ ಸಹವರ್ತಿಯಿಂದ ಕದನ ವಿರಾಮಕ್ಕೆ ಮನವಿ ಮಾಡಿದ ನಂತರ ಕದನ ವಿರಾಮ ನಡೆದಿದೆ ಎಂದು ವಿದೇಶಾಂಗ ಸಚಿವಾಲಯ ಸ್ಪಷ್ಟಪಡಿಸಿತ್ತು. ಪಾಕಿಸ್ತಾನದ ಪ್ರಮುಖ ಮಿಲಿಟರಿ ಸ್ಥಾಪನೆಗಳು ಮತ್ತು

(2ನೇ ಪುಟ ನೋಡಿ)

## ಶೀಲ ಶಂಕಿಸಿ ಪತ್ನಿ ಕೊಲೆಗೈದ ಪತಿ

ಕಮಲನಗರ: ಮೇ.15: ಶೀಲ ಶಂಕಿಸಿ ಪತಿಯೊಬ್ಬ ತನ್ನ ಪತ್ನಿಯನ್ನು ಕೊಲೆ ಮಾಡಿದ ಘಟನೆ ಬುಧವಾರ ಬೆಳಿಗ್ಗೆ ತಾಲ್ಲೂಕಿನ ಭೋಪಾಳಗಡ್ ಗ್ರಾಮದಲ್ಲಿ ನಡೆದಿದೆ. ಮೃತಳನ್ನು ಭೋಪಾಳಗಡ್ ಗ್ರಾಮದ ನಿವಾಸಿ ನಿರ್ಮಲಾ (32) ಹಾಗೂ ಕೊಲೆ ಆರೋಪಿಯನ್ನು ಅಂಕುಶ್ (35) ಎಂದು ಗುರುತಿಸಲಾಗಿದೆ.ಕೆಲ ದಿನಗಳಿಂದ ಪತಿ ಪತ್ನಿ ನಡುವೆ ಜಗಳವಾಗುತ್ತಿತ್ತು. ಅದರಿಂದಾಗಿ ಪತ್ನಿಯು ತನ್ನ ತವರು ಮನೆಯಾದ ಬೆಳಕುಣಿ ಗ್ರಾಮಕ್ಕೆ ಹೋಗಿದ್ದಳು. ನಂತರ ತನ್ನ ಪತಿಯ ಮನೆಗೆ ವಾಪಸ್ಸಾಗಿದ್ದ ನಿರ್ಮಲಾ ಬುಧವಾರ ಬೆಳಿಗ್ಗೆ ಪತಿಯು ಮಾರಕಾಸ್ತ್ರದಿಂದ ಕೊಚ್ಚಿ ಕೊಲೆ ಮಾಡಿದ್ದಾನೆ ಎಂದು ತಿಳಿದು ಬಂದಿದೆ. ತನ್ನ ಪತ್ನಿಯ




ಶೀಲ ಶಂಕಿಸಿ ಕೊಲೆ ಮಾಡಿದ್ದಾನೆ ಎಂಬ ಅನುಮಾನ ವ್ಯಕ್ತವಾಗಿದೆ. ದಂಪತಿಗೆ ಎರಡು

ಮಕ್ಕಳು ಇದ್ದು,ಸುದ್ದಿ ತಿಳಿದ ತಕ್ಷಣ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಡಿವೈಎಸ್‌ಪಿ ಶಿವಾನಂದ್ ಹಾಗೂ ಇತರರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲಿಸರು

ಆರೋಪಿಯನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.

## ಹೊಸಪೇಟೆಯಲ್ಲಿ ರಾಜ್ಯ ಸರ್ಕಾರದ ಸಾಧನಾ ಸಮಾವೇಶ : ಒಂದು ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ :ಸಚಿವ ರಹೀಂ ಖಾನ್



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ: ಮೇ:15:ಇದೇ ಮೇ 20 ರಂದು ಹೊಸಪೇಟೆಯಲ್ಲಿ ಏರ್ಪಡಿಸಲಾಗುವ ರಾಜ್ಯ ಸರ್ಕಾರದ ಎರಡು ವರ್ಷದ ಸಾಧನಾ ಸಮಾವೇಶದಲ್ಲಿ ಸುಮಾರು 1ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆಯ ಉದ್ದೇಶ ಹೊಂದಲಾಗಿದೆ ಎಂದು ಪೌರಾಡಳಿತ,ಹಜ್ ಖಾತೆ ಸಚಿವರಾದ ಶ್ರೀ ರಹೀಂ ಖಾನ್ ಅವರು ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಹೊಸಪೇಟೆಯಲ್ಲಿ ಆಯೋಜಿಸಲು ಉದ್ದೇಶಿಸಲಾಗಿರುವ ಸರ್ಕಾರದ ಸಾಧನಾ ಸಮಾವೇಶದ ಸಿದ್ಧತೆ ಮತ್ತು ಫಲಾನುಭವಿಗಳಿಗೆ ಕಳುಹಿಸುವ ಕುರಿತಂತೆ ಚರ್ಚಿಸಲು ಕರೆಯಲಾಗಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಸಮಾವೇಶಕ್ಕೆ ಫಲಾನುಭವಿಗಳ ಮೇಲುಸ್ತುವಾರಿ ನೋಡಿಕೊಳ್ಳಲು ಸರ್ಕಾರ ತಾಲೂಕುವಾರು ಸಚಿವರನ್ನು ನಿಯೋಜಿಸಿದ್ದರು, ಅದರನ್ವಯ ಯಾದಗಿರಿ ಹಾಗೂ ಗುರುಮಠಕಲ್ ಗೆ ತಾವು ಭೇಟಿ ನೀಡಿದ್ದು,ಜಿಲ್ಲೆಯ 21 ಗ್ರಾಮಗಳ

ಸುಮಾರು 4653 ಫಲಾನುಭವಿಗಳ ಪೈಕಿ 1500 ಫಲಾನುಭವಿಗಳನ್ನು ತಾತ್ಕಾಲಿಕವಾಗಿ ಹಕ್ಕುಪತ್ರ ವಿತರಿಸುವ ಉದ್ದೇಶ ಹೊಂದಲಾಗಿದೆ. ನಂತರ ಉಳಿದ ಹಕ್ಕುಪತ್ರಗಳನ್ನು ಆಯಾ ಶಾಸಕರಿಂದ ವಿತರಣೆ ಯಾಗಲಿದೆ ಎಂದು ಹೇಳಿದರು.

ಹಟ್ಟಿ,ಹಾಡಿ,ತಾಂಡಾ,ಕಾ್ಯಂಪ್,ಕಾಲನಿ,ಮಜಿರೆಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸಿ, ವಿವಿಧ ಜಿಲ್ಲೆಗಳ 1 ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ಈ ಸಮಾವೇಶದಲ್ಲಿ ಹಕ್ಕುಪತ್ರ ವಿತರಣೆ ಮಾಡಲಾಗುವುದು ಎಂದು ಹೇಳಿದರು.ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರದ ಮೂಲಕ ಕಳೆದ 2 ವರ್ಷಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಗಾಗಿ 1.20 ಲ.ಕೋ.ರೂಗಳನ್ನು ಫಲಾನುಭವಿಗಳಿಗೆ ಜಮೆ ಮಾಡಿದೆ ಹಾಗೂ ಒದಗಿಸಿದೆ.ರಾಜ್ಯ ಸರ್ಕಾರ ಜನತೆಗೆ ನೀಡಿದ ಭರವಸೆಯನ್ನು ನೂರಕ್ಕೆ ನೂರರಷ್ಟು ಈಡೇರಿಸಿದೆ. ಅದರಂತೆ ಅಭಿವೃದ್ಧಿಗೂ ಸರ್ಕಾರ ವಿಶೇಷ ಗಮನ ನೀಡಿದ್ದು, ಪ್ರಸಕ್ತ ವರ್ಷ 3 ಲ.ಕೋ ರೂ ಗಳನ್ನು ಆಯವ್ಯಯದಲ್ಲಿ ಕಾಯ್ದಿರಿಸಿದೆ. ಇತ್ತೀಚೆಗೆ ಬೀದರದಲ್ಲಿ 2000 ಕೋ. ರೂಗಳಿಗೂ ಅಧಿಕ ಯೋಜನೆಗಳ ಉದ್ಘಾಟನೆ ಮತ್ತು ಶಂಕು ಸ್ಥಾಪನೆ ನೆರವೇರಿಸಿದೆ.ಕಲಬುರ್ಗಿಯಲ್ಲಿಯೂ ಸಾವಿರಾರು ಕೋ.ರೂಗಳ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡಿದೆ. ನಮ್ಮ ಸರ್ಕಾರ ಪ್ರತಿ ಜಿಲ್ಲೆಗೆ ಕನಿಷ್ಠ 500 ಕೋ.ರೂ ಗಳನ್ನು ಒದಗಿಸಿ

(2ನೇ ಪುಟ ನೋಡಿ)

## ಕೊಲೆಗೆ ಯತ್ನ : ನಾಲ್ವರಿಗೆ 3 ವರ್ಷ ಕಠಿಣ ಶಿಕ್ಷೆ

ಕಲಬುರಗಿ,ಮೇ 15: ಆಳಂದ ತಾಲೂಕಿನ ನರೋಣಾ ಪೊಲೀಸ ಠಾಣೆ ವ್ಯಾಪ್ತಿಯ ಕರಹರಿ ಗ್ರಾಮದಲ್ಲಿ ತೀವ್ರಹಲ್ಲೆ ನಡೆಸಿ,ಕೊಲೆಗೆ ಯತ್ನಿಸಿದ ನಾಲ್ವರಿಗೆ 3ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 3 ವರ್ಷ ಕಠಿಣ ಶಿಕ್ಷೆ ಮತ್ತು ಒಟ್ಟು 82 ಸಾವಿರ ರೂ ದಂಡ ವಿಧಿಸಿದೆ.

ಸಾವಳಗಿ ( ಕೆ) ಗ್ರಾಮದ ಯಶ್ವಂತ್ರಾಯ ಅಂಬಾಜಿ ಕಾಳೆ, ಅಂಬಾಜಿ ಯಶ್ವಂತ್ರಾಯ ಕಾಳೆ,ಅನೀಲಕುಮಾರ ಯಶ್ವಂತ್ರಾಯ ಕಾಳೆ,ಅರುಣಕುಮಾರ ಯಶ್ವಂತ್ರಾಯ ಕಾಳೆ ಶಿಕ್ಷೆಗೊಳಗಾದವರು.ಸಿದ್ದರಾಮ



ಶ್ರೀಮಂತ್ರಾಯ ಮುಲಗೆ,ಶ್ರೀಮಂತ್ರಾಯ ಸಿದ್ರಾಮಪ್ಪಾ ಮುಲಗೆ, ಮತ್ತು ಮಹಾದೇವ ನಾಗಣ್ಣ ಎಂಬುವವರು ಕಮಲನಗರ ಕಡೆ ಹೊರಟಾಗ ಹಣಕಾಸಿನ ವ್ಯವಹಾರ ವೈಮನಸ್ಸಿನಿಂದ ದಾಳಿ ನಡೆದಿತ್ತು. ನರೋಣಾ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿ ಪೊಲೀಸರು ದೋಷಾರೋಪಣ ಪತ್ರ ಸಲ್ಲಿಸಿದ್ದರು.ವಾದ ವಿವಾದಗಳನ್ನು ಆಲಿಸಿದ 3ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಹ್ಮದ ಮುಜೀರ ಉಲ್ಲಾ ಅವರು ತೀರ್ಪು ನೀಡಿದ್ದಾರೆ.ಸರಕಾರದ ಪರವಾಗಿ 3ನೇ ಅಪರ ಸರಕಾರಿ ಅಭಿಯೋಜಕ ಗುರುಲಿಂಗಪ್ಪ ಶ್ರೀಮಂತ ತೇಲಿ ಅವರು ವಾದ ಮಂಡಿಸಿದ್ದರು.

# ಕೃಷಿ ಕ್ಷೇತ್ರದ ಅಭಿವೃದ್ಧಿಯಲ್ಲಿ ವಿಜ್ಞಾನಿಗಳು ಹಾಗೂ ವಿದ್ಯಾರ್ಥಿಗಳ ಪಾತ್ರ ಅತಿಮುಖ್ಯ: ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಮೇ 15:ಕೃಷಿ ಕ್ಷೇತ್ರದ ಅಭಿವೃದ್ಧಿಯಲ್ಲಿ ವಿಜ್ಞಾನಿಗಳುಹಾಗೂವಿದ್ಯಾರ್ಥಿಗಳ ಪಾತ್ರವುಪ್ರಮುಖವಾಗಿದೆಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ತಿಳಿಸಿದರು. ಇಂದು ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿಕೃಷಿವಿಶ್ವವಿದ್ಯಾನಿಲಯ ವತಿಯಿಂದ59ನೇಘಟಿಕೋತ್ಸವ ಸಮಾರಂಭವನ್ನುಉದ್ಘಾಟಿಸಿ ಮಾತನಾಡಿದ ರಾಜ್ಯಪಾಲರು, ನಮ್ಮ ದೇಶವು ಕೃಷಿ ಕ್ಷೇತ್ರದಲ್ಲಿ ತಾಂತ್ರಿಕ ಆವಿಷ್ಕಾರಗಳನ್ನು ಅಳವಡಿಸಿಕೊಳ್ಳುವುದರಲ್ಲಿ ಮುಂಚೂಣಿಯಲ್ಲಿದೆ.ಪ್ರಸ್ತುತಕೃಷಿ ಉತ್ಪಾದನೆಯಲ್ಲಿಬೇಡಿಕೆಯನ್ನು ಪೂರೈಸಲುಹೊಸಆಯ್ಕೆಗಳನ್ನು ಉತ್ತೇಜಿಸುವಅವಶ್ಯಕತೆಯಿದೆ ಎಂದರು.ಭಾರತೀಯ ಕೃಷಿ ಸಂಶೋಧನಾಮಂಡಳಿ ಮತ್ತು ರಾಜ್ಯಕೃಷಿವಿಶ್ವವಿದ್ಯಾಲಯಗಳು ಅಭಿವೃದ್ಧಿಪಡಿಸಿದ ಸುಧಾರಿತ ಬೀಜಗಳು ಮತ್ತು ಸುಧಾರಿತ ತಳಿಗಳು ರೈತರ ಆದಾಯವನ್ನು ಹೆಚ್ಚಿಸುವಲ್ಲಿಸಹಾಯಕವಾಗಿವೆ. ಕೃಷಿಕ್ಷೇತ್ರದಲ್ಲಿಡಿಜಿಟಲ್‌ತಂತ್ರಜ್ಞಾನ ಅಳವಡಿಸಿಕೊಳ್ಳಬೇಕು.ಡ್ರೋನ್ ತಂತ್ರಜ್ಞಾನ,ಉಪಗ್ರಹ ಚಿತ್ರಣ ಮತ್ತು ಸ್ಮಾರ್ಟ್ ನೀರಾವರಿ ವ್ಯವಸ್ಥೆಗಳ ಬಳಕೆಯಿಂದ ಉತ್ಪಾದನೆಯನ್ನುಹೆಚ್ಚಿಸಲು ಮತ್ತು ನೀರಿನ ಬಳಕೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ತಿಳಿಸಿದರು.

ರಾಸಾಯನಿಕ ಗೊಬ್ಬರಗಳು ಮತ್ತುಕೀಟನಾಶಕಗಳಅತಿಯಾದ ಬಳಕೆಯಿಂದ ಮಣ್ಣು,ನೀರು ಮತ್ತು ಆರೋಗ್ಯದ ಮೇಲೆ ವ್ಯತಿರಿಕ್ತಪರಿಣಾಮ ಬೀರುತ್ತದೆ. ಸಾವಯವ ಕೃಷಿ, ನೈಸರ್ಗಿಕ ಕೃಷಿ, ಕಡಿಮೆ ನೀರಿನಿಂದ ಹೆಚ್ಚು ಇಳುವರಿ ಮತ್ತು ಸುರಕ್ಷಿತ ಆಹಾರವನ್ನು ಉತ್ಪಾದಿಸಲು ಪರಿಸರ ಸ್ನೇಹಿ ಕೃಷಿಯಂತಹಕೃಷಿಪದ್ಧತಿಗಳನ್ನು ಉತ್ತೇಜಿಸುವ ಕ್ಷೇತ್ರದಲ್ಲಿ ಕೆಲಸ ಮಾಡಬೇಕಾಗಿದೆ ಎಂದು ತಿಳಿಸಿದರು.ಯುವಜನತೆಯು "ಸ್ಟಾರ್ಟಅಪ್ ಇಂಡಿಯಾ", "ಡಿಜಿಟಲ್ ಇಂಡಿಯಾ", "ಆತ್ಮ ನಿರ್ಭರ್ ಭಾರತ್" ನಂತಹ ಯೋಜನೆಗಳ ಸದುಪಯೋಗಪಡೆದುಕೊಂಡು ಕೃಷಿ ಕ್ಷೇತ್ರ ಅಭಿವೃದ್ಧಿಗೆ ಕಾರಣರಾಗಬೇಕು ಎಂದು ಯುವಜನತೆಗೆ ಕರೆ ನೀಡಿದರು.



ಕೃಷಿವಿಜ್ಞಾನವಿಶ್ವವಿದ್ಯಾನಿಲಯವು ಸಂಶೋಧನೆ,ನಾವೀನ್ಯತೆಮತ್ತು ಜಾಗತಿಕಸಹಯೋಗದಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆಗಳನ್ನು ಮಾಡಿದೆ. ವಿಶ್ವವಿದ್ಯಾನಿಲಯವು ರೈತರ ಕಲ್ಯಾಣ, ಸಮಾಜ ಕಲ್ಯಾಣ,ಸಾರ್ವಜನಿಕ ಹಿತಾಸಕ್ತಿ ಮತ್ತು ದೇಶದ ಕಲ್ಯಾಣಕ್ಕಾಗಿ ಶ್ರಮಿಸಿದ ಮಹಾನ್ ವ್ಯಕ್ತಿಗಳಿಗೆ ಗೌರವ ಪದವಿಗಳನ್ನು ನೀಡಿ ಗೌರವಿಸಿದೆ. ಅವರ ಅತ್ಯುತ್ತಮ ಸಾಧನೆಗಳು,ಕೃಷಿಯಲ್ಲಿಮಹತ್ವದ ಕೊಡುಗೆ, ರೈತರ ಕಲ್ಯಾಣ ಮತ್ತು ದೇಶದ ಪ್ರಗತಿಗಾಗಿ ಅವರನ್ನು ಅಭಿನಂದಿಸುತ್ತಾ, ಸಮಾಜಕ್ಕಾಗಿ ಅವರ ಸೇವೆ ನಿರಂತರವಾಗಿರಲಿ ಎಂದು ತಮ್ಮ ಆಶಯವನ್ನುವ್ಯಕ್ತಪಡಿಸಿದರು.

ಕೃಷಿ ಸಚಿವರು ಹಾಗೂ ಕೃಷಿ ವಿಶ್ವವಿದ್ಯಾನಿಲಯದಸಹಕುಲಾಧಿಪತಿ ಎನ್. ಚೆಲುವರಾಯಸ್ವಾಮಿ ಮಾತನಾಡಿ, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು 1960ರ ದಶಕದಿಂದಗುಣಮಟ್ಟದಶಿಕ್ಷಣದ ಜೊತೆಗೆಸಂಶೋಧನೆ ಹಾಗೂ ವಿಸ್ತರಣೆಯಲ್ಲಿ ದೇಶದಲ್ಲೇ ಮುಂಚೂಣಿಯಲ್ಲಿದೆ.ರಾಜ್ಯದ ಕೃಷಿ ಕ್ಷೇತ್ರದಲ್ಲಿ ಹಸಿರು ಕ್ರಾಂತಿ ಮೂಲಕ ಆಹಾರ ಧಾನ್ಯಗಳ ಉತ್ಪಾದನೆಯಲ್ಲಿನ ಸುಸ್ಥಿರತೆಗೆ ನಾಂದಿ ಹಾಡಿದೆ. ವಿಶ್ವವಿದ್ಯಾನಿಲಯವು ದೇಶದ ಕೃಷಿ ಇತಿಹಾಸದಲ್ಲಿ ಹಲವಾರು ಮೈಲುಗಲ್ಲು ದಾಖಲಿಸಿದ್ದು, ಸುಧಾರಿತ ಸಮಗ್ರ ಕೃಷಿ ಪದ್ಧತಿಗಳು,ಉತ್ತಮ ತಳಿಗಳು, ಒಣಬೇಸಾಯ ತಾಂತ್ರಿಕತೆಗಳು, ಸುಸ್ಥಿರ ನೀರು,ಪೋಷಕಾಂಶ, ಕಳೆ, ರೋಗ ಹಾಗೂ ಕೀಟ ನಿರ್ವಹಣಾ ಪದ್ಧತಿಗಳು, ಕೃಷಿ ಯಾಂತ್ರೀಕರಣ, ಪರ್ಯಾಯ ಭೂ ಬಳಕೆ ಹಾಗೂ ಭೂಸುಧಾರಣಾ ಕ್ರಮಗಳಿಂದಕೃಷಿಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸಲು ಸಹಕಾರಿಯಾಗಿದೆ ಎಂದು ತಿಳಿಸಿದರು.ಶಿಕ್ಷಣ ಕ್ಷೇತ್ರದಲ್ಲಿ ವಿಶ್ವವಿದ್ಯಾನಿಲಯವುದೇಶದಲ್ಲೇ ಮುಂಚೂಣಿಯಲ್ಲಿದ್ದು,ಕಳೆದ10 ವರ್ಷಗಳಲ್ಲಿವಿಶ್ವವಿದ್ಯಾನಿಲಯವು ಕಿರಿಯ ಸಂಶೋಧನಾರ್ಥಿ ಪರೀಕ್ಷೆಗಳಲ್ಲಿ ನಿರಂತರವಾಗಿ ಮೊದಲನೆಯ ಅಥವಾ ಎರಡನೆಯ ಸ್ಥಾನವನ್ನು ಪಡೆದುಕೊಳ್ಳುತ್ತಿದೆ ಎಂದು ಹೆಮ್ಮೆಪಟ್ಟರು.

ರಾಜ್ಯದಲ್ಲಿ ಪ್ರಸ್ತುತ ಕೃಷಿ ಕ್ಷೇತ್ರವು ಅನೇಕ ಸವಾಲುಗಳನ್ನು ಎದುರಿಸುತ್ತಿದ್ದು, ಅವುಗಳಲ್ಲಿ ಹವಾಮಾನ ವೈಪರೀತ್ಯದಿಂದ ಮಳೆಯ ಹಂಚಿಕೆಯಲ್ಲಿ ಬದಲಾವಣೆ, ತಾಪಮಾನದ ಏರಿಕೆ,ಉಷ್ಣಮಾರುತದಹಾವಳಿ, ಮಣ್ಣಿನ ಆರೋಗ್ಯದಲ್ಲಿನ ವ್ಯತ್ಯಯ,ಬೆಳೆಗಳಲ್ಲಿಹೆಚ್ಚುತ್ತಿರುವ ರೋಗ ಮತ್ತು ಪೀಡೆ ಭಾದೆ, ಕೂಲಿ ಕಾರ್ಮಿಕರ ಸಮಸ್ಯೆ, ಮಾರುಕಟ್ಟೆ ಸಂಬಂಧಿತ ಸಮಸ್ಯೆಗಳು ಕೃಷಿಕರನ್ನು ಸಂಕಷ್ಟಕ್ಕೆ ದೂಡಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಮಣ್ಣಿನ ಆರೋಗ್ಯ ಸುಧಾರಣೆ, ಹವಾಮಾನ ಚತುರ ತಳಿಗಳ ಅಭಿವೃದ್ಧಿ,ಗುಣಮಟ್ಟದ ಬೀಜ ಉತ್ಪಾದನೆಯಲ್ಲಿಸ್ವಾವಲಂಬನೆ ಮತ್ತು ರಾಸಾಯನಿಕ ಮುಕ್ತ ಪರಿಕರಗಳಿಗೆ ಮಹತ್ವ ನೀಡಬೇಕಿದ್ದು, ಈ ದಿಸೆಯಲ್ಲಿ ರಾಜ್ಯದ ಉತ್ಪಾದನೆ ಹೆಚ್ಚಿಸಲು ಹನಿ ನೀರಾವರಿ ಯೋಜನೆಗೆ ಕಳೆದ ಎರಡು ವರ್ಷದಲ್ಲಿ 1075 ಕೋಟಿ ರೂಪಾಯಿ ಸಹಾಯಧನ ನೀಡಲಾಗಿದೆ.


ಒಂದನೇ ಪುಟದಿಂದ


## 4.40 ಲಕ್ಷ ರೂ.ನಗನಾಣ್ಯ ಜಪ್ತಿ

ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.

ನಗರದ ಪೊಲೀಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ತಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಮಳಖೇಡ ರಸ್ತೆಯಲ್ಲಿರುವ ಮಹಮ್ಮದ್ ಸಮೀಯೋದ್ದೀನ್ ಮಹ್ಮದ ಫಾರುಕ್ ಸಾ.ದಂಡೋತಿ ಅವರ ಹಾರ್ಡವೇರ್ ಅಂಗಡಿ ಶೆಟರ್ ಮುರಿದು ಕಳ್ಳರು ನಗದು ಹಣ ಕಳವು ಮಾಡಿಕೊಂಡು ಹೋಗಿದ್ದರು. ಈ ಸಂಬಂಧ ಅವರು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಆರೋಪಿಗಳ ಪತ್ತೆಗೆ ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ, ಚಿತ್ತಾಪುರ ಸಿಪಿಐ ಚಂದ್ರಶೇಖರ ತಿಗಡಿ ಅವರ ಮಾರ್ಗದರ್ಶನದಲ್ಲಿ ಪಿಎಸ್‌ಐಗಳಾದ ಶ್ರೀಶೈಲ್ ಎಸ್.ಅಂಬಾಟಿ, ಚಂದ್ರಾಮಪ್ಪ, ಸಿಬ್ಬಂದಿಗಳಾದ ಬಸವರಾಜ, ದತ್ತಾತ್ರೇಯ, ಸವಿಕುಮಾರ, ರವಿಕುಮಾರ, ಮಂಜುನಾಥ, ಸಿದ್ದರಾಮೇಶ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು.

ಈ ತಂಡ ತನಿಖೆ ನಡೆಸಿ ನಾಲವಾರ ಗ್ರಾಮದ ಸಿದ್ದಿಕ್ ತಂದೆ ಅಹಮ್ಮದ್ ಚಾವುಸ್ ಮತ್ತು ಉಬೇದ ತಂದೆ ಮಹಮ್ಮದ್ ಚಾವುಸ್ ಎಂಬುವವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತ್ತು. ಇನ್ನೊಬ್ಬ ಆರೋಪಿ ನಿಜಾಮಘಾಟನ ಶೇಖಪಾಶಾ ತಂದೆ ಖಾಜಾ ಮೈನೊದ್ದೀನ್ ಕಳೆದ 11 ತಿಂಗಳಿಂದ ತಲೆ ಮರೆಸಿಕೊಂಡಿದ್ದ. ಆರೋಪಿ ವಾಡಿ ರೈಲ್ವೆ ನಿಲ್ದಾಣ ಹತ್ತಿರ ಇರುವ ಬಗ್ಗೆ ಖಚಿತ ಮಾಹಿತಿ ಹಿನ್ನೆಲೆಯಲ್ಲಿ ತಂಡ ಅಲ್ಲಿಗೆ ಧಾವಿಸಿ ಆರೋಪಿ ಶೇಖಪಾಶಾನನ್ನು ಬಂಧಿಸಿ 4.40 ಲಕ್ಷ ರೂ.ಮೌಲ್ಯದ ಬೆಳ್ಳಿ, ಬಂಗಾರ ಮತ್ತು ನಗದು ಹಣ ವಶ ಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಕಳೆದ 11 ತಿಂಗಳಿಂದ ತಲೆ ಮರೆಸಿಕೊಂಡಿದ್ದ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ, ಚಿತ್ತಾಪುರ ಸಿಪಿಐ ಚಂದ್ರಶೇಖರ ತಿಗಡಿ, ಪಿಎಸ್‌ಐಗಳಾದ ಶ್ರೀಶೈಲ್ ಎಸ್.ಅಂಬಾಟಿ, ಚಂದ್ರಾಮಪ್ಪ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಪರದಾಡಿದ ಸಾರ್ವಜನಿಕರು,ಅಧಿಕಾರಿಗಳು

ಕಚೇರಿಗೆ ತೆರಳಿದ ಸಾರ್ವಜನಿಕರು ತಾಲೂಕು ಪಂಚಾಯತ ಕಚೇರಿಯ ಅವಸ್ಥೆ ನೋಡುತ್ತ ಇದು ಕಚೇರಿಯೋ ಅಥವಾ ಕೆರೆಯೊ ಅನ್ನುವಂತೆ ಮಾತನಾಡುತ್ತಿದ್ದರು.ತಾಲೂಕಿನ ಎಲ್ಲಾ ಹಳ್ಳಿಗಳಿಗೆ ಸಮರ್ಪಕ ಮೂಲಭೂತ ಸೌಕರ್ಯ ಒದಗಿಸುವ ತಾಲೂಕು ಪಂಚಾಯತ ಕಚೇರಿಯ ಸ್ಥಿತಿ ಹೀಗಾದರೆ ಹಳ್ಳಿಗಳ ಸ್ಥಿತಿ ಏನು? ಎನ್ನುವುದು ಸಾರ್ವಜನಿಕ ವಲಯದಲ್ಲಿ ಚರ್ಚೆಗಳು ನಡೆಯುತ್ತಿವೆ.ಕಚೇರಿಯ ಆವರಣದಲ್ಲಿ ಕಾಲಿಡಲು ಜಾಗವಿಲ್ಲದಂತೆ ಸಂಪೂರ್ಣವಾಗಿ ನೀರು ನಿಂತಿದ್ದು,ಅದನ್ನು ತೆರವುಗೊಳಿಸುವ ಕಾರ್ಯಕ್ಕೂ ಯಾರು ಮುಂದಾಗದೆ ಇರುವುದು ದುರದೃಷ್ಟಕರ. ಪಕ್ಕದಲ್ಲೆ ಪುರಸಭೆ ಕಚೇರಿಯೂ ಸಹ ಇರುವುದರಿಂದ ಸಾರ್ವಜನಿಕರಿಗೆ ಬಹಳಷ್ಟು ತೊಂದ–ರೆಯಾಗುತ್ತಿದೆ.ತೊಂದರೆಯನ್ನು ಆಲಿಸಿಯಾದರೂ ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಾರಾ ಕಾದು ನೋಡಬೇಕು.

## ಮಧ್ಯಸ್ಥಿಕೆ ವಹಿಸಿಲ್ಲ:ಟ್ರಂಪ್ ಯೂಟರ್ನ್

ವಾಯುನೆಲೆಗಳ ಮೇಲೆ ದಾಳಿ ಮಾಡುವ ಮೂಲಕ ಭಾರತ ಪ್ರತೀಕಾರ ತೀರಿಸಿಕೊಂಡ ನಂತರ ಪಾಕಿಸ್ತಾನ ಕದನ ವಿರಾಮಕ್ಕೆ ಮುಂದಾಗಿತ್ತು.

ಮೇ 13 ರಂದು, ಟ್ರಂಪ್ ಭಾರತ ಮತ್ತು ಪಾಕಿಸ್ತಾನ ಒಟ್ಟಿಗೆ ಉತ್ತಮ ಭೋಜನ ಮಾಡಬಹುದು ಎಂದು ಹೇಳಿದ್ದರು. ಆದರೆ ಅವರ ಆಡಳಿತವು ವ್ಯಾಪಾರದ ಮೂಲಕ ಉಭಯ ದೇಶಗಳ ನಡುವೆ ಐತಿಹಾಸಿಕ ಕದನ ವಿರಾಮವನ್ನು ಮಧ್ಯಸ್ಥಿಕೆ ವಹಿಸಿದೆ ಎಂದು ಹೇಳಿದರು. ಉಭಯ ದೇಶಗಳು ನಿಜವಾಗಿಯೂ ಚೆನ್ನಾಗಿ ಹೊಂದಿಕೊಳ್ಳುತ್ತಿದ್ದಾರೆ ಎಂದು ಟ್ರಂಪ್ ಅವರು ಪಶ್ಚಿಮ ಏಷ್ಯಾದ ರಾಷ್ಟ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸೌದಿ ಅರೇಬಿಯಾ–ಯುಎಸ್ ಹೂಡಿಕೆ ವೇದಿಕೆ 2025ರಲ್ಲಿ ಹೇಳಿದ್ದಾರೆ.

## ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ :ಸಚಿವ ರಹೀಂ ಖಾನ್

ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದೆ ಎಂದು ಹೇಳಿದರು.ಬಿ –ಖಾತಾ ವಿತರಣೆಗೆ ಹೊಸ ಆದೇಶ ಶೀಘ್ರ:

ರಾಜ್ಯದ ಮಹಾನಗರ ಪಾಲಿಕೆ ಹಾಗೂ ನಗರಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತ ಬಡಾವಣೆ ಮತ್ತು ಮನೆ ನಿವೇಶನ ಹೊಂದಿದವರಿಗೆ

ಸರ್ಕಾರವು ಬಿ ಖಾತಾ ವಿತರಣೆಗೆ ಸಂಬಂಧಿಸಿದಂತೆ ಈಗಾಗಲೇ ಮುಂದಿನ ಮೂರು ತಿಂಗಳ ಕಾಲಾವಕಾಶ ನೀಡಿ ಆದೇಶಿಸಿದೆ ಎಂದು ತಿಳಿಸಿದ ಸಚಿವ ರಹೀಂ ಖಾನ್ ಅವರು ಮುಂಬರುವ 15 ದಿನಗಳಲ್ಲಿ ಈ ಕುರಿತು ಹೊಸ ಆದೇಶ ಹೊರಬೀಳಲಿದೆ ಎಂದು ಹೇಳಿದರು.

ಈಗಾಗಲೇ ಇರುವ ನಿಯಮಾವಳಿಯಂತೆ ರಜಿಸ್ಟಾರ್ ಕಚೇರಿಯಲ್ಲಿ ನೋಂದಣಿಯಾದ ಆಸ್ತಿಗಳಿಗೆ ಮಾತ್ರ ಬಿ–ಖಾತಾ ನೀಡಲಾಗುತ್ತಿದೆ.ಸಾರ್ವಜನಿಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ವಿದ್ಯುತ್ ಬಿಲ್ ಪಾವತಿ ಆಧಾರ,ನೋಟರಿ ಸೇರಿದಂತೆ ಇನ್ನಿತರ ಆಧಾರದ ಮೇಲೆ ಒಂದೇ ಅವಧಿಯಲ್ಲಿ ಸಮಸ್ಯೆ ಪರಿಹರಿಸಲು ನೂತನ ಸರ್ಕಾರಿ ಆದೇಶವನ್ನು ಮುಂಬರುವ 15 ದಿನಗಳಲ್ಲಿ ಹೊರಡಿಸಲಾಗುವುದು ಎಂದು ಸಚಿವರು ಹೇಳಿದರು.

ಸಭೆಯಲ್ಲಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ನಗರಸಭೆ ಅಧ್ಯಕ್ಷ ಲಲಿತಾ ಅನಪುರ, ಜಿಲ್ಲಾಧಿಕಾರಿ ಡಾ.ಸುಶೀಲ .ಬಿ,ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸರಿಯಾದ ನಿಲುವು ಪ್ರಕಟಿಸಲಿ: ಆರ್.ಅಶೋಕ್

ಸಚಿವರು ಈಗಾಗಲೇ ಹೇಳಿದ್ದಾರೆ. ಆದರೂ ಕಾಂಗ್ರೆಸ್‌ನವರು ಮೊಸರಲ್ಲಿ ಕಲ್ಲು ಹುಡುಕುತ್ತಿದ್ದಾರೆ. ಮೊದಲು ಯುದ್ಧ ಬೇಡ, ಶಾಂತಿ ಬೇಕು ಎಂದವರು ನಂತರ ಯುದ್ಧ ಮಾಡಿ ಎಂದರು.

ಮುಖ್ಯಮಂತ್ರಿಸಿದ್ದರಾಮಯ್ಯ,ಡಿ.ಕೆ.ಶಿವಕುಮಾರ್,ಮಲ್ಲಿಕಾರ್ಜುನ ಖರ್ಗೆ ಕದನ ವಿರಾಮವನ್ನು ಸ್ವಾಗತಿಸಿದ್ದಾರೆ. ಆದರೆ ಅದೇ ಕಾಂಗ್ರೆಸ್‌ನಲ್ಲಿ ಹಲವರು ಯುದ್ಧ ಮುಂದುವರಿಸಬೇಕಿತ್ತು ಎಂದಿದ್ದಾರೆ. ಕಾಂಗ್ರೆಸ್‌ನಲ್ಲೇ ಅನೇಕ ಗುಂಪುಗಳಿದ್ದು, ಒಬ್ಬೊಬ್ಬರು ಒಂದೊಂದು ಅಭಿಪ್ರಾಯ ಹೇಳುತ್ತಾರೆ. ಜೈರಾಮ್ ರಮೇಶ್ ಅವರು ಎಚ್ಚರಿಕೆ ನೀಡಿದ ನಂತರವೂ ಎಲ್ಲರೂ ವಿರುದ್ಧ ಹೇಳಿಕೆ ನೀಡುತ್ತಾರೆ ಎಂದು ದೂರಿದರು.

ಎಐಸಿಸಿಯಲ್ಲಿ ಯುದ್ಧದ ಕುರಿತು ಸರಿಯಾದ ನಿಲುವು ಪ್ರಕಟ ಮಾಡಲಿ. ಯುದ್ಧ ಬೇಕೆ, ಶಾಂತಿ ಬೇಕೆ, ಸಂಧಾನ ಬೇಕೆ ಎಂಬುದನ್ನು ಸರಿಯಾಗಿ ತಿಳಿಸಲಿ. ಆ ನಂತರ ಅಧಿವೇಶನದ ಬಗ್ಗೆ ಮಾತಾಡಲಿ. ಯೋಧರು ಈಗಲೂ ಭಯೋತ್ಪಾದಕರನ್ನು ಹುಡುಕಿ ಕೊಲ್ಲುತ್ತಿದ್ದಾರೆ. ಅಂತಹ ಯೋಧರ ಬಗ್ಗೆ ಎಲ್ಲರೂ ನಂಬಿಕೆ ಇರಿಸಬೇಕು. ಕಾಶ್ಮೀರದಲ್ಲಿ ಕಾಂಗ್ರೆಸ್ ಮಿತ್ರಪಕ್ಷಗಳ ಆಡಳಿತವಿದೆ. ಆ ಸರ್ಕಾರವನ್ನು ಇವರು ಎಂದಿಗೂ ಪ್ರಶ್ನಿಸುವುದಿಲ್ಲ. ಇಂತಹ ಸಮಯದಲ್ಲಿ ರಾಜಕೀಯ ಮಾಡಬಾರದು ಎಂದರು.

# ಭಕ್ತರ ಹೃದಯದೊಳಗೆ ಬುಡ್ಡಮ್ಮ ದೇವಿ ಅದಾಳ ಅನ್ನುವುದಕ್ಕೆ ಇದೊಂದು ನಿದರ್ಶನ ಜಾತ್ರೆ : ಗವಿಶ್ರೀ





ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:ಮೇ.15: ನಿಮ್ಮ ಭಕ್ತಿ ನಿಮ್ಮ ಭಾವ ನಿಮ್ಮ ಶ್ರದ್ಧೆ ಸದಾ ನಿಮ್ಮ ಸತ್ತ ಮನಸ್ಸು ನೋಡಿದರೆ ಅಮ್ಮ ಬುಡ್ಡಮ್ಮ ದೇವಿ ನಿಮ್ಮ ಹೃದಯದೊಳಗೆ ಅನ್ನುವುದಕ್ಕೆ ಇದೊಂದು ನಿದರ್ಶನ ಜಾತ್ರೆ ವರ್ಷದಿಂದ ವರ್ಷಕ್ಕೆ ಬೆಳಿತಾ ಇದೆ ಬೆಳೆಯಲಿ ಅಮ್ಮನ ಕೃಪ ಸದಾ ನಿಮ್ಮೆಲ್ಲರ ಮೇಲೆ ಇರಲಿ ಎಂದು ಕೊಪ್ಪಳದ ಪರಮ ಪೂಜ್ಯ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಹಾರೈಸಿದರು

ತಾಲೂಕಿನ ಮೈನಹಳ್ಳಿ ಗ್ರಾಮದ ಆರಾಧ್ಯ ದೇವತೆ ಶ್ರೀ ಶಿವಶರಣೆ ಬುಡ್ಡಮ್ಮ ದೇವಿ ಜಾತ್ರಾಮಹೋತ್ಸವ ಅಂಗವಾಗಿ ಗುರುವಾರ ಸಾಯಂಕಾಲ 6:00 ಗಂಟೆಗೆ ಸಾವಿರಾರು ಭಕ್ತ ಸಮೂಹದ ನಡುವೆ ಭಕ್ತಿ ಭಾವದಿಂದ

ಮಹಾ ರಥೋತ್ಸವ ಅದ್ದೂರಿಯಾಗಿ ಜರುಗಿತು. ಬೆಳಗ್ಗೆಯಿಂದ ರಥೋತ್ಸವಕ್ಕೆ ಭಕ್ತ ಸಮೂಹ ವಿಶೇಷ ಹೂವಿನ ಹಾರ,ಹಣ್ಣು, ಬಾಳೆದಿಂಡು, ಮಾವಿನ ಎಲೆಗಳಿಂದ ಶೃಂಗೀರಿಸಿದರು

ಬುಡ್ಡಮ್ಮ ದೇವಿ ಮನೆಯಿಂದ ಮೂರ್ತಿಯನ್ನು ಡೊಳ್ಳು ಭಜನೆ ಮೆರವಣಿಗೆ ಮುಖಾಂತರ ಗ್ರಾಮದ ಮುಖ್ಯ ಬೀದಿಗಳಲ್ಲಿ ವಾದ್ಯ ಮೇಳದೊಂದಿಗೆ ದೇವಸ್ಥಾನಕ್ಕೆ ಆಗಮಿಸಿ ರಥೋತ್ಸವಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಲಾಯಿತು

ಬುಡ್ಡಮ್ಮ ದೇವಿ ಮೂರ್ತಿಗೆ ಅಭಿಷೇಕ ವಿಶೇಷ ಪೂಜೆ ನೆರವೇರಿತು ಗ್ರಾಮೀಣ ಭಾಗದ ಸುತ್ತಮುತ್ತಲಿನ ಹಳ್ಳಿಗಳ ಭಕ್ತರು ಬಿಕನಹಳ್ಳಿ ಹಂದ್ರಾಳ,ಅಳವಂಡಿ, ಹಲಗೇರಿ,ಹಾಗೂ ಜಿಲ್ಲೆಗಳಿಂದ ಆಗಮಿಸಿ ಭಕ್ತರು ದೇವಿಯ ದರ್ಶನ ಪಡೆದುಕೊಂಡು ಪುನೀತರಾದರು

ಮಹಾ ರಥೋತ್ಸವ ಜರಗುವ ಸಮಯದಲ್ಲಿ ಭಕ್ತರು ಭಕ್ತಿ, ಭಾವದಿಂದ ರಥೋತ್ಸವಕ್ಕೆ ಉತ್ತತ್ತಿ, ಹಣ್ಣು, ಹೂಗಳನ್ನು ಎಸೆದು ಹರಕೆ ತೀರಿಸಿದರು. ಪಟಾಕ್ಷಿ (ಧ್ವಜ) ಲೀಲಾವೊ ನಡೆಯಿತು ರಥೋತ್ಸವವು ಪಾದಗಟ್ಟಿವರೆಗೂ ತಲುಪಿ ನಂತರ ವಾಪಸು ಬಂದಾಗ ಭಕ್ತರ ಬುಡ್ಡಮ್ಮ ದೇವಿ ಮಹಾರಾಜಕೀ ಜೈ ಎಂದು ಘೋಷಣೆ ಕೂಗುತ್ತಾ ಭಕ್ತಿ ಸಮರ್ಪಿಸಿದರು ಭಕ್ತರಿಗೆ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು.

ದಿವ್ಯ ಸಾನಿಧ್ಯವನ್ನು ಶ್ರೀ ಮ.ನಿ.ಪ್ರಸ್ವಜ, ಗವಿಸಿದ್ಧೇಶ್ವರ ಮಹಾಸ್ವಾಮಿಗಳು ಸಂಸ್ಥಾನ ಶ್ರೀ ಗವಿಮಠ ಕೊಪ್ಪಳ ಶ್ರೀ ಮ.ನಿ.ಪ್ರ.ಸ್ವ ಚಿದಾನಂದ ಮಹಾಸ್ವಾಮಿಗಳು ,ಶ್ರೀ ಷ.ಬ್ರ ಮರುಳಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಶ್ರೀ ಷ.ಬ್ರ ಶ್ರೀ ಮ.ನಿ.ಪ್ರಡಾ। ಹಿರಿಶಾಂತವೀರ ಸ್ವಾಮಿಗಳು ಶ್ರೀಮ.ನಿ.ಪ್ರ.ಅಭಿನವ ಒಪ್ಪತ್ತೇಶ್ವರ ಮಹಾಸ್ವಾಮಿಗಳು ಶ್ರೀ ಪ.ಪೂ.ಶೋ.ಬ್ರ ಅತ್ಯಾನಂದ ಭಾರತಿ ಸ್ವಾಮಿಗಳು ಶ್ರೀ ಪಟ್ಟದ ದೇವರು ಚಿನ್ಮಯಸ್ವಾಮಿಗಳು ಗೋಣಿಬಸವೇಶ್ವರ ,ಶ್ರೀ ಮ.ಘ.ಚ. ಮೃತ್ಯುಂಜಯ ಶಿವಾಚಾರ್ಯ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿಕೊಂಡಿದ್ದರು

ಪ್ರತಿ ವರ್ಷದಂತೆ ಈ ವರ್ಷವು ಬೆಳಿಗ್ಗೆ 08 ಗಂಟೆಯಿಂದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಇವರಿಂದ ರಕ್ತದಾನ ಶಿಬಿರ ನಡೆಯಿತು. ರಕ್ತದಾನಿಗಳು ಈ ಶಿಬಿರದಲ್ಲಿ ರಕ್ತದಾನ ಮಾಡಿದ್ದಾರೆ. ಶ್ರೀ ಶಿವಶರಣೆ ಬುಡ್ಡಮ್ಮ ದೇವಿ ನಾಟ್ಯ ಸಂಘದಿಂದ ರಾತ್ರಿ 10.30 ಕ್ಕೆ ಧನಿಕರ ದೌರ್ಜನ್ಯ ಎಂಬ ಸುಂದರ ಸಾಮಾಜಿಕ ನಾಟಕ ಮೈನಹಳ್ಳಿ ಗ್ರಾಮದಲ್ಲಿ ಅಭಿನಯಿಸಿದರು

ಜನಪ್ರತಿನಿಧಿಗಳು ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಸರ್ವ ಸದಸ್ಯರು , ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಗ್ರಾಮದ ಗುರು–ಹಿರಿಯರು ಹಾಗೂ ಯುವಕ ಮಿತ್ರರು ಸೇರಿದಂತೆ ಸಕಲ ಸದ್ಭಕ್ತ ಮಂಡಳಿ ಭಾಗವಹಿಸಿದ್ದರು

# 10ನೇ ತರಗತಿ ಸಿಬಿಎಸ್‌ಇ ಪರೀಕ್ಷೆ :

## ಗುರು ನಾನಕ ಪಬ್ಲಿಕ್ ಶಾಲೆಗೆ ಉತ್ತಮ ಫಲಿತಾಂಶ : 86 ಅಗ್ರಶ್ರೇಣಿ













ಮಲ್ಲಮ್ಮ ನುಡಿ ವಾರ್ತೆ ಬೀದರ, ಮೇ,15: 10ನೇ ತರಗತಿ (ಸಿಬಿಎಸ್‌ಇ) ಫಲಿತಾಂಶ ಪ್ರಕಟಗೊಂಡಿದ್ದು, ನಗರದ ನೇಹರು ಸ್ಟೇಡಿಯಂ ಹತ್ತಿರವಿರುವ ಗುರು ನಾನಕ ಪಬ್ಲಿಕ್ ಶಾಲೆಯೂ ಉತ್ತಮ ಫಲಿತಾಂಶ ಪಡೆದಿದೆ.

86 ಅಗ್ರಶ್ರೇಣಿ, 120 ಪ್ರಥಮ ದರ್ಜೆ, 56 ದ್ವಿತೀಯ ದರ್ಜೆ ಮತ್ತು 43 ತೃತೀಯ ಶ್ರೇಣಿಯಲ್ಲಿ ಪಾಸಾಗಿ ಗಮನ ಸೆಳೆದಿದ್ದಾರೆ.

90% ಕ್ಕಿಂತ ಮೇಲ್ಪಟ್ಟ ವಿದ್ಯಾರ್ಥಿಗಳು :

ಪ್ರತೀಕ್ ಬಿರಾದಾರ 93.20%, ಎಂ.ಪ್ರಜ್ವಲ್ 92.60%, ವೈಷ್ಣವಿ 92.20%, ಭಾವನಾ ಸ್ವಾಮಿ 91.80%, ಆಶನಾ ಫಾತೀಮಾ 91.00%, ಅರನಾವ ಗಾದಗಿ 90.80%, ಫರಹಾನ್ ಖಾನ್ 90.40%, ಸಮರ್ಥ ಉಪ್ಪಿನ್ 90.40%,ಗುರುಪ್ರಸಾದ 90.40%, ಸಾದಿಯಾ ಅಹ್ಮದ 90.40%, ನಿಧಿ ಬಿರಾದಾರ 90.00% ಅಂಕ ಪಡೆದು ಶಾಲೆ ಮತ್ತು ಪೋಷಕರಿಗೆ ಕೀರ್ತಿ ತಂದಿದ್ದಾರೆ. ಗುರು ನಾನಕ ಪಬ್ಲಿಕ್ ಶಾಲೆ ಜಿಲ್ಲೆಯಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಹೆಸರಾಗಿದೆ. 10ನೇ ತರಗತಿ (ಸಿಬಿಎಸ್‌ಇ) ಪರೀಕ್ಷೆಯಲ್ಲಿ ಪ್ರತಿ ವರ್ಷವೂ ಅದ್ಭುತ ಫಲಿತಾಂಶ ಪಡೆದು ಗಮನ ಸೆಳೆಯುತ್ತಲೆ ಇದೆ. ಪರೀಕ್ಷೆಗೆ ಕುಳಿತ ಎಲ್ಲಾ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಅಗ್ರಶ್ರೇಣಿ ಮತ್ತು ಪ್ರಥಮ ಶ್ರೇಣಿಯಲ್ಲಿಯೇ ಪಾಸಾಗಿರುವುದು ಶಾಲೆಯ ಗುಣಮಟ್ಟಕ್ಕೆ ಹಿಡಿದ ಕೈಗನ್ನಡಿಯಾಗಿದೆ.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದೆ ನಮ್ಮ ಸಂಸ್ಥೆಯ ಗುರಿಯಾಗಿದೆ. ಈ ಬಾರಿಯ ಫಲಿತಾಂಶ ಇದರ ಫಲಶ್ರುತಿಯೇ ಆಗಿದೆ ಎಂದು ಗುರು ನಾನಕ ಪಬ್ಲಿಕ್ ಶಾಲೆಯ ಅಧ್ಯಕ್ಷರಾದ ಡಾ॥ ಸರದಾರ ಬಲಬೀರಸಿಂಗ್ ಮತ್ತು ಉಪಾಧ್ಯಕ್ಷೆ ಶ್ರೀಮತಿ ರೇಷ್ಮಾ ಕೌರ ಅವರು ತಿಳಿಸಿದ್ದಾರೆ. ಅತ್ಯುತ್ತಮ ಫಲಿತಾಂಶ ಪಡೆದ ಮಕ್ಕಳಿಗೆ ಅಭಿನಂದಿಸಿರುವ ಅವರು ಶಾಲಾ ಪ್ರಾಚಾರ್ಯರು ಹಾಗೂ ಸಿಬ್ಬಂದಿಯ ಶ್ರಮವನ್ನು ಪ್ರಶಂಶಿಸಿದ್ದಾರೆ.

ಕರ್ನಾಟಕ ಸರ್ಕಾರ
(ಸಹಕಾರ ಇಲಾಖೆ)
ಸಹಕಾರ ಸಂಘಗಳ ಉಪ ನಿಬಂಧಕರು(ನಿ.,441) ಸೌಹಾರ್ದ ಸಹಕಾರಿಗಳ ದಾವಾ ಪಂಚಾಯ್ತಿ ನ್ಯಾಯಾಲಯ,
ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು
"ಸೌಹಾರ್ದ ಸಹಕಾರಿ ಸೌಧ" #68, 1ನೇ ಮಹಡಿ 17&18ನೇ ಅಡ್ಡ ರಸ್ತೆ ಮಧ್ಯೆ, ಮಾರ್ಗೋಸಾ ರಸ್ತೆ ಮಲ್ಲೇಶ್ವರಂ ಬೆಂಗಳೂರು-560055

**ವಾದಿ:**
**ಮುಖ್ಯ ಕಾರ್ಯನಿರ್ವಾಹಕರು,**
ಚಿಟಗುಪ್ಪ ಪತ್ತಿನ ಸೌಹಾರ್ದ ಸಹಕಾರಿ ನಿ.
ಗಣೇಶ ಮಂದಿರ, ಆರ್ಯ ಸಮಾಜ ಎದುರಗಡೆ,
ಚಿಟಗುಪ್ಪಾ – 585412. ಜಿ: ಬೀದರ

**ಪ್ರತಿವಾದಿಗಳು:-**
**ವ್ಯಾಜ್ಯ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ.,/672/2024-25**
**2. ಶ್ರೀ ಗಂಗಾಧರ ಎಮ್ ಮದಕುಂಟಿ**
ವಾ: ನೇಕಾರ ಕಾಲೋನಿ, ಕೂಡಂಬಲ್ ರೋಡ್, ಚಿಟಗುಪ್ಪಾ, ಮು: ಚಿಟಗುಪ್ಪಾ ಜಿ: ಬೀದರ
ವ್ಯಾಜ್ಯ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ./954/2024-25
**1. ಶ್ರೀ ಮಹೇಶ ತಂದೆ ಲಕ್ಷ್ಮಣರಾವ್ ಚವ್ಹಾಣ**
ವಾ: ಭವಾನಿ ಮಂದಿರ, ಚಿಟಗುಪ್ಪಾ, ಮು: ಚಿಟಗುಪ್ಪಾ ಜಿ: ಬೀದರ- 585412
**ವ್ಯಾಜ್ಯ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ.,/955/2024-25**
**1. ಶ್ರೀ ವೀರಣ್ಣಾ ತಂದೆ ಭೀಮಣ್ಣಾ ಅಡರಂಗಿ**
ಮಹಾದೇವಿ ಕಾಲೋನಿ, ಚಿಟಗುಪ್ಪಾ, ಮು: ಚಿಟಗುಪ್ಪಾ ಜಿ: ಬೀದರ- 585412

**ಪ್ರತಿವಾದಿಗಳಿಗೆ ಪತ್ರಿಕಾ ಪ್ರಕಟಣೆ ಮೂಲಕ ನೋಟೀಸ್**

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಿಮಗೆ ತಿಳಿಯಪಡಿಸುವುದೇನೆಂದರೆ ಈ ಮೇಲ್ಕಂಡ ಪ್ರತಿವಾದಿಗಳ ದಾವಾ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ.,/954,955/2024-25ರಂತೆ ಸಹಕಾರ ಸಂಘಗಳ ಉಪ ನಿಬಂಧಕರು(ನಿ.,441), ಸೌಹಾರ್ದ ಸಹಕಾರಿಗಳ ದಾವಾ ಪಂಚಾಯಿತಿ ನ್ಯಾಯಾಲಯದಲ್ಲಿ ವಾದಿ ಸಹಕಾರಿಯು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ-1997ರ ಕಲಂ-39ರಡಿಯಲ್ಲಿ ಸಾಲ ವಸೂಲಾತಿಗಾಗಿ ದಾವೆ ದಾಖಲ್ಲಿಸಿರುತ್ತದೆ. ಈ ಪ್ರಕರಣದಲ್ಲಿ ತಾವುಗಳು ಪ್ರತಿವಾದಿಯಾಗಿರುತ್ತೀರಿ, ಆದುದರಿಂದ ಈ ಮೂಲಕ ನಿಮಗೆ ತಿಳಿಯಪಡಿಸುವುದೇನೆಂದರೆ ಈ ಮೇಲ್ಕಂಡ ನ್ಯಾಯಾಲಯದ ಮುಂದೆ ದಿನಾಂಕ: 20.06.2025ರಂದು ಬೆಳ್ಳಗೆ: 11-30 ಗಂಟೆಗೆ ಸರಿಯಾಗಿ ತಾವಾಗಲಿ, ತಮ್ಮಿಂದ ನೇಮಕಗೊಂಡ ವಕೀಲರ ಮುಖಾಂತರವಾಗಲಿ ಹಾಜರಾಗಲು ಈ ಮೂಲಕ ತಿಳಿಯಪಡಿಸಿದೆ. ತಪ್ಪಿದಲ್ಲಿ ನಿಮ್ಮ ಗೈರುಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ಇತ್ಯರ್ಥಪಡಿಸಲಾಗುವುದು.
ಸದರಿ ಪ್ರಕಟಣೆಯನ್ನು ದಿನಾಂಕ: 14.05.2025ರಂದು ನ್ಯಾಯಾಲಯದ ಸಹಿ ಮತ್ತು ಮೊಹರಿನೊಂದಿಗೆ ನೀಡಲಾಗಿದೆ.

ಸಹಿ/-
ಸಹಕಾರಿ ಸಂಘಗಳ ಉಪ ನಿಬಂಧಕರು (ನಿ.441)
ದಾವಾ ಪಂಚಾಯ್ತಿ ನ್ಯಾಯಾಲಯ
ಕ.ರಾ.ಸೌ.ಸಂ.ಸ.ನಿ., ಬೆಂಗಳೂರು
(ನ್ಯಾಯಾಲಯದ ಆದೇಶದ ಮೇರೆಗೆ)

# ಮಹರ್ಷಿ ಭಗೀರಥ ಜಯಂತಿ ವೈಭವ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಉಪಾರ ಸಮಾಜದ ವತಿಯಿಂದ ಗುರುವಾರ ಆಯೋಜಿಸಿದ್ದ ಮಹರ್ಷಿ ಭಗೀರಥ ಜಯಂತಿ ಮೆರವಣಿಗೆ ಕಾರ್ಯಕ್ರಮ ವೈಭವದಿಂದ ಜರುಗಿತು.

ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ಮೆರವಣಿಗೆ ನಾಗಣ್ಣ ಕಟ್ಟಿ, ಬಸವೇಶ್ವರ ವೃತ್ತ, ನಗರೇಶ್ವರ ದೇವಸ್ಥಾನ, ಅಗಸೆ (ಬೇಸ್) ಸೇರಿ ಪ್ರಮುಖ ಮಾರ್ಗಗಳ ಮೂಲಕ ಉಪಾರ ಗಲ್ಲಿಯ ಮರಗೇಮ್ಮ ದೇವಸ್ಥಾನದ ವರೆಗೆ ಸಂಭ್ರಮದಿಂದ ಜರುಗಿತು.

ಮೆರವಣಿಗೆ ದಾರಿಯುದ್ದಕ್ಕೂ ಡಿಜೆ ಹಾಡುಗಳಿಗೆ ಪುರಸಭೆ ಸದಸ್ಯರು, ಉಪಾರ ಸಮಾಜದ ಮುಖಂಡರು ಸೇರಿ ಯುವಕ ಯುವಕರು ಕುಣಿದು ಕುಪ್ಪಳಿಸಿದರು. ಉಪಾರ ಸಮಾಜದ ಪುಟ್ಟ ಮಕ್ಕಳು ಪ್ರಸ್ತುತ ಪಡಿಸಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಕಣ್ಮನ ಸೆಳೆಯಿತು.

ಈ ವೇಳೆ ಉಪಾರ ಸಮಾಜ ಅಧ್ಯಕ್ಷ ಮಹೇಶ ಸಗರ, ಉಪಾಧ್ಯಕ್ಷ ಅನಿಲ್ ಸಗರ್, ಗೌರವಾಧ್ಯಕ್ಷ ಪೀರಪ್ಪ ಪಡತಲ್ ಸಗರ್, ಪುರಸಭೆ ಸದಸ್ಯ ವಿಜಯಕುಮಾರ, ದೇವಿ ಸಗರ್, ಮಾರುತಿ ಸಗರ, ಕಲ್ಲಪ್ಪ ಸಗರ್ ದುಬಲಗುಂಡಿ, ಶರಣಪ್ಪ ಸಗರ್, ಸುಶೀಲಕುಮಾರ ಭೊಕಲಾ, ಸಿದ್ಧಾರ್ಥ ಜಾನವೀರ್, ಅನಿಲ ಹೊನ್ನಿಕೇರಾ, ಅನಂತ ಮಾಳಗೆ ಸೇರಿ ಅನೇಕರಿದ್ದರು.

# ನರೇಗಾ ಯೋಜನೆ ಸದ್ಬಳಕೆಯಾಗಲಿ ದೀಪಿಕಾ ನಾಯ್ಕರ್

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಗ್ರಾಮೀಣ ಭಾಗದ ಹಳ್ಳಿಗಳ ಬಡಜನರ ಕಲ್ಯಾಣಕ್ಕೆ ಪೂರಕವಾದ ನರೇಗಾ ಯೋಜನೆ ಸದ್ಬಳಕೆ ಆಗುವಂತೆ ಎಚ್ಚರ ವಹಿಸಿ ಸ್ಥಳೀಯ ಅಧಿಕಾರಿಗಳು ಕೆಲಸ ಮಾಡಬೇಕು ಎಂದು ತಾಪಂ. ಇಒ ದೀಪಿಕಾ ನಾಯ್ಕರ್ ಸೂಚನೆ ನೀಡಿದರು. ತಾಲೂಕಿನ ಚಂದನಹಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯ ಸೋನಕೇರಾ ಗ್ರಾಮದ ಹೊರ ವಲಯದಲ್ಲಿ ರಾಷ್ಟ್ರೀಯ ಉದ್ಯೋಗ ಖಾತ್ರಿ, ನರೇಗಾ ಯೋಜನೆ ಅಡಿಯಲ್ಲಿ ಆಯೋಜಿಸಿದ್ದ ದುಡಿಯೋಣ ಬಾ ಅಭಿಯಾನ, ಕಾಯಕ ಮಾಸಾಚಾರಣೆ ಹಾಗೂ ಆರೋಗ್ಯ ಶಿಬಿರದಲ್ಲಿ ನರೇಗಾ ಕೂಲಿ ಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದರು.



> ಗ್ರಾಮೀಣ ಭಾಗದಲ್ಲಿ ಸರಕಾರದ ವತಿಯಿಂದ ನಡೆಯುತ್ತಿರುವ ರಾಷ್ಟ್ರೀಯ ಉದ್ಯೋಗ ಖಾತ್ರಿ, ನರೇಗಾ ಯೋಜನೆಯ ಕಾಮಗಾರಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹೆಣ್ಣು ಮಕ್ಕಳು ಕೆಲಸ ಮಾಡುತ್ತಿರುವುದು ಬಹಳ ಸಂತೋಷ ತಂದಿದೆ. ಕುಟುಂಬ ನಿರ್ವಹಣೆಯಲ್ಲಿ ಹೆಣ್ಣು ಮಕ್ಕಳ ಪಾತ್ರ ದೊಡ್ಡದಾಗಿದೆ. ಇದನ್ನು ಅರಿತುಕೊಂಡು ಹೆಣ್ಣು ಮಕ್ಕಳು ಒತ್ತಡದಲ್ಲಿ ಕೆಲಸ ಮಾಡುವುದನ್ನು ಕೈಬಿಟ್ಟು ತಮ್ಮ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ಮತ್ತು ಮುಂಜಾಗೃತ ಕ್ರಮಗಳನ್ನು ಅನುಸರಿಸಿ ಕೆಲಸ ಮಾಡುವ ಮೂಲಕ ತಮ್ಮ ಕುಟುಂಬದ ಆರ್ಥಿಕ ಮಟ್ಟ ಸುಧಾರಣೆ ಮಾಡಿಕೊಳ್ಳಬೇಕು.
>
> **-ದೀಪಿಕಾ ನಾಯ್ಕರ್**
> **ತಾಪಂ. ಇಒ ಹುಮನಾಬಾದ್**

ಗ್ರಾಮೀಣ ಪ್ರದೇಶದ ಜನರಿಗೆ 1 ವರ್ಷದಲ್ಲಿ 100 ದಿನ ಕೆಲಸ ನೀಡಿ ಕುಟುಂಬ ನಿರ್ವಹಣೆಗೆ ಅನುಕೂಲ ಮಾಡಿಕೊಡುವುದು ಉದ್ಯೋಗ ಖಾತ್ರಿ ಯೋಜನೆ ಗುರಿಯಾಗಿದೆ. ತಾಲೂಕಿನ ಯಾವುದೇ ಗ್ರಾಪಂ. ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೆಲಸ ಬೇಡಿಕೆ ಇದ್ದಾಗ 15 ದಿನದೊಳಗೆ ಕೆಲಸ ನೀಡಲು ಅಯಾ ಗ್ರಾಮ ಪಂಚಾಯಿತಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ನರೇಗಾ ಯೋಜನೆಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಗ್ರಾಮ ಪಂಚಾಯತಿ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ನರೇಗಾ ಯೋಜನೆ ಅಡಿಯಲ್ಲಿ ಕೆಲಸ ನೀಡಲು ನಿರಾಕರಿಸಿದರೆ, ಸ್ಥಳೀಯರು ನನಗೆ ಮಾಹಿತಿ ನೀಡಬೇಕು. ನಿರ್ಲಕ್ಷ್ಯ ವಹಿಸಿದವರ ವಿರುದ್ಧ ಕಾನೂನು ಚೌಕಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಪಂ. ಅಧ್ಯಕ್ಷೆ ಮಂಗಲಾ ಮೇತ್ರೆ, ಗ್ರಾಪಂ. ಸದಸ್ಯರಾದ ವಿಶ್ವನಾಥ ಕಾಡಗೊಂಡ, ರಾಜಕುಮಾರ ಸಂಗ್ರಾಮ, ತೇಜಮ್ಮ, ಪಿಡಿಓ ವೀರಣ್ಣ ಜಮಾದಾರ, ದಯಾಗೊಂಡ ಹೈಬತೆ, ವಿಜಯಲಕ್ಷ್ಮಿ ದೋಮಲ್, ಮನೋಜಕುಮಾರ ಸೇರಿ ಅನೇಕರಿದ್ದರು.

# ನಿಂಗಾಪುರ ಗ್ರಾಮದ ಹಿರಿಯ ಜೀವಿ ಹುಚ್ಚಿರಪ್ಪ ತಳವಾರ ನಿಧನ

ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ತಾಲೂಕಿನ ನಿಂಗಾಪುರ ಗ್ರಾಮದ( 75 ) ವರ್ಷದ ಹಿರಿಯ ಜೀವಿ ಹುಚ್ಚಿರಪ್ಪ ತಂದೆ ಬಸಪ್ಪ ತಳವಾರ ದಿನಾಂಕ 13.5.2025 ರಂದು ವಯೋ ಸಹಜ ಕಾಯಿಲೆಯಿಂದ ಮರಣ ಹೊಂದಿದ್ದು ಇವರ ಅಂತ್ಯಕ್ರಿಯೆಯು ಮಂಗಳವಾರ ನಿಂಗಾಪುರ ಗ್ರಾಮದಲ್ಲಿ ಸಾಯಂಕಾಲ. 5.30 ರ ಸುಮಾರಿಗೆ ನೆರವೇರಿಸಲಾಯಿತು.

ಇವರ ಶಿವಗಣರಾಧನೆಯನ್ನು 17.5.2025 ಶನಿವಾರ ದಿನದಂದು ನೆರವೇರಿಸಲಾಗುವುದೆಂದು



ಕುಟುಂಬದ ಮೂಲಗಳು ತಿಳಿಸುವೆ.

ದುಃಖ ಪುತ್ರರು

ಐದು ಮಂದಿ ಮಕ್ಕಳು ಹಾಗೂ ಮೊಮ್ಮಕ್ಕಳು ಅಪಾರ ಬಂಧು ಬಳಗ ಕಂಬನಿ ಮಿಡಿದಿದ್ದಾರೆ.

# 7 ನೇ ತರಗತಿಯಿಂದ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಬೇಸಿಗೆ ಶಿಬಿರ ಉದ್ಘಾಟನೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮೆ 15 ಜಿಲ್ಲಾಧಿಕಾರಿಗಳ ಆದೇಶದಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯ, ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಹಾಗೂ ಅಗಸ್ತ್ಯ ಫೌಂಡೇಷನ್ ಕೋರ ವಿಜ್ಞಾನ ಚಟುವಟಿಕೆ ಕೇಂದ್ರ ವತಿಯಿಂದ

7ನೇ ತರಗತಿಯಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ "ಬೇಸಿಗೆ ಶಿಬಿರವನ್ನು ಇಲ್ಲಿನ ಸರಕಾರಿ ಪದವಿ ಪೂರ್ವ ಕಾಲೇಜು ಬಾಲಕರ ಪ್ರೌಢ ಶಾಲಾ ವಿಭಾಗ ಆಯೋಜಿಸಲಾಗಿದೆ.

ಈ ಕಾರ್ಯಕ್ರಮವನ್ನು ತಹಸೀಲ್ದಾರರಾದ ಡಾ. ದತ್ತಾತ್ರೇಯ ಗಾದಾ ಅವರು ಸರಸ್ವತಿ ದೇವಿಯ ಭಾವ ಚಿತ್ರಕ್ಕೆ ಪೂಜೆ ಹಾಗೂ ಸಸಿಗೆ ನೀರು ಉಣಿಸುವ ಮೂಲಕ ಉದ್ಘಾಟಿಸಿ

ಮಾತನಾಡಿ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಸದೃಢವಾಗಿ ಬೆಳೆಯಬೇಕೆಂದರೆ ಈ ಶಿಬಿರ ಮುಖ್ಯವಾಗಿದೆ.ಈ ಶಿಬಿರದ ಮುಖಾಂತರ ಮಕ್ಕಳು ನೃತ್ಯ, ಚಿತ್ರಕಲೆ, ಸಂಗೀತ, ರಾಕೇಟ್ ತಯ್ಯಾರಿಕೆ ಮತ್ತು ಖಗೋಳಶಾಸ್ತ್ರ ಮುಂತಾದ ತಮ್ಮ ಆಸಕ್ತಿದಾಯಕ ಸಹಪಠ್ಯ ಚಟುವಟಿಕೆಯನ್ನು ಕಲಿಯಬಹುದು. ಇದು ಮಕ್ಕಳ ಕೌಶಲ್ಯ ಅಭಿವೃದ್ಧಿ ಹಾಗೂ ವಿಜ್ಞಾನ ಕ್ಷೇತ್ರದಲ್ಲಿ ಅನ್ವೇಷಣೆಗೆ ಪ್ರೋತ್ಸಾಹ ವಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಪ್ರಭಾಕರ ಕಳಮಾಸೆ ಕ್ಷೇತ್ರ ಸಮನ್ವಯಾಧಿಕಾರಿಗಳು ಮಾತನಾಡಿ ತಾಲೂಕಿನ ವಿವಿಧ ಶಾಲೆಗಳ ಮಕ್ಕಳಿಗೆ ಈ ಶಿಬಿರದ ಉಪಯೋಗವಾಗುತ್ತದೆ.ಈ ಶಿಬಿರವು ಇಂದಿನಿಂದಲೇ 24. ವರೆಗೆ ಬೆಳಗ್ಗೆ 9:00 ಗಂಟೆಯಿಂದ ಮಧ್ಯಾಹ್ನ 1:00 ಗಂಟೆಯವರೆಗೆ ನಡೆಯುತ್ತದೆ. ಬೇಸಿಗೆ ಶಿಬಿರವು ಮಕ್ಕಳು ಪ್ರತಿಭೆಯನ್ನು ಹೆಚ್ಚಿಸುತ್ತದೆ . ಭಾಗವಹಿಸುವ ಮಕ್ಕಳಿಗೆ ಮಧ್ಯಾಹ್ನದ ಅಲ್ಪ ವಿಹಾರ ಮತ್ತು ವಿವಿಧ ವಿಷಯದಲ್ಲಿ ಪರಿಣಿತಿ ಹೊಂದಿದ ಶಿಕ್ಷಕರು ದಿನಾಲು ಒಂದು ವಿಷಯದ ಮೇಲೆ ಕಲಿಸುತ್ತಾರೆ. ಇದೊಂದು ಪ್ರತಿಭಾ ಕಾರಂಜಿ ಎಂತಹ ಕಾರ್ಯಕ್ರಮವಾಗಿದೆ ಎಂದರು. ಅಧ್ಯಕ್ಷತೆಯನ್ನು ಸರ್ಕಾರಿ ಪದವಿ ಪೂರ್ವ ಕಾಲೇಜು ಬಾಲಕರ ಪ್ರೌಢ ಶಾಲಾ ವಿಭಾಗ ಉಪ ಪ್ರಾಂಶುಪಾಲರಾದ ಅನೀತಾ ಸಾವಳ್ಕರ ಮಾತನಾಡಿ ಬೇಸಿಗೆ ಶಿಬಿರ ನಮ್ಮ ಶಾಲೆಯಲ್ಲಿ ಏರ್ಪಡಿಸಿದ್ದು ಸಂತೋಷದ ವಿಷಯ.ಮಕ್ಕಳು ತಮ್ಮಲ್ಲಿರುವ ಸೃಜನಾತ್ಮಕ ಕೌಶಲ್ಯ ಹಾಗೂ ವೈಜ್ಞಾನಿಕ ಸಂಶೋಧನಾ ಭಾವನೆ ವೃದ್ಧಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ಶೋಭಾ ಮಠಪತಿ, ಸುನೀತಾ ಚಿಂಚೋಳಿ , ನಾಜೀಯಾ ಬೇಗಂ , ಸಂಜೀವಕುಮಾರ ನಡುಕರ, ವೀರಭದ್ರಪ್ಪ ಕೌಠಾ, ಮಹಾದೇವ, ಬಿ.ಆರ್.ಪಿ ಪುಂಡಲಿಕ ಬಸನಾಯಕ, ,ಸಿ.ಆರ್.ಪಿ ನಾಸೀರ್ ಪಟೇಲ್, ಮಹತಾಭ ಪಟೇಲ್,ಮಂಗಲಾ , ಸುನೀತಾ ಕುಪ್ಪೆ ಹಾಗೂ ವಿವಿಧ ಶಾಲೆಗಳ ಮಕ್ಕಳು ಅಂದರೆ ನೀಲಾಂಬಿಕಾ ಪ್ರೌಢ ಶಾಲೆ, ಬಸವೇಶ್ವರ ಪ್ರೌಢ ಶಾಲೆ, ಸರಡಗಿ ಪ್ರೌಢಶಾಲೆ , ಶಾಂತನಿಕೇತನ ಪ್ರಾಥಮಿಕ ಹಾಗೂ ಪ್ರೌಢ ಶಾಲೆ,ನೋಬೆಲ್ ಪ್ರೌಢ ಶಾಲೆ,ಪ್ರೇಸಿಡೆನ್ಸಿ ಪ್ರೌಢ ಶಾಲೆ, ಆದರ್ಶ ವಿದ್ಯಾಲಯ ರಾಜೋಳಾ ಶಾಲೆಯ ಮಕ್ಕಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಬಿ. ಆರ್. ಪಿ ಗಳಾದ ಶಾಲಿವಾನ ಬಿರಾದಾರ ನಿರೂಪಿಸಿದರು. ಸಿ. ಆರ್. ಪಿ ಗಳಾದ ಗಿರಿಧರ ಧನ್ನೂರೆ ಸ್ವಾಗತಿಸಿದರು. ಬಿ. ಆರ್ ಪಿ ಗಳಾದ ಬಾಲಕೃಷ್ಣ ಪಾಟೀಲ್ ವಂದಿಸಿದರು.

# ಬೆಂಕಿ ಕಂಡ ತಕ್ಷಣ ಗಾಬರಿಯಾಗಬೇಡಿ,



ಮಲ್ಲಮ್ಮ ನುಡಿ ವಾರ್ತೆ

ಇಳಕಲ್ – ಇಲ್ಲಿಯ ಸ್ಥಳೀಯ ಮಹೇಶ್ವರಿ ಚಿಕ್ಕಮಕ್ಕಳ ಆಸ್ಪತ್ರೆಯಲ್ಲಿ ಬೆಂಕಿ ಬಿದ್ದಿದೆ ಎಂದು ಸಿಬ್ಬಂದಿ ಗಾಬರಿಗೊಂಡು ಓಡೋಡಿ ಬಂದು ನೋಡಿದಾಗ ಅಲ್ಲಿ ನಡೆದಿರುವುದು ಅಣುಕು ಪ್ರದರ್ಶನ ಎಂದು ಗೊತ್ತಾದ ನಂತರ ಸಿಬ್ಬಂದಿ ಎಲ್ಲರೂ ನಿಟ್ಟುಸಿರು ಬಿಟ್ಟರು.

ಸ್ಥಳೀಯ ಮಹೇಶ್ವರಿ ಆಸ್ಪತ್ರೆಯಲ್ಲಿ ಆಸ್ಪತ್ರೆಯಲ್ಲಿರುವ ಡಾಕ್ಟರ್ ನರ್ಸ್ ಮತ್ತು ಸಿಬ್ಬಂದಿಗಳಿಗೆ ಅಚಾನಕ್ಕಾಗಿ ಅಗ್ನಿ ಅವಘಡಗಳಾದಾಗ ಯಾವೆಲ್ಲ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳಬೇಕು ಮತ್ತು ಬೆಂಕಿ ಬಿದ್ದಾಗ ನಾವು ಯಾವ ರೀತಿ ನಡೆದುಕೊಳ್ಳಬೇಕು ಎನ್ನುವುದನ್ನು ಅಗ್ನಿಶಾಮಕ ಠಾಣೆಯ ಜಗದೀಶ ಗಿರಡ್ಡಿ ಸಿಬ್ಬಂದಿಯವರಿಗೆ ಉಪನ್ಯಾಸ ನೀಡಿದರು.

ಆಸ್ಪತ್ರೆ ಸಿಬ್ಬಂದಿಯವರಿಗೆ ಎಬಿಸಿ ವರ್ಗದ ಅಗ್ನಿನಂದಕಗಳನ್ನು ಯಾವ ಯಾವ ಬೆಂಕಿಗೆ ಉಪಯೋಗಿಸಬೇಕು ಮತ್ತು ಬೆಂಕಿ ಬಿದ್ದಾಗ ಯಾವ ರೀತಿ ಅಗ್ನಿ ನಂದಕಗಳನ್ನು ಉಪಯೋಗಿಸುವ ವಿಧಾನವನ್ನು ಸಿಬ್ಬಂದಿಯವರಿಗೆ ತಿಳಿಸಿಕೊಟ್ಟರು ಯಾವುದೇ ಸಣ್ಣಪುಟ್ಟ ಅಗ್ನಿ ಅನಾಹುತಗಳಾದಾಗ ಅಗ್ನಿ ನಂದಕಗಳಿಂದ ಬೆಂಕಿಯನ್ನು ಸರಳವಾಗಿ ಆರಿಸುವ ವಿಧಾನವನ್ನು ತೋರಿಸಿಕೊಟ್ಟರು.

ನಂತರ ಡಾ// ಪವನ್ ಧರಕ್ ಮಾತನಾಡಿ ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು ನಮ್ಮ ಆಸ್ಪತ್ರೆಗೆ ಬಂದು ಸಣ್ಣ ಪ್ರಮಾಣದ ಬೆಂಕಿ ಆದಾಗ ನಂದಿಸುವ ವಿಧಾನವನ್ನು ಸಹ ವಿವರವಾಗಿ ತೋರಿಸುವುದರ ಜೊತೆಗೆ ಸ್ವತಃ ನಮ್ಮ ಸಿಬ್ಬಂದಿಯವರಿಂದಲೇ ಬೆಂಕಿ ನಂದಿಸುವ ಅಣುಕು ಪ್ರದರ್ಶನವನ್ನು ಮಾಡಿದ್ದು ತುಂಬಾ ಖುಷಿಯಾಯಿತು ಎಂದು ಹೇಳಿದರು ಅಗ್ನಿ ಅನಾಹುತಗಳ ಮುಂಜಾಗ್ರತೆ ಕ್ರಮಗಳ ಕುರಿತು ಉಪನ್ಯಾಸ ಮತ್ತು ಅಣುಕು ಪ್ರದರ್ಶನದಲ್ಲಿ ಆಸ್ಪತ್ರೆಯ ಎಲ್ಲಾ ಡಾಕ್ಟರ್. ನರ್ಸ್ ಹಾಗೂ ಸಿಬ್ಬಂದಿಯವರುಗಳು ಮತ್ತು ಆಸ್ಪತ್ರೆಗೆ ಬಂದ ಒಳ ರೋಗಿಗಳ ಪೋಷಕರು ಆಸ್ಪತ್ರೆಯ ಸುತ್ತಮುತ್ತಲಿರುವ ಸಾರ್ವಜನಿಕರು ಹಾಗೂ ಮಕ್ಕಳು ಅಣುಕು ಪ್ರದರ್ಶನದಲ್ಲಿ ಭಾಗಿಯಾದರು....



ಬಸವಕಲ್ಯಾಣ :- ಕರ್ನಾಟಕ ಸರ್ಕಾರ ಲೋಕೋಪಯೋಗಿ ಇಲಾಖೆಯ ಮುಖ್ಯ ಇಂಜಿನಿಯರ್ ಆಗಿ ನೇಮಕಗೊಂಡಿರುವ ರವಿ ಸೂರನ್ ಕಡಗಂಚಿ ಅವರು ಹಾರಕೂಡ ಶ್ರೀಮಠಕ್ಕೆ ಆಗಮಿಸಿದಾಗ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಆನಂದರಾವ್ ಝುಳಕೆ, ಶಿವಕುಮಾರ ಗೊಳಾ, ಅಪ್ಪಣ್ಣ ಜನವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).



ಬಸವಕಲ್ಯಾಣ:- ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿಗೆ ಇತ್ತೀಚೆಗೆ ಭೇಟಿ ನೀಡಿದ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಹಿರಿಯ ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ ಅವರನ್ನು ಪ್ರಾಚಾರ್ಯ ಡಾ. ಭೀಮಾಶಂಕರ ಬಿರಾದಾರ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಪತ್ರಕರ್ತರಾದ ನಾಗಪ್ಪ ನಿಣ್ಣೆ , ಸಮಾಜ ಸೇವಕರಾದ ಮಾರುತಿ ಫುಲೆ ಕಿಟ್ಟಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).


# ಮಲ್ಲಿಕಾರ್ಜುನ ಕಟ್ಟಿಮನಿ ಅವರ ಸುಪುತ್ರಿ ಸಾತ್ವಿ ಜನ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಹಡಪದ ಅಪ್ಪಣ್ಣ ಸಮಾಜ ಸಂಘದ ತಾಲುಕಾಧ್ಯಕ್ಷ ಮಲ್ಲಿಕಾರ್ಜುನ ಪ್ರಿಯಾಂಕಾ ಅವರ ಸುಪುತ್ರಿ ಸಾತ್ವಿ ಕಟ್ಟಿಮನಿ (ಹಡಪದ) ಇವರ ಪ್ರಥಮ ವರ್ಷದ ಜನ್ಮ ದಿನವನ್ನು ಬಿಜೆಪಿ ಯುವ ಮುಖಂಡ ಸಂತೋಷ ಪಾಟೀಲ್ ಅವರ ಹಸ್ತದಿಂದ ಕೇಕ್ ಕತ್ತರಿಸುವ ಮೂಲಕ ಅದ್ಧುರಿಯಾಗಿ ಆಚರಣೆ ಮಾಡಲಾಯಿತ್ತು. ಈ ಸಂದರ್ಭದಲ್ಲಿ ಸುರೇಶ್ ಕಟ್ಟಿಮನಿ, ಗುಂಡಪ್ಪ ಕಟ್ಟಿಮನಿ, ಶ್ರೀಕಾಂತ ಫುಲೇ, ರವೀಂದ್ರರೆಡ್ಡಿ ರಾಂಪುರ, ಸುಧಾಕರ್, ಹುಡಗಿ, ರಾಜಕುಮಾರ ಆರ್. ಹಡಪದ, ರಾಜಗೋಪಾಲ್ ಐನಾಪುರ್, ಸಾಯಿ ಸಿರ್ಕೆ, ಲಕ್ಷ್ಮಣ ಭೋವಿ, ರಾಜು ಗಂಜಿ, ಶಿವಕುಮಾರ್ ಹಡಪದ, ರಮೇಶ ಹಡಪದ, ನಾಗೇಶ್ ಶ್ರೀಮಂಗಲೇ, ಅನೀಲ ಶ್ರೀಮಂಗಲೇ, ಪವನ್ ಗುಪ್ತ ಸೇರಿದಂತೆ ಇತರರು ಭಾಗವಹಿಸಿ ಶುಭ ಹಾರೈಸಿದರು.

# ಪದಾಧಿಕಾರಿಗಳ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಭೀಮವಾದ ದಲಿತ ಸಂಘರ್ಷ ಸಮಿತಿ ಜಿಲ್ಲೆ ಶಾಖೆ ವತಿಯಿಂದ ಜಿಲ್ಲಾ ಸಂಚಾಲಕರಾದ ಸಂಜುಕುಮಾರ ಮೇತ್ರೆ ಅವರಿಂದ ದಿನಾಂಕ-15-05-2025 ಗುರುವಾರ ಚಿಟಗುಪ್ಪಾ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಚಿಟಗುಪ್ಪಾ ತಾಲ್ಲೂಕಿನ ಶಾಖೆ ಉದ್ಘಾಟಿಸಲಾಯಿತು.

ತಾಲ್ಲೂಕ ಸಂಚಾಲಕಾರಾಗಿ ಅಶೋಕ ಕೋಳಿಕರ, ಸಂಘಟನಾ ಸಂಚಾಲಕರುಗಳಾದ ಮಾರುತಿ ಪೋಲಾ, ರಾಜಕುಮಾರ ಜಾಧವ, ದೇವಿಂದ್ರ ಕಟ್ಟಿಮನಿ, ಪ್ರಭು ಬಾದಾಲಾಪುರ, ದೂಳಪ್ಪಾ ರತ್ನಕರ್, ವಿಷ್ಣು ಬುದ್ಧ ವಿ.ಒ.ಸಂಚಾಲಕರಾಗಿ, ಧನರಾಜ ಕಟ್ಟಿಮನಿ, ಬಾದಾಲಾಪುರ ಗ್ರಾಮ ಸಂಚಾಲಕರಾಗಿ, ದತ್ತು ಮೇತ್ರೆ, ಶಾಮತಾಬಾದ ಸಂಚಾಲಕರಾಗಿ ಜಗನ್ನಾಥ ವಗ್ಗೆನೋರ ಜಿಲ್ಲಾ ಸಂಘಟನಾ ಸಂಚಾಲಕರಾಗಿ, ಶಿವಕುಮಾರ ಸಂಗಣೋರ ಮುತ್ತಂಗಿ, ಕಲ್ಲಾಣಿ ಶಾಖಾ, ದಶರಥ ದೊಡ್ಡಿ ಇವರೆಲ್ಲರೂ ಉಪಸ್ಥಿತರಿದ್ದರು.

# ಕಲಬುರಗಿ: ಐಟಿಐ ವಿವಿಧ ವೃತ್ತಿಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.15-ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025-26 ಶೈಕ್ಷಣಿಕ ಸಾಲಿಗೆ ಐಟಿಐ (ಎನ್.ಸಿ.ವಿ.ಟಿ. ಸಂಯೋಜನೆ ಪಡೆದ) ವೃತ್ತಿಗಳಿಗೆ ಪ್ರವೇಶ ಪಡೆಯಲು 8ನೇ ತರಗತಿ ಉತ್ತೀರ್ಣರಾದ ಅಥವಾ ಎಸ್.ಎಸ್.ಎಲ್. ಅನುತ್ತೀರ್ಣರಾದ ಹಾಗೂ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಎಂಟನೇ ತರಗತಿಯಲ್ಲಿ ಪಾಸಾದ ಅಭ್ಯರ್ಥಿಗಳು ವೆಲ್ಡರ್ ಮತ್ತು ಕಾರಪೇಂಟರ್(ಡಬ್ಲ್ಯೂ.ಡಬ್ಲ್ಯೂ.ಟಿ.) ವೃತ್ತಿಗಳಿಗೆ ಪ್ರವೇಶ ಪಡೆಯಬಹುದಾಗಿದೆ. 10ನೇ ತರಗತಿಯಲ್ಲಿ ಪಾಸಾದ ವಿದ್ಯಾರ್ಥಿಗಳು ಕೋಪಾ, ಮೆಕ್ಯಾನಿಕ್ ಡಿಸೇಲ್, ಫಿಟ್ಟರ್, ಎಲೆಕ್ಟ್ರಿಶಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಮಶಿನಿಸ್ಟ್, ಎಮ್.ಎಮ್.ವಿ., ಎಮ್.ಆರ್.ಎ.ಸಿ., ಟರ್ನರ್, ಐಸಿಟಿಎಸ್‌ಎಮ್ ಹಾಗೂ ಆರ್ಕಿಟೆಕ್ಚುರಲ್ ಡ್ರಾಫ್ಟ್‌ಮನ್ ವೃತ್ತಿಗಳಿಗೆ ಪ್ರವೇಶ ಪಡೆಯಹುದಾಗಿದೆ. ಇಚ್ಛೆಯುಳ್ಳ ಅಭ್ಯರ್ಥಿಗಳು ತಿತಿತಿ.ಛಿಣಜ. ಇಚಿಡಿಟಿಚಿಣಚಿಞಚಿ.ರಥ.ಟಿ ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ ಅಥವಾ ಈ ಸಂಸ್ಥೆಗೆ ಭೇಟಿ ನೀಡಿ 2025ರ ಮೇ 28ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ (ಪು) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಸಂಪರ್ಕಿಸಲು ಅಥವಾ ಮೊಬೈಲ್ ಸಂಖ್ಯೆ: 9972062146 ಗೆ ಸಂಪರ್ಕಿಸಲು ಕೋರಲಾಗಿದೆ.

# ಆರೋಗ್ಯವೇ ಸರ್ವ ಶ್ರೇಷ್ಠ ಸಂಪತ್ತು, ಆರೋಗ್ಯ ವನ್ನು ಕಾಪಾಡಿಕೊಳ್ಳಿ: ಅರವಿಂದ ಕುಲಕರ್ಣಿ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.15:ಮನುಷ್ಯನು ದೈಹಿಕವಾಗಿ ಸದೃಢನಾಗಿದ್ದರೆ ತಾನು ಏನೆಲ್ಲಾ ಸಾಧಿಸಬಹುದು ಆರೋಗ್ಯವೇ ಸರ್ವ ಶ್ರೇಷ್ಠ ಸಂಪತ್ತು, ಅದನ್ನು ಎಲ್ಲರೂ ಕಾಪಾಡಿಕೊಳ್ಳಬೇಕು ಎಂದು ಪ್ರಯೋಗಶಾಲಾ ತಂತ್ರಜ್ಞ ಅಧಿಕಾರಿಯಾದ ಅರವಿಂದ ಕುಲಕರ್ಣಿ ಅವರು ಜನತೆಗೆ ಕರೆ ನೀಡಿ ದರು. ಅವರು ಇತ್ತೀಚಿಗೆ ನಡೆದ ಮೆಥೋಡಿಸ್ಟ್ ಕ್ರೈಸ್ತ ಜಾತ್ರೆಯಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನಷನ್ ಸೊಸೈಟಿ, ಶರಣ ತತ್ವ ಪ್ರಸಾರ ಸಮಿತಿ , ಐಸಿಟಿಸಿ ಎ ಬ್ರಿಮ್ಸ ಬೋಧಕ ಆಸ್ಪತ್ರೆ ಸಹಯೋಗ ದೊಂದಿಗೆ ಏರ್ಪಡಿಸಲಾದ ಉಚಿತ ಆರೋಗ್ಯ ತಪಾ ಸಣೆ ಶಿಬಿರದಲ್ಲಿ ಮಾತನಾಡುತ್ತಿದ್ದರು. ಇಂದಿನ ಯುವ ಪೀಳಿಗೆಯು ಅನೇಕ ದುಷ್ಚಗಳಿಗೆ ಬಲಿಯಾಗಿ ಮಾರಣಾಂತಿಕ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಆರೋಗ್ಯವೇ ಮಹಾಭಾಗ್ಯ ಆದ್ದರಿಂದ ದುಶ್ಚಟಗಳಿಗೆ ಬಲಿಯಾಗ ದಂತೆ ಒಳ್ಳೆಯ ಸಂಸ್ಕೃತಿ ಯನ್ನು ಪಾಲಿಸಬೇಕು.

ಇಲ್ಲದಿದ್ದರೆ ಏನೆಲ್ಲಾ ಐಶ್ವ ರ್ಯಗಳು ಇದ್ದರೂ, ಅದೆಲವೂ ಶೂನ್ಯವಾಗಿರುತ್ತದೆ ಎಂದು ಮಾರ್ಮಿಕವಾಗಿ ಹೇಳಿದರು. ರಾಜ್ಯ ಹಿರಿಯ ನಾಗರಿಕರ ಪ್ರಶಸ್ತಿ ಪುರಸ್ಕೃತರಾದ ವೀರಭದ್ರಪ್ಪ ಉಪ್ಪಿನ್ ರವರು ಅತಿಥಿ ಯಾಗಿ ಮಾತನಾಡಿ, ಬೀಡಿ ಸಿಗರೇಟ್, ಗುಟ್ಕಾ, ಸಾರಾಯಿ, ಡ್ರಗ್ಸ್ ಸೇವನೆ ಮತ್ತು ಅನೈತಿಕ ಲೈಂಗಿಕ ಸಂಬಂಧಗಳು ಮುಂತಾದ ಚಟಗಳಿಂದ ಕ್ಯಾನ್ಸರ್, ಕ್ಷಯ ರೋಗ, ಏಡ್ಸ್, ಹೆಪಟೈಟಿಸ್ ಬಿ, ಹೆಪಟೈಟಿಸ್ ಸಿ, ಸಿಫಿಲಿಸ್, ಮುಂತಾದ ರೋಗಗಳಿಗೆ ಜನತೆಯು ಬಲಿಯಾಗು ತ್ತಿದ್ದಾರೆ. ರೋಗ ಬರುವ ಮುನ್ನ ರೋಗ ಬಾರದಂತೆ ಜಾಗೃತಿ ವಹಿಸುವ ಇಂತಹ ಅಭಿಯಾನಗಳು ಬಹು ಉಪಯುಕ್ತ ವಾಗಿರುತ್ತದೆ ಎಂದು ತಿಳಿಸಿದರು. ಬ್ರೀಮ್ಸ್ ಬೋಧಕ ಆಸ್ಪತ್ರೆಯ ಆಪ್ತ ಸಮಾಲೋಚಕರಾದ ಶ್ರೀಮತಿ ವಾಣಿ ರವಿ ಸುಕುಮಾರ್ ಅವರು ಮಾತನಾಡಿ, ಹದಿ ಹರೆಯದ ಮಕ್ಕಳು, ಮಧ್ಯಮ ವಯಸ್ಕರು,



ಅಲೆಮಾರಿ ಜನಾಂಗದವರು, ಎಚ್ಐವಿ ಏಡ್ಸ್ ದಂತಹ ಭಯಾನಕ ರೋಗಗಳಿಗೆ ಬಲಿಯಾಗುತ್ತಿದ್ದಾರೆ. ಇದಕ್ಕೆ ಜಾಗೃತಿಯೇ ದಿವ್ಯ ಔಷಧ. ಎಚ್ಐವಿ ಎಂದ ಕೂಡಲೇ ಅನಗತ್ಯ ಹೆದರಿಕೆ ಬೇಡ. ಇದು ಕೇವಲ ನಾಲ್ಕು ವಿಧಾನ ಗಳಲ್ಲಿ ಮಾತ್ರ ಹರಡುತ್ತದೆ. ಅಸುರಕ್ಷಿತ ಲೈಂಗಿಕ ಸಂಪರ್ಕ, ಬಳಸಿದ ಸೂಜಿ ಮದ್ದುಗಳನ್ನು ಹಂಚಿ ಕೊಳ್ಳುವುದು ಅಥವಾ ಮತ್ತೆ ಬಳಸುವುದು. ಎಚ್ಐವಿ ಸೋಂಕಿತ ರಕ್ತ ವರ್ಗಾವಣೆ, ಎಚ್ಐವಿ ಸೋಂಕಿತ ತಾಯಿಯಿಂದ ಹುಟ್ಟುವ ಮಗುವಿಗೆ. ಈ ನಾಲ್ಕು ವಿಧಾನಗಳನ್ನು ಬಿಟ್ಟು ಯಾವುದೇ ಕಾರಣ ಕ್ಕೂ ಎಚ್ಐವಿ ರೋಗವು ಅನ್ಯಮಾರ್ಗದಿಂದ ಹರಡು ವುದಿಲ್ಲ ಆದ್ದರಿಂದ ಅನುಮಾನವಿದ್ದಲ್ಲಿ ಎಲ್ಲರೂ ಎಚ್ಐವಿ ಪರೀಕ್ಷೆಯನ್ನು ಮಾಡಿಸಿಕೊಳ್ಳುವುದು ಉತ್ತಮ. ರೋಗ ಬಂದ ಕೂಡಲೇ ಮನುಷ್ಯನು ಸಾಯುವುದಿಲ್ಲ. ಎಆರ್‌ಟಿ ಚಿಕಿತ್ಸೆಯಿಂದ ಸೋಂಕಿತನು ಸಾಮಾನ್ಯವಂತೆ ಬದುಕಲು ಸಾಧ್ಯವಾಗುತ್ತದೆ.

ಶೀಘ್ರ ಪತ್ತೆ ಸೂಕ್ತ ಚಿಕಿತ್ಸೆ ನೀಡಿದಲ್ಲಿ ಎಲ್ಲಾ ಕಾಯಿಲೆಗಳು ಹತೋಟಿಯಲ್ಲಿ ಇಡಬಹುದು ಎಂದು ತಿಳಿಸಿದರು. ಎಚವಿ ಸೋಂಕಿತರೊಂದಿಗೆ ಕಳಂಕ ಮತ್ತು ತಾರತಮ್ಯ ಮಾಡುವುದು ಅಕ್ಷಮ್ಯ ಅಪರಾಧ. ಎಚ್ಐವಿ ಸೋಂಕಿತ ತಾಯಿಯು ಎಆರ್‌ಟಿ ಚಿಕಿತ್ಸೆಯ ಮೂಲಕ ಎಚ್ಐವಿ ಮುಕ್ತ ಮಗುವನ್ನು ನೀಡಬಹುದು. ಮಗುವಿಗೆ ಸಕಾಲಕ್ಕೆ ನೆವರ್ ಪಿನ್ ದ್ರಾವಣ ಮತ್ತು 18 ತಿಂಗಳವರೆಗೆ ವೈದ್ಯರ ಸಲಹೆಯನ್ನು ಚಾಚು ತಪ್ಪದೆ ಪಾಲಿಸಿದಲ್ಲಿ ಮಗು ಎಚ್ಐವಿ ಮುಕ್ತ ಆಗಲು ಸಾಧ್ಯವಾಗುತ್ತದೆ. ಆದ್ದರಿಂದ ಯಾವುದೇ ರೋಗದ ಬಗ್ಗೆ ಅನುಮಾನ ಬಂದಲ್ಲಿ ಆಪ್ತ ಸರ್ಕಾರಿ ಆಸ್ಪತ್ರೆಯಲ್ಲಿ ಸಮಾಲೋಚಕರ ಸಲಹೆಯನ್ನು ಪಡೆಯುವುದು ಉತ್ತಮ. ಅವರು ತಮ್ಮ ಎಲ್ಲಾ ಮಾಹಿತಿಯನ್ನು ಗೌಪ್ಯವಾಗಿಡುತ್ತಾರೆ ಎಂದು ತಿಳಿಸಿದರು. ನಗರಸಭೆಯ ಸಮುದಾಯ ಸಂಘಟಕ ಅಧಿಕಾರಿಯಾದ ರವಿ ಸುಕುಮಾರ್, ಎನ್ ಎಫ್ ಕಾಲೇಜಿನ ಪ್ರಿನ್ಸಿಪಾಲ್ ಶ್ರೀಮತಿ ಎಲಿಜಾಬೆತ, ಸ್ವರೂಪ ರಾಣಿ, ಪಿಡಬ್ಲ್ಯೂ ಡಿ ಇಂಜಿನಿಯರ್ ಸುನಿಲ್ ಆರ್, ಗುತ್ತಿಗೆದಾರರಾದ ರಾಹುಲ್, ನಿವೃತ್ತ ಮುಖ್ಯ ಗುರುಗಳಾದ ಸಿಡಿ ಸುಧಾಕರ್, ಶರಣ ತತ್ವ ಸಂಸ್ಥೆಯ ಶಿವಕುಮಾರ್ ಬೆಳ್ಳೂರ್, ವಿನೋದ್, ಆಕಾಶ್, ಆಸ್ಪತ್ರೆಯ ಸಿಬ್ಬಂದಿಯವರು ಶಿಬಿರದಲ್ಲಿ ಉಪಸ್ಥಿತ ರಿದ್ದರು. ಮೂರು ದಿವಸದ ಶಿಬಿರದಲ್ಲಿ ಸುಮಾರು 600 ಕ್ಕೂ ಹೆಚ್ಚು ಜನರನ್ನು ಮಧುಮೇಹ, ರಕ್ತದೊತ್ತಡ, ಎಚ್ಐವಿ, ಸಿಫಿಲಿಸ್, ಹೆಪಟೈಟಿಸ್ ಬಿ, ಹೆಪಟೈಟಿಸ್ ಸಿ ಮುಂತಾದ ಪರೀಕ್ಷೆಯನ್ನು ಮಾಡಲಾಯಿತು. ಶಿಬಿರದ ಮೇಲುಸ್ತುವಾರಿಯನ್ನು ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಮೇಲ್ವಿಚಾರಕರಾದ ಸೂರ್ಯಕಾಂತ್ ಸಂಗೋಳ್ಕರ ರವರು ವಹಿಸಿದ್ದರು.

# ಅಕ್ಕ ಅನ್ನಪೂರ್ಣತಾಯಿ ಪ್ರಥಮ ಸ್ಮರಣೋತ್ಸವಕ್ಕೆ ಸಿದ್ಧತೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 15 : ನಗರದಲ್ಲಿ ಮೇ 23 ಮತ್ತು 24 ರಂದು ನಡೆಯಲಿರುವ ಅಕ್ಕ ಅನ್ನಪೂರ್ಣತಾಯಿ ಅವರ ಪ್ರಥಮ ಸ್ಮರಣೋತ್ಸವದ ಕರಪತ್ರವನ್ನು ಬಸವಗಿರಿಯಲ್ಲಿ ಈಚೆಗೆ ಬಿಡುಗಡೆ ಮಾಡಲಾಯಿತು.

ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಅವರು, ಲಿಂಗಾಯತ ಮಹಾಮಠದಿಂದ ಹಮ್ಮಿಕೊಳ್ಳಲಾದ ಅಕ್ಕ ಅನ್ನಪೂರ್ಣತಾಯಿ ಅವರ ಸ್ಮರಣೋತ್ಸವಕ್ಕೆ ಅಗತ್ಯ ಸಿದ್ಧತೆಗಳು ನಡೆದಿವೆ ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ವ್ಯಾಪಕ ಪ್ರಚಾರ ಕಾರ್ಯ ನಡೆದಿದೆ. ನೆರೆಯ ಕಲಬುರಗಿ, ವಿಜಯಪುರ, ರಾಯಚೂರು, ಕೊಪ್ಪಳ, ಗದಗ, ಧಾರವಾಡ, ಬೆಳಗಾವಿ ಜಿಲ್ಲೆಗಳಲ್ಲೂ ಪ್ರಚಾರ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ. ವಿವಿಧೆಡೆಯಿಂದ ಅಕ್ಕನವರ ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಮೇ 23 ರಂದು ಸಾಮೂಹಿಕ ವಚನ ಪಾರಾಯಣ ಮತ್ತು ಉದ್ಘಾಟನಾ ಸಮಾರಂಭ ಜರುಗಲಿದೆ. ಮೇ 24 ರಂದು ಬೆಳಿಗ್ಗೆ 8.30ಕ್ಕೆ ವಚನ ವಿಜಯೋತ್ಸವದ ಪಥ ಸಂಚಲನ ಪಾಪನಾಶ ಗೇಟ್‌ನಿಂದ ಬಸವಗಿರಿಯ ಅಕ್ಕನವರ ಐಕ್ಯ ಮಂಟಪದ ವರೆಗೆ ನಡೆಯಲಿದೆ ಎಂದು ಹೇಳಿದರು. ಪಥ ಸಂಚಲನದಲ್ಲಿ ಸಹಸ್ರಾರು ಸಮವಸ್ತ್ರಧಾರಿ ಶರಣೆಯರು ಶಿಸ್ತಿನಿಂದ ಹೆಜ್ಜೆ ಹಾಕಲಿದ್ದಾರೆ. ಐಕ್ಯಮಂಟಪದಲ್ಲಿ ಸಾಮೂಹಿಕವಾಗಿ ಅಕ್ಕ ಅವರ ಯೋಗಾಂಗ ತ್ರಿವಿಧಿಯನ್ನು ರಾಗಬದ್ಧವಾಗಿ ಹಾಡಲಿದ್ದಾರೆ ಎಂದು ತಿಳಿಸಿದರು.

ನಂತರ ಅಕ್ಕನವರ ಸ್ಮರಣೋತ್ಸವ ಹಾಗೂ ಅನುಭಾವ ಗೋಷ್ಠಿಗಳು ಜರುಗಲಿವೆ. ವಚನ ಸಂಗೀತ, ವಚನ ನೃತ್ಯ, ಕಲ್ಯಾಣ ಕ್ರಾಂತಿ ರೂಪಕಗಳು ಜನಮನ ಸೂರೆಗೊಳ್ಳಲಿವೆ ಎಂದು ಹೇಳಿದರು.

ಅಕ್ಕನವರ ನಾಲ್ಕು ದಶಕಗಳ ಬಸವ ತತ್ವ ಪ್ರಚಾರದ ಸಾರ್ಥಕ ಸೇವೆಯನ್ನು ಗೌರವಿಸಲು ಕಾರ್ಯಕ್ರಮ ಆಯೋಜಿಸಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಸಾಹಿತಿ ರಮೇಶ ಮಠಪತಿ, ಪ್ರಮುಖರಾದ ಮಾಣಿಕಪ್ಪ ಗೋರನಾಳೆ, ಪ್ರಕಾಶ ಮಠಪತಿ, ಅಶೋಕ ಎಲಿ, ಚಂದ್ರಶೇಖರ ಹಂಗರಗಿ. ಸಿ.ಎಸ್. ಗಣಾಚಾರಿ ಮತ್ತಿತರರು ಇದ್ದರು.

# ಜೂ. 1 ರಂದು ತೃತೀಯ ರಾಜ್ಯಮಟ್ಟದ ಬೃಹತ್ ವಧು-ವರರ ಸಮಾವೇಶ: ಕಕ್ಕೇರಿ ಚಂದ್ರಶೇಖರ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 15 : ಜೂನ್ 1, 2025 ರಂದು ರವಿವಾರ ಬೆ. 10 ರಿಂದ ಸಂಜೆ 6 ಗಂಟೆಯವರೆಗೆ ಕಲಬುರಗಿ ನಗರದ ಶ್ರೀ ಶರಣಬಸವೇಶ್ವರ ದೇವಾಲಯದ ಅನುಭವ ಮಂಟಪದಲ್ಲಿ ಶರಣಬಸವೇಶ್ವರ ಸಂಸ್ಥಾನ ಕಲಬುರಗಿ ಇವರ ಸಹಕಾರದೊಂದಿಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಜಿಲ್ಲಾ ಘಟಕ ಕಲಬುರಗಿ ಹಾಗೂ ಶಿವಪಾರ್ವತಿ ಮ್ಯಾಟ್ರಿಮುನಿಯಲ್ ಟ್ರಸ್ಟ್ ಕಲಬುರಗಿ ಇವರ ಸಹಯೋಗದಲ್ಲಿ ವೀರಶೈವ ಲಿಂಗಾಯತ ಸಮಾಜದ ಒಳಪಂಗಡಗಳ ತೃತೀಯ ರಾಜ್ಯಮಟ್ಟದ ಬೃಹತ್ ವಧು-ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಶಿವ-ಪಾರ್ವತಿ ಮ್ಯಾಟ್ರಿಮುನಿಯಲ್ ಟ್ರಸ್ಟ್ ಮುಖ್ಯಸ್ಥರು ಹಾಗೂ ಸಮಾವೇಶದ ಸಂಯೋಜ-ಕರಾದ ಕಕ್ಕೇರಿ ಚಂದ್ರಶೇಖರ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು 2023ರಲ್ಲಿ ವಧು-ವರರ ಸಮಾವೇಶ ಆರಂಭವಾಗಿದ್ದು, ಅಂದು 485 ಹಾಗೂ 2024ರಲ್ಲಿ




ದ್ವಿತೀಯ ಸಮಾವೇಶದಲ್ಲಿ 595 ವಧು-ವರರು ಪಾಲ್ಗೊಂಡಿದ್ದರು. ತೃತೀಯ ಸಮಾವೇಶದಲ್ಲಿ ಸಾವಿರಕ್ಕೂ ಅಧಿಕ ವಧು-ವರರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಈಗಾಗಲೇ 250ಕ್ಕೂ ಅಧಿಕ ವಧು-ವರರು ನೊಂದಣಿ ಮಾಡಿರುತ್ತಾರೆ. ನೊಂದಣಿ ಶುಲ್ಕ ರೂ. 1000 ನಿಗದಿಗೊಳಿಸಲಾಗಿದ್ದು, ಜೀವನ ಸಂಗಾತಿಯನ್ನು ಹೊಂದಿಸಿಕೊಳ್ಳುವ ವೇದಿಕೆ ಇದಾಗಿರುತ್ತದೆ ಎಂದರು.


ಶರಣಬಸವೇಶ್ವರ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ ಅಂದು ವೀರಶೈವ ಲಿಂಗಾಯತ ಸಮಾಜದ ಒಳಪಂಗಡಗಳಾದ ಜಂಗಮ, ಪಂಚಮಸಾಲಿ, ಬಣಜಿಗ, ದೀಕ್ಷಾ, ಆದಿ, ಬಣಗಾರ, ರೆಡ್ಡಿ ಮತ್ತು ಇನ್ನಿತರ ಒಳಪಂಗಡಗಳಾದ ಶಿವಸಿಂಪಿಗ, ನೇಕಾರ, ಕುಂಬಾರ, ಕಂಬಾರ, ಗಾಣಿಗ, ಸಜ್ಜನ ಗಾಣಿಗ, ಕರಿಕುಲ ಗಾಣಿಗ, ಕರುವಿನಶೆಟ್ಟಿ, ಹೂಗಾರ, ಕುಡ್ ವಕ್ಕಲಿಗ ಸೇರಿದಂತೆ ಮತ್ತಿತರ ಪಂಗಡದವರು ಈ ಸಮಾವೇಶದಲ್ಲಿ ಭಾಗವಹಿಸಬಹುದಾಗಿದೆ. ಕರ್ನಾಟಕ ಅದರಲ್ಲಿಯೂ ಕಲ್ಯಾಣ ಕರ್ನಾಟಕದ ಎಲ್ಲಾ ವರ್ಗದ ಸಮಾಜದ ಬಾಂಧವರು ವಿಶೇಷವಾಗಿ ಡಾಕ್ಟರ್, ಇಂಜಿನಿಯರ್, ರಾಜ್ಯದಲ್ಲಿ ಹಾಗೂ ಹೊರರಾಜ್ಯದಲ್ಲಿ ವಾಸವಾಗಿರುವ ಹಾಗೂ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ಮತ್ತು ಅರೆ ಸರ್ಕಾರಿ ನೌಕರಸ್ಥರು, ವ್ಯಾಪಾರಸ್ಥರು, ರೈತ ಕುಟುಂಬದ ವಧು-ವರರು ಈ ಸಮಾವೇಶದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬಹುದು. ವಿಶೇಷವಾಗಿ ಮರು ಮದುವೆ ಬಯಸುವವರು ಹಾಗೂ ತಡವಾಗಿ ಮದುವೆಯಾಗುತ್ತಿರುವ ಸಮಾಜ ಬಾಂಧವರು ಈ ಸಮಾವೇಶದಲ್ಲಿ ಪಾಲ್ಗೊಳ್ಳಲು ವಿಶೇಷ ಅವಕಾಶ ಕಲ್ಪಿಸಲಾಗಿದೆ ಎಂದರು. ಸಮಾವೇಶದ ಸಾನಿಧ್ಯವನ್ನು ಶರಣಬಸವೇಶ್ವರ ಸಂಸ್ಥಾನ ಪೀಠದ 8ನೇ ಪೀಠಾಧಿಪತಿ ಪೂಜ್ಯ ಶ್ರೀ ಡಾ. ಶರಣಬಸಪ್ಪ ಅಪ್ಪ ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಮಾತೋಶ್ರೀ ಡಾ. ದಾಕ್ಷಾಯಿಣಿ ಎಸ್. ಅಪ್ಪ ವಹಿಸಲಿದ್ದಾರೆ. ಶರಣಬಸವೇಶ್ವರ ಸಂಸ್ಥಾನದ ಒಂಭತ್ತನೇ ಪೀಠಾಧಿಪತಿ ಪೂಜ್ಯ ಶ್ರೀ ಚಿ. ದೊಡ್ಡಪ್ಪ ಅಪ್ಪ ಸಮಾರಂಭ ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣಪ್ರಕಾಶ ಆರ್ ಪಾಟೀಲ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ತಾನು ಹಾಗೂ ಅಖಿಲ ಭಾರತ ವೀ. ಲಿಂಗಾಯತ ಸಮಾಜದ ಜಿಲ್ಲಾಧ್ಯಕ್ಷ ಶರಣಕುಮಾರ ಮೋದಿ ಪಾಲ್ಗೊಳ್ಳುವರು ಎಂದರು. ಅಖಿಲ ಭಾರತ ವೀ. ಲಿಂಗಾಯತ ಮಹಾಸಭೆ ಬೀದರ ಜಿಲ್ಲಾಧ್ಯಕ್ಷ ವೈಜಿನಾಥ ಕಮಠಾಣೆ ಮಾತನಾಡಿ ಇದೊಂದು ವೀರಶೈವ ಲಿಂಗಾಯತರ ಹಿತದೃಷ್ಟಿಯಿಂದ ಮಾಡಲಾದ ವಧು-ವರರ ಸಮಾವೇಶದ ವೇದಿಕೆಯಾಗಿದ್ದು, ಸಮಾವೇಶದಲ್ಲಿ ಕಡ್ಡಾಯವಾಗಿ ವಧು-ವರರು ಹಾಜರಿರಬೇಕು. ವಧು-ವರರ ಜೊತೆ ಇಬ್ಬರಿಗೆ ಮಾತ್ರ ಅವಕಾಶ ಇರುತ್ತದೆ. ವಧು-ವರರು ಬರುವಾಗ ಬಯೋಡಾಟಾ ಮತ್ತು 4 ಮತ್ತು 6 ಅಳತೆಯ ಭಾವಚಿತ್ರ ತರಬೇಕು. ಮುಂಚಿತವಾಗಿ ನೊಂದಣಿ ಮಾಡಿಸುವವರು ಸಂಯೋಜಕರ ಮುಖಾಂತರ 30-05-2025ರ ಒಳಗಾಗಿ ನೊಂದಣಿ ಮಾಡಿಸಿದವರ ಭಾವಚಿತ್ರ ಮಾತ್ರ ಪ್ರದರ್ಶಿಸಲಾಗುವುದು. ಸಮಾವೇಶದ ದಿನವೂ ಸಹ ನೊಂದಣಿ ಮಾಡಿಸಬಹುದು. ಆದರೆ ಫೋಟೊ ಪ್ರದರ್ಶನ ಮಾಡಲಾಗುವುದಿಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಕಲಬುರಗಿಯ ಚನ್ನವೀರಪ್ಪ ಗುಡ್ಡಾ, ಸಂಜೀವಕುಮಾರ ಕಪಲಾಪುರ, ಸಿ.ಎಸ್. ಪಾಟೀಲ, ಮಾನಶೆಟ್ಟಿ ಬೆಳಕೇರಿ ಉಪಸ್ಥಿತರಿದ್ದರು.

# ಬೀದರ ಪ್ರಾಧಿಕಾರ ಅನುಮೋದಿತ ವಲಯ ನಿಯಮಾವಳಿಗಳಲ್ಲಿ ಬದಲಾವಣೆ ಮಾಡಲು ಮನವಿ

ಬೀದರ. ಮೇ. 15 : ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈಗಾಗಲೇ ಬೀದರ ನಗರದ ಮಹಾಯೋಜನೆಯು ಅನುಮೋದನೆಯಾಗಿ ಸುಮಾರು 10 ವರ್ಷಗಳ ಹಿಂದಿನ ವಲಯ ನಿಯಮಾವಳಿಗಳು ಚಾಲ್ತಿಯಲ್ಲಿ ಇರುತ್ತವೆ. ಆದ್ದರಿಂದ ಬೀದರ ನಗರ ಸಭೆ ಮಹಾನಗರ ಪಾಲಿಕೆ ಎಂದು ಘೋಷಿಸಿ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಬೀದರ ನಗರವು ವ್ಯಾಪಕವಾಗಿ ಅಭಿವೃದ್ಧಿ ಹೊಂದುತ್ತಿರುವದರಿಂದ ಹಾಗು ಹತ್ತಿರದಲ್ಲಿ ತೆಲಂಗಾಣಾ ರಾಜ್ಯದ ರಾಜಧಾನಿಯಾದ ಹೈದ್ರಾಬಾದ ನಗರದ ಕೈಗಾರಿಕಾ ಅಭಿವೃದ್ಧಿಗಳು ಬೀದರ ಗಡಿ ಭಾಗದ ತೆಲಂಗಾಣಾ ರಾಜ್ಯದ ಪ್ರದೇಶದಲ್ಲಿ ಹಲವಾರು ಕೈಗಾರಿಕೆ ಅಭಿವೃಧಿಗಳು





ಕೈಗೊಳ್ಳಲಾಗುತ್ತಿರುವದರಿಂದ ಬೀದರ ಜಿಲ್ಲೆಯಲ್ಲಿನ ನಿವೇಶನಗಳ ದರವು ಹಾಗು ಜಮೀನಿನ ದರವು ಹೆಚ್ಚಾಗುತ್ತಿದೆ ಹಾಗಾಗಿ ಈಗಿನ ವಲಯ ನಿಯಮವಳಿಯಂತೆ ಕೇವಲ 10 ಮೀ. ಗಳಷ್ಟು ಕಟ್ಟಡ ಎತ್ತರಕ್ಕೆ ಮಾತ್ರ ಅವಕಾಶ ವಿರುತ್ತದೆ ಹಾಗು ಈ.ಂ.ಖ 1.25 ಎಂದು ಇರುತ್ತದೆ. ಈ ನಿಯಮಗಳು ಕಾನುನಾತ್ಮಕವಾಗಿ ಕಟ್ಟಡ ನಿರ್ಮಿಸುವವರಿಗೆ ತೆ-ಊಂದರೆಯಾಗುತ್ತಿದೆ.

ಅದದ್ದರಿಂದ ವ್ಯಾಪಕವಾಗಿ ಅಭಿವೃದ್ಧಿ ಹೊಂದುತಿದ್ದು ಬೀದರ ನಗರದ ಆರ್ಥಿಕ ಬೆಳವಣಿಗೆಗಳು ಹಾಗು ಸಾರ್ವಜನಿಕ ಹಿತದೃಷ್ಟಿಯಿಂದ ಬಹುಮಹಡಿಗಳ ಕಟ್ಟಡಗಳಿಗೆ ಪ್ರೋತ್ಸಾಹಿಸಬೇಕಾಗಿರುತ್ತದೆ. ಆದ್ದರಿಂದ ನಮ್ಮ ಮನವಿಯನ್ನು ಪರಿಗಣಿಸಿ ಕಟ್ಟಡದ ಎತ್ತರ 15ಮೀ. ವರೆಗೆ ಕ್ರಮ ಕೈಗೊಳ್ಳಲು ಮಾನ್ಯರಿಗೆ ಕೋರಲಾಗಿದೆ.

# ಸಮತಾವಾದ ಮೌಲಿಕ ಗ್ರಂಥ: ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.15: ಬಸವಾದಿ ಶರಣರು 12ನೆಯ ಶತಮಾನದಲ್ಲಿ ಸಮಾನತೆಯ ರಾಜ್ಯದ ನಿರ್ಮಾಣಕ್ಕಾಗಿ ತ್ಯಾಗ ಬಲಿದಾನ ಮಾಡಿದ್ದರು ಎಂದು ಬಸವಕಲ್ಯಾಣ ಅನುಭವಮಂಟಪ ಟ್ರಸ್ಟ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು. ತಾಲೂಕಿನ ಖಟಕ್ ಚಿಂಚೋಳಿ ಕ್ರಾಸ್ ಸಮೀಪದ ವಿಕೆ ಪಾಟೀಲ್ ಕಲ್ಯಾಣ ಮಂಟಪದಲ್ಲಿ ಚೇನಕೇರಿ ಮತ್ತು ಬಿರಾದಾರ್ ಪರಿವಾರದ ಕಲ್ಯಾಣ ಮಹೋತ್ಸವದಲ್ಲಿ ಬಸವಧರ್ಮ ಪ್ರಸಾರ ಸಂಸ್ಥೆ ಹಿರೇಮಠ ಸಂಸ್ಥಾನ ಭಾಲ್ಕಿ ಪ್ರಕಾಶಿತ ಶಿವಸ್ವಾಮಿ ಚೇನಕೇರಿ



ಬರೆದ ಸಮತಾವಾದ ಗ್ರಂಥ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಶಿವಸ್ವಾಮಿ ಚೇನಕೇರಿ ಅವರು ಬರೆದಿರುವ ಕೃತಿ ಬಸವಾದಿ ಶರಣರ ಸಮಾನತೆಯ ಮೌಲ್ಯವನ್ನು ಎತ್ತಿ ಹಿಡಿಯುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹುಲಸೂರು ಗುರುಬಸವೇಶ್ವರ ಸಂಸ್ಥಾನ ಮಠದ ಡಾ.ಶಿವಾನಂದ ಸ್ವಾಮೀಜಿ, ಬಸವಕಲ್ಯಾಣ ಕಲ್ಯಾಣ ಮಹಾಮನೆಯ ಬಸವಪ್ರಭು ಸ್ವಾಮೀಜಿ, ಸಾಯಿಗಾಂವ ಗುರುಬಸವೇಶ್ವರ ವಿರಕ್ತ ಮಠದ ಶಿವಾನಂದ ಸ್ವಾಮೀಜಿ, ಶಂಕರಲಿಂಗ ಸ್ವಾಮೀಜಿ ಧೂಮನಸೂರ, ಮನ್ನಾಏಖ್ಖೇಳಿ ಬಸವ ಮಹಾಮಠದ ಮಾತೆ ಮೈತ್ರಾದೇವಿ ತಾಯಿ, ಬಸವಕಲ್ಯಾಣ ಶ್ರೀಗುರುಬಸವ ಯೋಗ ಕೇಂದ್ರದ ಗಾಯತ್ರಿತಾಯಿ,

ಸುಗುಣತಾಯಿ. ಅಲ್ಲಮಪ್ರಭು ನಾವದಗೇರೆ, ಅನೀಲಕುಮಾರ ಬಿರಾದಾರ. ವೈಜಿನಾಥ ಸಜ್ಜನಶೆಟ್ಟಿ. ವಿದ್ಯಾವತಿ ಸಜ್ಜನಶೆಟ್ಟಿ, ರೇವಮ್ಮಾ ಚೇನಕೇರಿ, ಲಿಂಗಾರ್ಚನಾ ಚೇನಕೇರಿ, ಲಿಂಗಾರತಿ ನಾವದಗೇರೆ, ಲಕ್ಷಿ ??ಬಾಯಿ ಬಿರಾದಾರ ಸೇರಿದಂತೆ ಹಲವರು ಇದ್ದರು.

# ಮಲ್ಲಮ್ಮಳ ಜಯಂತಿಯಿಂದ ಜನರಲ್ಲಿ ಸಾಮರಸ್ಯ ಮೂಡಿದೆ : ಡಾ. ಎಸ್.ಬಿ ಕಾಮರಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಈ ಪವಿತ್ರ ಭರತ ಭೂಮಿಯಲ್ಲಿ ಅನಾದಿ ಕಾಲದಿಂದ ಶರಣರು-ಶಿವ ಶರಣೇಯರು ತಮ್ಮ ಆಧ್ಯಾತ್ಮಿಕ ಶಕ್ತಿಯಿಂದ ಸಮಾಜಕ್ಕೆ ಒಳ್ಳೇಯ ಸಂದೇಶಗಳನ್ನು ನೀಡುವ ಮೂಲಕ ಸಮಾಜಕ್ಕೆ ಅಗತ್ಯ ಮಾರ್ಗದರ್ಶನ ಹಾಗೂ ಶಕ್ತಿ ತುಂಬಿ ಲೋಕ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ, ಬಹುತೇಕ ಕ್ಷೇತ್ರಗಳಲ್ಲಿ ಹಿಂದುಳಿದಿರುವ ವಡಗೇರಾ ಪಟ್ಟಣದಲ್ಲಿ ಹಮ್ಮಿಕೊಂಡಿರುವ ಶಿವ ಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮದಿಂದ ಜನರಲ್ಲಿ ಒಗ್ಗಟ್ಟು, ಸಾಮರಸ್ಯ ಮೂಡಿದೆ ಎಂದು ಕಲಬುರಗಿ ಜಿಲ್ಲಾ ರಡ್ಡಿ ಸಮಾಜದ ಅಧ್ಯಕ್ಷರಾದ ಡಾ. ಶರಣಬಸಪ್ಪ ಬಿ. ಕಾಮರಡ್ಡಿ ಹೇಳಿದರು.

ಜಿಲ್ಲೆಯ ವಡಗೇರಾ ಪಟ್ಟಣದ ಶಿವ ಬಾಲಾಜಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಮಾತನಾಡಿದ ಅವರು, ನಾವೂ ಹಿಂದಿನಿಂದಲು ಗ್ರಾಮೀಣ ಭಾಗದಲ್ಲಿ ನಾಯಕತ್ವ ಗುಣ ಮೈಗೂಡಿಸಿಕೊಂಡು ಎಲ್ಲಾ ವರ್ಗದ ಜನರ ಜೊತೆ ಶಾಂತಿ, ಪ್ರೀತಿ ವಿಶ್ವಾಸದಿಂದ ನಡೆದುಕೊಂಡು ಬಂದಿದ್ದೇವೆ, ಅದರ ಪರಿಣಾಮ ಮಲ್ಲಮ್ಮಳನ್ನು ಇನ್ನೂ ಎಲ್ಲಾ ವರ್ಗದ ಜನರು ಭಕ್ತಿಯಿಂದ ಪೂಜಿಸುತ್ತಾರೆ ಎಂದು ಅಭಿಪ್ರಾಯ ಪಟ್ಟರು.

ಇಂದು ನಾವೆಲ್ಲರೂ ಬದಲಾದ ಸನ್ನಿವೇಶದಲ್ಲಿ ತಾಳ್ಮೆ, ವಿವೇಕದಿಂದ ನಮ್ಮ ಮಕ್ಕಳಿಗೆ ತಪ್ಪದೇ ಶಿಕ್ಷಣ ಒದಗಿಸಬೇಕು ಅಂದಾಗ ಮಾತ್ರ ಅವರು ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿ, ಆ ಕುಟುಂಬಗಳಿಗೆ ಹಾಗೂ ಸಮಾಜಕ್ಕೆ ಶಕ್ತಿ ತುಂಬುತ್ತಾರೆ, ಇದನ್ನು ಅರಿತು ಸಮಾಜದ ವತಿಯಿಂದ ಕಲಬುರಗಿಯಲ್ಲಿ ಕೆಲ ದಿನಗಳ ಹಿಂದೆ ಗ್ರಾಮೀಣ ವಿಧ್ಯಾರ್ಥಿನಿಯರು ಪದವಿ ಇನ್ನಿತರ ಕೋರ್ಸ್‌ಗಳಲ್ಲಿ ಅಭ್ಯಾಸ ಮಾಡಲು ಅನುಕೂಲವಾಗುವ ದೃಷ್ಟಿಯಿಂದ ಹೇಮರಡ್ಡಿ ಮಲ್ಲಮ್ಮ ವಿಧ್ಯಾರ್ಥಿನಿಯರ ವಸತಿ ನಿಲಯ ಆರಂಭಿಸಲಾಗಿದೆ, ಹಾಗೂ ಭವ್ಯ ಮಂದಿರ ನಿರ್ಮಾಣ ಮಾಡುವ ಚಿಂತನೆ ಇದೆ, ಇದರಿಂದ ಅವರ ಬದುಕು, ಸಾಧನೆ, ಆಧ್ಯಾತ್ಮಿಕ ಚಿಂತನೆಗಳನ್ನು ಜನರಿಗೆ ತಲುಪಿಸುವ ಮೂಲಕ ಬದಲಾವಣೆಗೆ ಪ್ರಾಮಾಣಿಕ ಪ್ರಯತ್ನ ಮಾಡುವ ಮಹತ್ವದ ಉದ್ದೇಶಗಳನ್ನು ಹೊಂದಿದ್ದೇವೆ ಎಂದು ವಿವರಿಸಿ, ಅದರಂತೆ ಹಿಂದುಳಿದಿರುವ ಗಿರಿ ಜಿಲ್ಲೆಯ ಸಮಾಜದಲ್ಲಿ ಮಾನವ ಸಂಪನ್ಮೂಲಕ್ಕೆ ಏನು ಕೊರತೆಯಿಲ್ಲ, ಎಲ್ಲರೂ ಒಗ್ಗಟ್ಟಾಗಿ ಕೂಡಿ ಸಮಾಜಕ್ಕೆ ಅನುಕೂಲವಾಗುವ ರಚನಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಅವಶ್ಯಕವಾಗಿದೆ ಎಂದರು.

ರಡ್ಡಿ ಸಮಾಜದ ಹಿರಿಯ ಮುಖಂಡರಾದ ರಾಚನಗೌಡ ಮುದ್ನಾಳ ಮಾತನಾಡಿ, ಸಮಾಜಕ್ಕೆ ಭವ್ಯ ಇತಿಹಾಸವಿದೆ, ಶ್ರೀಶೈಲ ಜಗದ್ಗುರುಗಳಾದ ಡಾ. ಚನ್ನ ಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಜಿ, ಸಂಕಲ್ಪ ಹಾಗೂ ಮಾರ್ಗದರ್ಶನದಲ್ಲಿ 2016ರಲ್ಲಿ ನಾಡಿನ ತುಂಬೆಲ್ಲಾ ನಮ್ಮ ಸಮಾಜದ ಮುಖಂಡರು ಹಾಗೂ ಎಲ್ಲರೂ ಕೂಡಿ, ಹೇಮರಡ್ಡಿ ಮಲ್ಲಮ್ಮ ಚೈತನ್ಯ ರಥಯಾತ್ರೆ ಹಮ್ಮಿಕೊಳ್ಳಲಾಯಿತು, ಇದ-ರಿಂದ ಜನರಲ್ಲಿ ಜಾಗೃತಿ, ಒಗ್ಗಟ್ಟು ಮೂಡಿತು, ಪರಿಣಾಮ ಅಂದಿನ ರಾಜ್ಯ ಸರ್ಕಾರ ಮಲ್ಲಮ್ಮಳ ಜಯಂತಿಯನ್ನು ಪ್ರತಿ ವರ್ಷ ಮೇ.10 ರಂದು ಸರ್ಕಾರದಿಂದ ಆಚರಿಸಲು ತೀರ್ಮಾನ ಕೈಗೊಂಡಿತು, ಅದರಂತೆ ಕಲಬುರಗಿ ವಿಶ್ವವಿಧ್ಯಾನಿಲಯದಲ್ಲಿ ಅಧ್ಯಯನ ಪೀಠ ಆರಂಭಿಸಲಾಯಿತು ಎಂದು ಹೇಳಿದರು.



ನಾವೂ ಹಲವಾರು ಸಂದರ್ಭದಲ್ಲಿ ಸಮಾಜದ ಜನರು ಒಗ್ಗಟ್ಟು ಪ್ರದರ್ಶನ ಮಾಡಿ, ಹಲವಾರು ಕಾರ್ಯಗಳ ಯಶಸ್ವಿಗೆ ಕಾರಣಿಭೂತರಾಗಿದ್ದೀರಿ, ನಮ್ಮಲ್ಲಿರುವ ಸಣ್ಣ-ಪುಟ್ಟ ಭಿನ್ನಾಭಿಪ್ರಾಯಗಳನ್ನು ಮರೆತು, ಸಮಾಜದ ಸಂಘಟನೆಗೆ ಹಾಗೂ ಈ ಭಾಗದ ಅಭಿವೃದ್ಧಿಗೆ ಎಲ್ಲರೂ ಗಮನ ಹರಿಸುವುದು ಅಗತ್ಯವಾಗಿದೆ ಎಂದು ಸಲಹೆ ನೀಡಿದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ ನೇರಡಗುಂಬ-ಕೋಡಾಲದ ಶ್ರೀಗಳಾದ ಪಂಚಮ ಸಿದ್ದಲಿಂಗ ಮಹಾಸ್ವಾಮಿಜಿ ಆಶೀರ್ವಚನ ನೀಡಿ, ವಡಗೇರಾ ಭಾಗದ ಜನರು ಅಧೃಷ್ಟವಂತರು ಏಕೇಂದರೆ ಇಲ್ಲಿ ಭೀಮಾ-ಕೃಷ್ಣಾ ನದಿಗಳು ಹರಿಯುತ್ತವೆ, ಇದರಿಂದ ರೈತಾಪಿ ಕುಟುಂಬಗಳು ಹಲವಾರು ಕಷ್ಟಗಳನ್ನು ಎದುರಿಸಿ, ಕೃಷಿ ಕ್ಷೇತ್ರದಲ್ಲಿ ಹೆಚ್ಚಾಗಿ ತೊಡಗಿ-ಕೊಂಡಿದ್ದಾರೆ, ಯುವಕರ ತಂಡ ಮಲ್ಲಮ್ಮಳ ಜಯಂತಿ ಆಚರಿಸುವ ಮೂಲಕ ಸಮಾಜಕ್ಕೆ ಒಳ್ಳೇಯ ಸಂದೇಶ ನೀಡಿದ್ದಾರೆ ಎಂದು ನುಡಿದರು.

ಅದರೆ ನಿವೆಲ್ಲರೂ ಇಷ್ಟೊಂದು ಆಡಂಬರಕ್ಕೆ ಇನ್ನೋಮ್ಮೆ ಹೆಚ್ಚು ಅವಕಾಶ ನೀಡದೇ, ಜನರಿಗೆ ಮಲ್ಲಮ್ಮಳ ವಿಚಾರಗಳನ್ನು ತಲುಪಿಸುವ ಪ್ರಯತ್ನ ಮಾಡಬೇಕು, ಅಂದಾಗ ಮಾತ್ರ ಜಯಂತಿ ಆಚರಣೆಗೆ ಹೆಚ್ಚಿನ ಮೌಲ್ಯ ಬರುತ್ತದೆ ಎಂದು ಸಲಹೆ ನೀಡಿ, ಎಲ್ಲರೂ ವೀರಶೈವ ಲಿಂಗಾಯತ ಧಾರ್ಮಿಕ ಆಚರಣೆಗಳನ್ನು ದೈನಂದಿನ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಗಮನ ಹರಿಸಬೇಕೆಂದು ಕಿವಿ ಮಾತು ಹೇಳಿದರು.

ವೇದಿಕೆ ಮೇಲೆ ಸಂಗಮದ ಶ್ರೀಗಳಾದ ಶ್ರೀ ಕರುಣೇಶ್ವರ ಮಹಾಸ್ವಾಮಿಜಿ, ಹೆಡಗಿಮದ್ರಾದ ಶಾಂತ ಶಿವಯೋಗಿ ಮಠದ ಶ್ರೀಗಳಾದ ಶಾಂತ ಮಲ್ಲಿಕಾರ್ಜುನ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಜಿ, ಅಬ್ಬೆತುಮಕುರಿನ ವಿಶ್ವಾ-ರಾಧ್ಯ ಸಿದ್ದ ಸಂಸ್ಥಾನ ಮಠದ ಕಿರಿಯ ಶ್ರೀಗಳಾದ ಶಿವಶೇಖರ ಮಹಾಸ್ವಾಮಿಜಿ, ರಡ್ಡಿ ಸಮಾಜದ ಜಿಲ್ಲಾಧ್ಯಕ್ಷರಾದ ರಾಮರಡ್ಡಿಗೌಡ ತಂಗಡಗಿ ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಬೆಳಿಗ್ಗೆ 11ಕ್ಕೆ ಪಟ್ಟಣದ ಬಿಳ್ಹಾರ ಕ್ರಾಸ್‌ನಿಂದ ಆರಂಭಗೊಂಡ ಮಲ್ಲಮ್ಮಳ ಭಾವಚಿತ್ರ ಮೆರವಣಿಗೆಗೆ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು, ಅವರ ಜೊತೆಯಲ್ಲಿ ಹಿರಿಯ ಮುಖಂಡರಾದ ಅಂಬರೀಶಗೌಡ ದರ್ಶನಾಪೂರ, ಶ್ರೀನಿವಾಸರಡ್ಡಿ ಪಾಟೀಲ್ ಚನ್ನೂರ, ಸಿದ್ಲಿಂಗರಡ್ಡಿ ಉಳ್ಳೆಸೂಗೂರ, ಡಾ. ಅಮರಣ್ಣಗೌಡ ಗಡ್ಡೆಸೂಗೂರ, ಸದಾಶಿವಪ್ಪಗೌಡ ರೊಟ್ನಡಗಿ, ಡಾ. ಸುಭಾಷ ಕರಣಗಿ, ಸಿದ್ದಲಿಂಗರಡ್ಡಿ ಸಾಹು ಹತ್ತಿಗೂಡೂರ, ಬಸವರಾಜ ಸೊನ್ನದ, ಸಿದ್ದಣಗೌಡ ಕಾಡಂನೋರ, ಮಹೇಶರಡ್ಡಿ ಮುದ್ನಾಳ, ಗುರುನಾಥರಡ್ಡಿ ಕದರಾಪುರ, ಚನ್ನಾರಡ್ಡಿ ಬಿಳ್ಹಾರ, ಶಂಕರರಡ್ಡಿ ಮಾಲಿ ಪಾಟೀಲ್ ವಡಗೇರಾ, ಸಿದ್ದು ಕಾಮರಡ್ಡಿ, ಸನ್ನಿಗೌಡ ತುನ್ನೂರ, ಶಶಿಧರರಡ್ಡಿ ಹೊಸಳ್ಳಿ, ಬಸವಂತರಡ್ಡಿ ಮಲ್ಹಾರ, ಬಸವರಾಜ ನೀಲಹಳ್ಳಿ, ಗೌರಿಶಂಕರಯ್ಯಸ್ವಾಮಿ, ಚಂದ್ರಶೇಖರಗೌಡ ಗೋನಾಲ, ಚನ್ನಪ್ಪಗೌಡ ಮೋಸಂಬಿ, ಮಲ್ಲಿಕಾರ್ಜುನರಡ್ಡಿ ಗೌಡರಡ್ಡಿ ಬಿಳ್ಹಾರ, ಬಾಬುಗೌಡ ಮಾಚನೂರ, ಮಾಣಿಕರಡ್ಡಿ ಕುರಕುಂದಿ, ಪರ್ವತರಡ್ಡಿ ಬೆಂಡೆಬೆಂಬಳಿ, ಸಂಗುಗೌಡ ಮಾಲಿ ಪಾಟೀಲ್ ವಡಗೇರಾ, ಮಲ್ಲುಗೌಡ ಪೊಲೀಸ್ ಪಾಟೀಲ್, ಜಗನ್ನಾಥರಡ್ಡಿ ಹಾಲಗೇರಾ, ಮಲ್ಲಿಕಾರ್ಜುನಗೌಡ ಅನಕಸೂಗೂರ, ಪ್ರಭುಗೌಡ ತುಮಕುರ, ಶರಣಗೌಡ ಗಡ್ಡೆಸೂಗೂರ, ಮಲ್ಲಿಕಾರ್ಜುನರಡ್ಡಿ ವಡ್ಡಡಗಿ, ದೇವುಗೌಡ ರಾಮನಾಳ, ಮಹಿಪಾಲರಡ್ಡಿ ಗುಂಡಗುರ್ತಿ, ಅಬ್ದುಲ್ ಚಿಗಾನೂರ, ಅಪ್ಪುಗೌಡ ಕೋನಳ್ಳಿ ಸೇರಿದಂತೆ ಎಲ್ಲಾ ವರ್ಗದ ಜನರು ಮೆರವಣಿಗೆಯಲ್ಲಿ ಉಪಸ್ಥಿತರಿದ್ದರು. ಪ್ರಭುಗೌಡ ಹಬಸಿಹಾಳ ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಅಮರಯ್ಯ ಜಾಲಿಬೆಂಚಿ ನಿರೂಪಿಸಿದರೇ, ವಿರೇಶ ರಾಚರಡ್ಡಿ ವಂದಿಸಿದರು.

ಆಲಮಟ್ಟಿ- ಹುಣಸಗಿ-ಯಾದಗಿರಿ ರೈಲು ಮಾರ್ಗ ಸಮೀಕ್ಷೆಗೆ ಹಸಿರು ನಿಶಾನೆ..

## ಅಂತಿಮ ಸ್ಥಳ ಸಮೀಕ್ಷೆಗೆ 4.05 ಕೋಟಿ ವೆಚ್ಚದಲ್ಲಿ ಅನುಮೋದನೆ ದೊರೆತಿದೆ:ಸಂಸದ ಜಿ ಕುಮಾರ ನಾಯಕ...

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಶ್ರೀ ಜಿ ಕುಮಾರ ನಾಯಕರವರು ಡಿಸೆಂಬರ್‌ನಲ್ಲಿ, ಮಾನ್ಯ ಕೇಂದ್ರ ರೈಲ್ವೆ ಸಚಿವರನ್ನು ಭೇಟಿಯಾಗಿ ಈ ಪ್ರಮುಖ ಯೋಜನೆಗೆ ಅನುಮೋದನೆ ನೀಡಿವಂತೆ ಒತ್ತಾಯಿಸಿದರು, ನಂತರ ಏಪ್ರಿಲ್‌ನಲ್ಲಿ ಸಚಿವರ ಕಾರ್ಯನಿರ್ವಾಹಕ ನಿರ್ದೇಶಕರಾದ ಶ್ರೀ ವಿಕಾಸ್ ಜೈನ್ ಅವರನ್ನು ಭೇಟಿಮಾಡಿ ತ್ವರಿತವಾಗಿ ಅನುಮೋದನೆ ನೀಡುವಂತೆ ಒತ್ತಾಯಿಸಿದರ ಫಲ ಇಂದು ಸಮೀಕ್ಷೆಗೆ 4.05



ಕೋಟಿ ಮಂಜೂರಾಗಿದೆ. ಆಲಮಟ್ಟಿ ಯಾದಗಿರಿ ನಡುವಿನ 162 ಕಿಮೀ ಉದ್ದದ ನೂತನ ರೈಲು ಮಾರ್ಗದ ಅಂತಿಮ ಸರ್ವೆ ಕಾರ್ಯ ಮಾಡಲು ಕೇಂದ್ರ ರೈಲ್ವೆ ಇಲಾಖೆ ಇಂದು ಆದೇಶಿಸಿದೆ. ಈ ಯೋಜನೆಯು ವಿಶೇಷವಾಗಿ ಆಲಮಟ್ಟಿ-ಹುಣಸಿಗಿ-ಯಾದಗಿರಿ ಭಾಗದ ಜನರ ಬಹುಕಾಲದ ಬೇಡಿಕೆಯಾಗಿತ್ತು, ಇದರಿಂದ ಸಂಪರ್ಕವನ್ನು ಸುಧಾರಿಸಲು ಮತ್ತು ಆರ್ಥಿಕ ಸಾಮರ್ಥ್ಯವನ್ನು ಮತ್ತಷ್ಟು ದೃಢಪಡಿಸುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ. ಇದು ಪ್ರಾದೇಶಿಕ ಅಭಿವೃದ್ಧಿ ಮತ್ತು ಸಮಗ್ರ ಬೆಳವಣಿಗೆಗೆ ದೊಡ್ಡ ಉತ್ತೇಜನವಾಗಿದೆ ಎಂದು ಮಾತನಾಡಿದವರು. ರೈಲ್ವೆ ಸಚಿವಾಲಯವು ತ್ವರಿತವಾಗಿ ಸ್ಪಂದಿಸಿದ್ದಕ್ಕಾಗಿ ಸಂಸದ ಜಿ ಕುಮಾರ ನಾಯಕರವರು ಯಾದಗಿರಿ ಜಿಲ್ಲೆಯ ಪರವಾಗಿ ಕೃತಜ್ಞತೆಗಳನ್ನು ತಿಳಿಸಿದರು.

## ಬೀಜ ಖರೀದಿಸುವಾಗ ವಹಿಸಬೇಕಾದ ಮುಂಜಾಗ್ರತೆ ಕ್ರಮಗಳ ಕುರಿತು ಅರಿವು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 15- : ತೆಲಂಗಾಣ ಗಡಿ ಭಾಗದ ಗ್ರಾಮಗಳಲ್ಲಿ ಗುಣಮಟ್ಟದ ಹತ್ತಿ ಬಿತ್ತನೆ ಬೀಜಗಳ ಆಯ್ಕೆ ಮತ್ತು ಬೀಜ ಖರೀದಿಸುವಾಗ ವಹಿಸಬೇಕಾದ ಮುಂಜಾಗ್ರತೆ ಕ್ರಮಗಳ ಕುರಿತು ಅರಿವು ಮೂಡಿಸಲಾಯಿತು ಎಂದು ಯಾದಗಿರಿ ಜಂಟಿ ಕೃಷಿ ನಿರ್ದೇಶಕರು ರಾಜಕುಮಾರ ಅವರು ಹೇಳಿದರು.

ಯಾದಗಿರಿ ಜಿಲ್ಲೆಯ ಕೊಂಕಲ್ ಹೋಬಳಿಯ ತೆಲಂಗಾಣ ಗಡಿ ಭಾಗದ ಗ್ರಾಮಗಳಾದ ಕುಂಟಿಮರಿ ಮತ್ತು ಗೂರನೂರು ಗ್ರಾಮಗಳಲ್ಲಿ ಉತ್ತಮ ಗುಣಮಟ್ಟದ ಹತ್ತಿ ಬಿತ್ತನೆ ಬೀಜಗಳ ಆಯ್ಕೆ ಮತ್ತು ಹತ್ತಿ ಬೀಜಗಳನ್ನು ಖರೀದಿಸುವಾಗ ವಹಿಸಬೇಕಾದ ಮುಂಜಾಗ್ರತೆ ಕ್ರಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಗುಣಮಟ್ಟದ ಹತ್ತಿ ಬೀಜಗಳನ್ನು ಬಿತ್ತನೆಗೆ ಬಳಸಿ ಅಧಿಕೃತ ಮಾರಾಟಗಾರರಿಂದ ಬೀಜಗಳನ್ನು ಖರೀದಿಸಿ ಮತ್ತು ಕಡ್ಡಾಯವಾಗಿ ರಶೀದಿಯನ್ನು ಪಡೆಯಿರಿ. ಅನಧಿಕೃತ ವ್ಯಕ್ತಿಗಳು ಬೀಜ ಮಾರಾಟ ಮಾಡಿದರೆ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ಒದಗಿಸಿ ಮತ್ತು ಭತ್ತ ಕಟಾವು ನಂತರ ಭತ್ತದ ಹುಲ್ಲನ್ನು ಸುಡಬೇಡಿ ಮಣ್ಣಿನ ಫಲವತ್ತೆಯನ್ನು ಕಾಪಾಡಿ ಎಂದು ರೈತರಿಗೆ ತಿಳಿಸಿದರು.

ಕೋಂಕಲ್ ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿಗಳಾದ ಶ್ರೀ ಮಹಿಪಾಲರೆಡ್ಡಿ ಅವರು ಮಾತನಾಡಿ, ಕೃಷಿ ಇಲಾಖೆದಿಂದ ಸಿಗುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿ ಯೋಜನೆಗಳ ಸದುಪಯೋಗಪಡೆದುಕೊಳ್ಳಬೇಕು ಎಂದು ರೈತರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗೂರುನೂರು ಗ್ರಾಮದ ರೈತರಾದ ರಾಜು ರೆಡ್ಡಿ, ಹನಮರೆಡ್ಡಿ, ಶ್ರೀಧರ್, ಆನಂದ, ರಾಘವರೆಡ್ಡಿ ಮತ್ತು ಕುಂಟಿಮರಿ ಗ್ರಾಮದ ರೈತರಾದ ಭಗವಂತ, ಬಸವರಾಜ ಮತ್ತು ಬಾಲರೆಡ್ಡಿ ಇನ್ನಿತರರು ಉಪಸ್ಥಿತರಿದ್ದರು.



ಭಾಲ್ಕಿ: ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ 7,8.9,10ನೇ ತರಗತಿಗಳ ಬೇಸಿಗೆ ಶಿಬಿರದಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು.

## ಗೃಹಲಕ್ಷ್ಮೀ ಯೋಜನೆ: ಸಹಾಯಧನ ಜಮಾ ಆಗದೇ ಇರುವ ಫಲಾನುಭವಿಗಳು ಸಂಪರ್ಕಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.15-ಗೃಹಲಕ್ಷ್ಮೀ ಯೋಜನೆಯಡಿ ಕುಟುಂಬದ ಮಹಿಳಾ ಯಜಮಾನಿಗೆ ಪ್ರತಿ ತಿಂಗಳು 2000 ರೂ. ಗಳ ಸಹಾಯಧನವನ್ನು ಸರ್ಕಾರದಿಂದ ನೇರವಾಗಿ ಡಿ.ಬಿ.ಟಿ. ಮೂಲಕ ಪಾವತಿಸಲಾಗುತ್ತಿದೆ. ಆದ-ರೆ ಕಲಬುರಗಿ ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಯಾಗಿರುವ ಫಲಾನುಭವಿಗಳಿಗೆ 2025 ಜನವರಿ ಮಾಹೆಯವರೆಗೆ ಅವರ ಖಾತೆಗೆ ಮಾಸಿಕ ಧನಸಹಾಯವನ್ನು ಪಾವತಿಸಲಾಗಿದೆ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಆದರೆ ಕೆಲವು ಫಲಾನುಭವಿಗಳು ಸಹಾಯಧನ ಜಮಾ ಆಗಿರುವುದಿಲ್ಲ ಎಂದು ಮನವಿ ಸಲ್ಲಿಸುತ್ತಿದ್ದು, ಸದರಿ ತಿಂಗಳುಗಳ ಧನ ಸಹಾಯವು ಯಾವ ಫಲಾನುಭವಿಗಳ ಖಾತೆಗೆ ಪಾವತಿಸಲಾಗಿರುವುದಿಲ್ಲವೊ, ಅಂತಹ ಫಲಾನುಭವಿಗಳು ಸಂಬಂಧಪಟ್ಟ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸಂಪರ್ಕಿಸಬೇಕು.

ಸಂಪರ್ಕಿಸಬೇಕಾದ ತಾಲೂಕುವಾರು ದೂರವಾಣಿ ಸಂಖ್ಯೆಗಳ ವಿವರ ಇಂತಿದೆ. ಅಫಜಲಪೂರ ತಾಲೂಕು: ಮನೋಜ-9901560061, ಆಳಂದ ತಾಲೂಕು: ಚನ್ನಬಸಯ್ಯಾ-9480894476, ಚಿತ್ತಾಪೂರ ತಾಲೂಕು: ಚಂದ್ರಿಕಾ-88617271115, ಚಿಂಚೋಳಿ ತಾಲೂಕು: ಅವದೋತ-8861190417, ಕಲಬುರಗಿ (ನಗರ): ಪ್ರೀಯಾಂಕ-7975790070, ಕಲಬುರಗಿ (ಗ್ರಾಮೀಣ) ತಾಲೂಕು: ವರ್ಷಾ-9686168183, ಜೇವರ್ಗಿ ತಾಲೂಕು: ಪ್ರಕಾಶ-9880208047, ಸೇಡಂ ತಾಲೂಕು: ಗುರುದೇವಿ-9590863239. ಶಹಾಬಾದ ತಾಲೂಕು: ಸಚಿನ್-9686291861.

ಫಲಾನುಭವಿಗಳು ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳು ಸೂಚಿಸಿದ ಅಗತ್ಯ ದಾಖಲಾತಿಗಳನ್ನು ಒದಗಿಸಿದ್ದಲ್ಲಿ, ಅಂತಹ ಫಲಾನುಭವಗಳಿಗೆ ಗೃಹಲಕ್ಷ್ಮಿ ಯೋಜನೆಯ ಧನ ಸಹಾಯವನ್ನು ಪಾವತಿಸಲು ಕ್ರಮವಹಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

## ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ.) ಕೋರ್ಸ್‌ಗೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.15-ಪ್ರಸಕ್ತ 2025-26ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ದಿನಾಂಕ: 01-07-2025ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳ ವಯೋಮಿತಿ 15 ರಿಂದ 23 ವರ್ಷದೊಳಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ವಯೋಮಿತಿ 15 ರಿಂದ 25 ವರ್ಷದೊಳಗಿರಬೇಕು.

ಸಂಸ್ಥೆಗಳ ವಿವರ ಇಂತಿದೆ: ಕರ್ನಾಟಕದ ಗದಗ-ಬೆಟಗೇರಿಯಲ್ಲಿನ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 22 ಅಭ್ಯರ್ಥಿಗಳಿಗೆ, ತಮಿಳುನಾಡು ಸೇಲಂದಲ್ಲಿನ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 12 ಅಭ್ಯರ್ಥಿಗಳಿಗೆ, ಆಂಧ್ರಪ್ರದೇಶ ನೆಲ್ಲೂರು ಜಿಲ್ಲೆಯ ವೆಂಕಟಗಿರಿ ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 03 ಅಭ್ಯರ್ಥಿಗಳಿಗೆ ಹಾಗೂ ಕೇರಳದ ಕಣ್ಣೂರಿನ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 02 ಅಭ್ಯರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುತ್ತದೆ.

ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು 2,500 ರೂ.ರಂತೆ ಶಿಷ್ಯವೇತನ ನೀಡಲಾಗುತ್ತದೆ. ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುತ್ತದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು https://khtigadag.ac.in/AdmissionForm.pdf ದಿಂದ ಅಥವಾ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದಿಂದ ಪಡೆಯಬೇಕು. ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲಾತಿಗಳೊಂದಿಗೆ ಲಗತ್ತಿಸಿ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102" ಇವರಿಗೆ 2025ರ ಜೂನ್ 15 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372-297221, ಮೊಬೈಲ್ ಸಂಖ್ಯೆ: 9449162822 ಅಥವಾ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಕಲಬುರಗಿ ಕಚೇರಿಯನ್ನು ಹಾಗೂ ದೂರವಾಣಿ ಸಂ-ಖ್ಯೆ08472-278629 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 02ನೇ ವರ್ಷದ

## ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್‌ಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಕಲಬುರಗಿ,ಮೇ.15-ಪ್ರಸಕ್ತ 2025-26ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ ಕೆಳಕಂಡ ಸಂಸ್ಥೆಗಳಲ್ಲಿ 02ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಪ್ರವೇಶಕ್ಕಾಗಿ 10 ಜನ ಅರ್ಹ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ವಿದ್ಯಾರ್ಹತೆ ವಿವರ ಇಂತಿದೆ. ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರದೊಂದಿಗೆ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ 10ನೇ ತರಗತಿ ತೇ-ರ್ಗಡೆ+(2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶಕ್ಕೆ ಅರ್ಹರು ಅಥವಾ 10+2 ಪಾಸ್+(2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶ ಪಡೆಯಲು ಅರ್ಹರು. ಜವಳಿ ವಿಭಾಗದ ವೃತ್ತಿಪರ ಸ್ಟ್ರೀಮ್‌ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಐ.ಐ.ಹೆಚ್.ಟಿ ನಡೆಸುವ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರದಲ್ಲಿ ಬ್ರಿಡ್ಜ್ ಕೋರ್ಸ್‌ನ್ನು ಅಭ್ಯಾಸ ಮಾಡಬೇಕು.

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೊಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ. ಲ್ಯಾಟರಲ್ ಎಂಟ್ರಿ ಮುಖಾಂತರ 2 ನೇ ವರ್ಷದ ಡಿಪ್ಲೋಮಾ ಕೋರ್ಸಗೆ ನೇರ ಪ್ರವೇಶಕ್ಕಾಗಿ ಲಭ್ಯವಿರುವ ಸಂಸ್ಥೆಗಳ ವಿವರ ಇಂತಿದೆ.

ಕರ್ನಾಟಕದ ಗದಗ-ಬೆಟಗೇರಿ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ-02 ಅಭ್ಯರ್ಥಿಗಳಿಗೆ, ತಮಿಳುನಾಡು ಸೇಲಂದಲ್ಲಿನ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ-03 ಅಭ್ಯರ್ಥಿಗಳಿಗೆ, ಆಂಧ್ರಪ್ರದೇಶ ನೆಲ್ಲೂರು ಜಿಲ್ಲೆಯ ವೆಂಕಟಗಿರಿಯ ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 03 ಅಭ್ಯರ್ಥಿಗಳಿಗೆ ಹಾಗೂ ಕೇರಳದ ಕಣ್ಣೂರು ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 02 ಅಭ್ಯರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ. ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು.

ಈ ಕೆಳಕಂಡ ಸಂಸ್ಥೆಗಳಿಗೆ ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು 2,500 ರೂ.ರಂತೆ ಶಿಷ್ಯವೇತನ ನೀಡಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾಯ ಐ.ಐ.ಹೆಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುತ್ತದೆ.

ನಿಗದಿತ ಅರ್ಜಿಗಳನ್ನು https://khtigadag.ac.in/Lateralentryadmis-sionform.pdf ಆನ್‌ಲೈನ್ ಲಿಂಕ್ ಮೂಲಕ ಡೌನ್‌ಲೊಡ್ ಮಾಡಿಕೊಂಡು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102" ಇವರಿಗೆ 2025ರ ಜೂನ್ 15 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂ:08372-297221 ಮೊಬೈಲ್ ಸಂ-ಖ್ಯೆ: 9449162822 ಅಥವಾ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಕಲಬುರಗಿ ದೂರವಾಣಿ ಸಂಖ್ಯೆ:08472-278629 ಗೆ ಸಂಪರ್ಕಿಸಲು ಕೋರಲಾಗಿದೆ.

## ಮೇ 17 ರಂದು ವಿದ್ಯುತ್ ಸುರಕ್ಷತಾ ದಿನ ಹಾಗೂ ಗ್ರಾಹಕರ ಕುಂದುಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.15-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗೀಯ ಕಚೇರಿ-2ರ ವ್ಯಾಪ್ತಿಯಲ್ಲಿ ಬರುವ ಜೇವರ್ಗಿ, ಯಡ್ರಾಮಿ, ಚಿತ್ತಾಪೂರ, ಶಹಾಬಾದ ಹಾಗೂ ಕಾಳಗಿ ಜೆಸ್ಕಾಂ ಉಪ-ವಿಭಾಗಗಳ ಕಚೇರಿಗಳಲ್ಲಿ ಇದೇ ಮೇ 17 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ವಿದ್ಯುತ್ ಸುರಕ್ಷತಾ ದಿನವನ್ನು ಹಾಗೂ ಗ್ರಾಹಕರ ಕುಂದುಕೊರತೆ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ತಮ್ಮ ಗ್ರಾಮಗಳಲ್ಲಿನ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳ ನಿವಾರಣೆಗಾಗಿ ಈ ಸಭೆ ಕರೆಯಲಾಗಿದ್ದು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಗ್ರಾಹಕರ ಕುಂದುಕೊರತೆ ಸಭೆ ಯಶಸ್ವಿಗೊಳಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ-2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

## ಚಿತ್ತಾಪುರದಲ್ಲಿ ಮೇ 17 ರಂದು ಬಹಿರಂಗ ಹರಾಜಿನ ಮೂಲಕ ವಾಹನಗಳ ವಿಲೇವಾರಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.15-ಚಿತ್ತಾಪುರ ವಲಯದ ಅಬಕಾರಿ ನಿರೀಕ್ಷಕರ ಕಚೇರಿಯಲ್ಲಿನ ವಿವಿಧ ಮಾದರಿಯ ಸರ್ಕಾರ-ಕ್ಕೆ ಮುಟ್ಟುಗೋಲು ಹಾಕಿಕೊಂಡ ಒಟ್ಟು 27 ವಾಹನಗಳನ್ನು ಚಿತ್ತಾಪುರ ವಲಯದ ಅಬಕಾರಿ ನಿರೀಕ್ಷಕರ ಕಚೇರಿಯಲ್ಲಿ ಇದೇ ಮೇ 17 ರಂದು ಬೆಳಿಗ್ಗೆ 9 ಗಂಟೆಗೆ ಬಹಿರಂಗ ಹರಾಜಿನ ಮೂಲಕ ವಿಲೇವಾರಿ ಮಾಡಲಾಗುತ್ತದೆ ಎಂದು ಕಲಬುರಗಿ ಪ್ರಾಧಿಕೃತ ಅಧಿಕಾರಿಗಳು ಹಾಗೂ ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

ಅಬಕಾರಿ ಉಪ ಅಧೀಕ್ಷಕರು, ಉಪವಿಭಾಗ ಚಿತ್ತಾಪುರ ಇವರನ್ನು ಟೆಂಡರ್-ಕಂ-ಹರಾಜು ನಿರ್ವಹಣಾಧಿಕಾರಿಯನ್ನಾಗಿ ನೇಮಿಸಲಾಗಿದೆ. ಸಾರ್ವಜನಿಕರು ಹರಾಜಿಗೆ ನಿಗದಿಪಡಿಸಿದ ವಾಹನಗಳನ್ನು ಕಚೇರಿ ಸಮಯದಲ್ಲಿ ಪ್ರತಿದಿನ ಬೆಳಿಗ್ಗೆ 8 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ವೀಕ್ಷಿಸಬಹುದಾಗಿದೆ. ಹರಾಜಿನ ಷರತ್ತು ಮತ್ತು ನಿಬಂಧನೆಗಳು ಸೇರಿದಂತೆ ವಾಹನದ ಮಾದರಿ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಚಿತ್ತಾಪುರ ವಲಯದ ಅಬಕಾರಿ ನಿರೀಕ್ಷಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

## ಯುನಿಟ್ 3 ರಲ್ಲಿ ಮಾರುಕಟ್ಟೆ ನಿರ್ಮಾಣದ ಉದ್ದೇಶ: 200 ಎಕರೆ ಜಮೀನಿಗೆ ಸರಕಾರದ ಭರವಸೆ-ಅಮೃತಕರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.15–ನವನಗರದ ಯುನಿಟ್ 3ರಲ್ಲಿ ಸುಸಜ್ಜಿತ ಮಾರುಕಟ್ಟೆ ನಿರ್ಮಾಣಕ್ಕೆ 200 ಎಕರೆ ಜಮೀನು ಕಲ್ಪಿಸುವುದಕ್ಕೆ ಸರಕಾರದ ಹಸಿರು ನಿಶಾನೆ ದೊ–ರೆತಿದೆ ಎಂದು ಬಾಗಲಕೋಟ ಯುನಿಯನ್ ಆಫ್ ಮರ್ಚಂಟ್ಸ್ ಮತ್ತು ಎಂಟರ್ಪ್ರೈನರ್ಸ ಅಸೋಸಿಯೇಷನ್ನ ಪದಾಧಿಕಾರಿಗಳು ತಿಳಿಸಿದ್ದಾರೆ.

ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಪದಾಧಿಕಾರಿಗಳು ತಮ್ಮ ಅಸೋಸಿಯೇಷನ್ ಮನವಿಗೆ ಸ್ಪಂದಿಸಿ ಯುನಿಟ್ 3 ರಲ್ಲಿ ಮಾದರಿಯ ಮಾರುಕಟ್ಟೆ ನಿರ್ಮಿಸಿ ಬಾಗಲಕೋಟೆ ನಗರದ ಹಿಂದಿನ ವ್ಯಾಪಾರ ವೈಭವವನ್ನು ಮರುಕಳಿಸಬೇಕೆನ್ನುವ ಉದ್ದೇಶಕ್ಕೆ 200 ಎಕರೆ ಜಾಗೆ ನೀಡುವುದಕ್ಕೆ ತಾತ್ವಿಕ ಒಪ್ಪಿಗೆ ದೊರೆತಿದ್ದು, ಇದಕ್ಕಾಗಿ ಶ್ರಮಿಸಿದ ಶಾಸಕ ಎಚ್.ವಾಯ್. ಮೇಟಿ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಬಸವೇಶ್ವರ ಬ್ಯಾಂಕ್ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಮುಖಂಡ ಹೊಳಬಸು ಶೆಟ್ಟರ ಅವರನ್ನು ಅಭಿನಂದಿಸುವುದಾಗಿ ಹೇಳಿದರು.

ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ವಿರುಪಾಕ್ಷ ಅಮೃತಕರ ಮಾತನಾಡಿ, ಬಾಗಲಕೋಟೆ ನಗರ ಮುಳುಗಡೆಯಿಂದಾಗಿ ಮೂರು ಭಾಗಗಳಾಗಿ ವ್ಯಾಪಾರ ವಹಿವಾಟು ಸಹ ಸೆಕ್ಟರ್ ಹಂಚಿ ಹೋಗಿದೆ. ಹೀಗಾಗಿ ಹಳೇ ಬಾಗಲಕೋಟೆಯಲ್ಲಿನ ವ್ಯಾಪಾರ ಸಂಪೂರ್ಣ ನಿಂತು ಹೋಗಿದೆ. ಇದರಿಂದ ವ್ಯಾಪಾರಸ್ಥರಿಗೆ ಬಹಳಷ್ಟು ತೊಂದರೆಯಾಗಿದ್ದು, ಏಕತ್ರ ಮಾರುಕಟ್ಟೆ ವ್ಯವಸ್ಥೆಯಾದರೆ ವ್ಯಾಪಾರಸ್ಥರು ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗುತ್ತದೆ ಎಂಬ ಉದ್ದೇಶದಿಂದ ನಮ್ಮ ಅಸೋಸಿಯೇಷನ್ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಲಾಗಿತ್ತು. ಅದಕ್ಕೆ ಸ್ಪಂದನೆ ದೊರೆತಿದ್ದು, 200 ಎಕರೆ ಜಾಗೆ ಮಂಜೂರಾತಿಗೆ ಹಸಿರು ನಿಶಾನೆ ದೊರೆತಿದೆ ಎಂದರು.

ಅಧ್ಯಕ್ಷ ರವಿ ಕುಮಟಗಿ ಮಾತನಾಡಿ, ನಗರದ ಎಲ್ಲ ಬಗೆಯ ವ್ಯಾಪಾರಸ್ಥರ ಸಂಘಟನೆಗಳನ್ನೊಳಗೊಂಡು ಯುನಿಯನ್ ಆಫ್ ಮರ್ಚಂಟ್ಸ್ ವೇದಿಕೆಯನ್ನು ರಚಿಸಲಾಗಿದೆ. ಒಂದೇ ಸೂರಿನಡಿ ಉದ್ದಿಮೆಗಳ ಸ್ಥಾಪನೆಯಾಗಿ ನಗರ ಆರ್ಥಿಕವಾಗಿ ಬೆಳವಣಿಗೆ ಹೊಂದಬೇಕು. ಜನರಿಗೆ ಉದ್ಯೋಗಾವಕಾಶಗಳು ಸಿಗಬೇಕು ಎನ್ನುವುದೇ ವೇದಿಕೆಯ ಮೂಲ ಉದ್ದೇಶವಾಗಿದೆ ಎಂದು ತಿಳಿಸಿದರು.

ಉಪಾಧ್ಯಕ್ಷ ಡಾ.ಶೇಖರ ಮಾನೆ ನೂತನವಾಗಿ ರಚಿತವಾಗಿರುವ ಅಸೋಸಿಯೇಷನ್ ಸರಕಾರ ಮತ್ತು ವ್ಯಾಪಾರಸ್ಥರ ನಡುವೆ ಕೊಂಡಿಯಾಗಿ ಕೆಲಸ ಮಾಡಲಿದೆ ಎಂದು ಹೇಳಿ, ಒಂದೇ ಕಡೆ ಸುಸಜ್ಜಿತ ಮಾರುಕಟ್ಟೆ ರಚಿತಗೊಂಡರೆ ನಗರದಲ್ಲಿ ಮತ್ತೆ ಹಿಂದಿನ ವ್ಯಾಪಾರ ವಹಿವಾಟಿನ ವೈಭವ ಕಾಣುವಂತಾಗುತ್ತದೆ ಎಂದರು. ಶ್ರೀನಿವಾಸ ಬಳ್ಳಾರಿ ಮಾತನಾಡಿದರು. ಉಪಾಧ್ಯಕ್ಷ ಪವನ ಸೀಮಿಕೇರಿ, ಪುಕರಾಜ ಬೇತಾಳ, ರಾಮ ಮುಂದಡಾ, ನಾಗರಾಜ ಕುಪ್ಪಸ್ತ ಉಪಸ್ಥಿತರಿದ್ದರು.

## ತಾಯಿಯ ಋಣ ತೀರಿಸಲಾಗದು ಎಸ್.ಆರ್.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.15–ಭೂಮಿಯನ್ನು ಪ್ರಥಮದಲ್ಲಿ ಪರಿಚಯಿಸಿ ನಮಗೆ ಸುಂದರ ಬದುಕು ಕಲ್ಪಿಸಿಕೊಡುವ ತಾಯಿಯ ಎಂದಿಗೂ ತೀರಿಸಲಾಗದು ಎಂದು ಮಾಜಿ ಸಚಿವ ಎಸ್.ಆರ್.ಪಾಟೀಲ ಹೇಳಿದ್ದಾರೆ.

ಸಮಾಜ ಸೇವಕ ಚಾಂದ್ ನದಾಫ್ ಅವರ ಚಾಂದ್ ಫೌಂಡೇಶನ್ ಅಡಿಯಲ್ಲಿ ವಿಶ್ವ ತಾಯಂದಿರ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡಿದ್ದ 'ಹೆತ್ತ ತಾಯಿ ಗೌರವಿಸೋಣ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಜೀವನದಲ್ಲಿ ತೀರ್ಥಯಾತ್ರೆ, ದೇವಸ್ಥಾನಗಳಿಗೆ ಭೇಟಿ ನೀಡುವುದು, ಶಾಸ್ತ್ರ ಪುರಾಣ ವ್ರತ ಮಾಡುವ ಬದಲು ತಮ್ಮ ತಂದೆ ತಾಯಿಯರಲ್ಲಿ ದೇವರನ್ನು ಕಾಣಬೇಕು ಎಂದರು.

ತಂದೆ ತಾಯಿ ಗೌರವಿಸಬೇಕು ಎಂದು ಬರೀ ಭಾಷಣದಲ್ಲಿ ಹೇಳಿದರೆ ಸಾಲದು. ನಮ್ಮ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ತಂದೆ ತಾಯಿಯರ ಮಂದಿರ ಕಟ್ಟಿಸಿದ್ದೇನೆ. ನಿಮ್ಮನ್ನು ಹೆತ್ತವರ ಮಂದಿರ ಎಂದು ಹೆಸರಿಟ್ಟಿದ್ದೇನೆ ಅಲ್ಲದೆ ಇಲ್ಲಿಗೆ ಬರುವ ಪ್ರತಿಯೊಬ್ಬ ರೋಗಿಯು ಶಸ್ತ್ರಚಿಕಿತ್ಸೆ ಅಥವಾ ಮುಂತಾದ ಪರೀಕ್ಷೆಗೆ ಒಳಪಡುವಾಗ ನಿಮ್ಮ ತಂದೆ ತಾಯಿಯರ ಸ್ಮರಿಸಿ ಮುಂದೆ ಸಾಗಿ ಎಂಬುದು ನನ್ನ ತತ್ವ ಆದ್ದರಿಂದ ಶಿಕ್ಷಣದ ಜೊತೆಗೆ ನೈತಿಕತೆ ಹಾಗೂ ಮಾನವೀಯತೆಗೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ ಎಂದು ಪಾಟೀಲ ಹೇಳಿದರು.

ಅನುವಾಲ್ ಭಟ್ಟದ ಪೂಜ್ಯ ಕೈಲಾಸಪತಿ ಶ್ರೀಗಳು ಮಾತನಾಡಿ, ತಂದೆ ತಾಯಿ ಇದ್ದಾಗ ಅವರನ್ನು ಉಪವಾಸ ಕೆಡವಿ ಸತ್ತ ಮೇಲೆ ಭರ್ಜರಿ ಕಾರ್ಯಕ್ರಮ ಮಾಡುವವರು ಇಂದು ಹೆಚ್ಚಾಗಿದ್ದಾರೆ. ಸತ್ತಾಗ ವ್ಯರ್ಥ ಹಣ ಖರ್ಚು ಮಾಡದೆ ಬದುಕಿದ್ದಾಗ ತಂದೆ ತಾಯಿಯರ ಸೇವೆ ಮಾಡಬೇಕು ಎಂದರು.

ಚರ್ಮರೋಗ ತಜ್ಞೆ ಡಾ.ಮದರಕರ್ ಮಾತನಾಡಿ, ಎಲ್ಲರೂ ಗಂಡು ಸಂತತಿಯನ್ನು ಬಯಸುತ್ತಿರುವುದರಿಂದಲೇ ಇಂದು ಹೆಣ್ಣಿನ ಸಂತತಿ ಕಡಿಮೆಯಾಗಿದೆ ಎಂದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ ಮಾತನಾಡಿ, ಇಂದಿನ ದಿನಮಾನಗಳಲ್ಲಿ ಶುಶಿಕ್ಷಿತರು, ಸುಧಾರಿಸಿದವರು ಎನ್ನುವವರೇ ತಮ್ಮ ತಂದೆ ತಾಯಿಗಳನ್ನು ವೃದ್ಧಾಶ್ರಮಕ್ಕೆ ಕಳಿಸುತ್ತಿದ್ದಾರೆ. ಅಂತವರಲ್ಲಿ ಅಶಿಕ್ಷಿತ ಚಂದನ ತಮ್ಮ ತಾಯಿಯನ್ನು ಗೌರವಿಸುತ್ತಿರುವುದು ಸಮಾಜಕ್ಕೆ ಒಬ್ಬ ಮಾದರಿ ವ್ಯಕ್ತಿಯಾಗಿದ್ದಾನೆ ಎಂದರು.

ಇದೇ ಸಂದರ್ಭದಲ್ಲಿ 40 ಜನ ಬಡ ಹೆಣ್ಣು ಮಕ್ಕಳನ್ನು ಗೌರವಿಸಲಾಯಿತು. ಈ ಬಾರಿ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಅರಕೇರಿ ಮಠದ ಪೂಜ್ಯರು, ಸೈದೂಸಾಬ್ ಹೊಸಮನಿ, ಉಸ್ಮಾನಸಾಬ್ ಬೇವೂರ, ಇಮಾಮಹುಸೇನ ಖಾಜಿ, ಕೆ.ಎಚ್.ಹುಬ್ಬಳ್ಳಿ ಇದ್ದರು.

## ಮೆದಕಿನಾಳ ಗ್ರಾಮದಲ್ಲಿ ಮಕ್ಕಳ ಸಂರಕ್ಷಣೆಯ ಜಾಗೃತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಮೇ 15–ಮಸ್ಕಿ ತಾಲೂಕಿನ ಮೆದಿಕಿನಾಳ ಗ್ರಾಮದ ಪಂಚಾಯತ್ ಕಟ್ಟೆಯಲ್ಲಿ ಮಕ್ಕಳ ಸಹಾಯವಾಣಿ 1098 ಸೇವೆ ಮತ್ತು ಕಾರ್ಯ ಸೇರಿದಂತೆ ನಾನಾ ವಿಷಯಗಳ ಬಗ್ಗೆ ಮೇ 14ರಂದು ಜಾಗೃತಿ ಕಾರ್ಯಕ್ರಮ ನಡೆಯಿತು. ಬೇಟಿ ಭಚಾವೋ ಬೇಟಿ ಪಡವೋ ಯೋಜನೆ ಸಹಯೋಗದಲ್ಲಿ ನಡೆದ ಈ ಜಾಗೃತಿ ಕಾರ್ಯಕ್ರಮದಲ್ಲಿ

ಮಕ್ಕಳ ಸಂರಕ್ಷಣೆ, ಬಾಲ್ಯ ವಿವಾಹ ನಿಷೇಧ ಕಾಯಿದೆ, ಬಾಲಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯಿದೆ, ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯಿದೆಯ ಬಗ್ಗೆ ತಿಳಿಸಲಾಯಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮಕ್ಕಳ ಸಹಾಯವಾಣಿ ರಾಯಚೂರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು ಇವರಿಂದ ನಡೆದ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್ ಉಪಾಧ್ಯಕ್ಷರು, ಮತ್ತು ಸದಸ್ಯರು, ಶಿಕ್ಷಣ ಇಲಾಖೆಯಿಂದ ವಲಯ ಸಂಪನ್ಮೂಲಗಳು ವ್ಯಕ್ತಿಗಳು, ಸರಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರು, ಗ್ರಾಮದ ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

## ಜೆಸ್ಕಾಂನಿಂದ ಮೇ 17 ರಂದು ಗ್ರಾಹಕರ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 15– ಇಲ್ಲಿನ ಜೆಸ್ಕಾಂ ಇಲಾಖೆಯಿಂದ ಜಿಲ್ಲೆಯ ಜೆಸ್ಕಾಂ ಉಪ–ವಿಭಾಗ–1ರ ಕಚೇರಿಯಲ್ಲಿ ಗ್ರಾಹಕರ ಸಂವಾದ ಸಭೆಯನ್ನು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಅಧ್ಯಕ್ಷತೆಯಲ್ಲಿ ಮೇ 17 ರಂದು ಸಮಯ ಬೆಳಗ್ಗೆ 11 ರಿಂದ 1ರವರೆಗೆ ಏರ್ಪಡಿಸಲಾಗಿದೆ. ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ–ವಿಭಾಗ–1 ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾವನಾತ್ಮಕ ಬಲಿಷ್ಠತೆಗೆ ಮಕ್ಕಳನ್ನು ಸರ್ಕಾರಿ ಶಾಲೆಗೆ ಕಳಿಸಿ–ಮಿರ್ಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.15–ಗುಣಾತ್ಮಕ ಶಿಕ್ಷಣ ನೀಡುವುದರ ಜೊತೆಗೆ ಮಕ್ಕಳನ್ನು ದೈಹಿಕ, ಮಾನಸಿಕ ಮತ್ತು ಭಾವನಾತ್ಮಕವಾಗಿ ಬಲಿಷ್ಠಗೊಳಿಸಲು ಶ್ರಮಿಸುತ್ತಿರುವ ಸರ್ಕಾರಿ ಶಾಲೆಗಳಿಗೆ ತಮ್ಮ ಮಕ್ಕಳನ್ನು ದಾಖಲಿಸುವಂತೆ ಶಾಲಾ ಶಿಕ್ಷಣ ಇಲಾಖೆಯ ಪ್ರಭಾರ ಉಪನಿರ್ದೇಶಕ ಎಚ್.ಜಿ.ಮಿರ್ಜಿ ಕರೆ ನೀಡಿದ್ದಾರೆ.

ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಗುರುವಾರ ಜರುಗಿದ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳ ಪ್ರತಿಭೆಯ ಅನಾವರಣಕ್ಕೆ ಅನೇಕ ಸ್ಪರ್ಧೆಗಳನ್ನು ಆಯೋಜಿಸಿ ವೇದಿಕೆ ಕಲ್ಪಿಸುವ ಕಾರ್ಯಕ್ರಮಗಳು ಸರ್ಕಾರಿ ಶಾಲೆಗಳಲ್ಲಿ ದೊರೆಯುತ್ತವೆ ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ದೊರೆಯುವ ಕೌಶಲ್ಯಾಧಾರಿತ ಮತ್ತು ತಂತ್ರಜ್ಞಾನ ಆಧಾರಿತ ಶಿಕ್ಷಣದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕ 'ಂದು ತಿಳಿಸಿ, ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸುವಂತೆ ಪಾಲಕರಿಗೆ ಮನವಿ ಮಾಡಿದರು.

ಕ್ಷೇತ್ರ ಸಮನ್ವಯಾಧಿಕಾರಿ ಎಚ್.ಕೆ.ಗುಡೂರ, ಕೆಲವು ಸರ್ಕಾರಿ ಶಾಲೆಗಳಲ್ಲೂ ಆದ್ಯತೆ ಮೇರೆಗೆ ಆಂಗ್ಲ ಮಾಧ್ಯಮ ವಿಭಾಗ ಪ್ರಾರಂಭಿಸಲಾಗಿದ್ದು, ಅದರ ಪ್ರಯೋಜನವನ್ನು ಮಕ್ಕಳು ಪಡೆದುಕೊಳ್ಳಬೇಕು ಎಂದರು. ಕಾಲೇಜಿನ ಪ್ರಾಚಾರ್ಯ ಪ್ರಕಾಶ ಜೇವೂರ ಮಾತನಾಡಿದರು.

ಶೈಕ್ಷಣಿಕ ಸೌಲಭ್ಯಗಳ ಜೊತೆ ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆಗಾಗಿ ಮಧ್ಯಾಹ್ನದ ಬಿಸಿ ಊಟ, ಹಾಲು ಹಾಗೂ ಅಜೀಮ್ ಪ್ರೇಮ್ ಜಿ ಫೌಂಡೇಶನ್ ಪೂರೈಸುವ ಪೂರಕ ಪೌಷ್ಠಿಕ ಆಹಾರಗಳು ಸರ್ಕಾರಿ ಶಾಲೆಗಳಲ್ಲಿ ದೊರೆಯುತ್ತವೆ ಎಂದು ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ನಾಗರಾಜ ದೇಶಪಾಂಡೆ ತಿಳಿಸಿದರು.

ಎಸ್ ಡಿಎಂಸಿ ಅಧ್ಯಕ್ಷೆ ಮೀನಾಕ್ಷಿ ನಾಯಕ ಅಧ್ಯಕ್ಷತೆ ವಹಿಸಿದ್ದರು. ಅಜೀಮ್ ಪ್ರೇಮ್ ಜಿ ಫೌಂಡೇಶನ್ ನೋಡಲ್ ಅಧಿಕಾರಿ ಬಸವರಾಜ್, ಅಂಜನಾ ತೋಪನೆಕರ, ಮುತ್ತು, ವೈಶಾಲಿ ತೋಪನೆಕರ, ರೇಷ್ಮಾ ಕಾಜಿ ಹಾಗೂ ರೇಖಾ ಸರ್ಕಾರಿ ಶಾಲೆಗಳಲ್ಲಿನ ಸೌಲಭ್ಯಗಳ ಕುರಿತು ಮಾತನಾಡಿದರು. ಶಿಕ್ಷಣ ಸಂಯೋಜಕ ಪಿ.ಬಿ.ಪಾಟೀಲ, ಸಮೂಹ ಸಂಪನ್ಮೂಲ ವ್ಯಕ್ತಿ ಶಶಿಧರ ಹೂಗಾರ, ವಿ.ಆರ್.ಸಜ್ಜನ, ಸಂಗಮೇಶ ಸಣ್ಣತಂಗಿ, ಡಿ.ಬಿ.ಚನ್ನದಾಸರ ಹಾಗೂ ಪಾಲಕರು, ಹಳೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಉಪಪ್ರಚಾರ್ಯೆ ಗಿರಿಜಾ ನಡುವಿನಮನಿ ಸ್ವಾಗತಿಸಿದರು. ಐ.ಬಿ.ಬಸರಕೋಡ ನಿರೂಪಿಸಿದರು. ಸಿ.ಎಸ್.ಹಳ್ಳೂರ ವಂದಿಸಿದರು.

## ಡೆಂಗ್ಯು ತಡೆಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.15–ಡೆಂಗ್ಯು ತಡೆಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದ್ದು, ಮೇ.16 ರಂದು ಆಚರಿಸಲಾಗುವ ರಾಷ್ಟ್ರೀಯ ಡೆಂಗ್ಯು ದಿನಾಚರಣೆಯನ್ನು check, clean, cover, stepstoDefeatDengue ಎಂಬ ಘೋಷ ವಾಕ್ಯದೊಂದಿಗೆ ಆಚರಿಸಿ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ.ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಡೆಂಗ್ಯು ದಿನಾಚರಣೆ ಹಾಗೂ ಡೆಂಗ್ಯು ನಿಯಂತ್ರಣ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನಕ್ಕಾಗಿ ಆರೋಗ್ಯ ಇಲಾಖೆ ಜೊತೆ ನಡೆದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಷ್ಟ್ರೀಯ ಡೆಂಗ್ಯು ನಿಯಂತ್ರಣ ದಿನಾಚರಣೆ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಡೆಂಗಿ ರೋಗಿಗಳ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಯಲ್ಲಿ 10 ಹಾಸಿಗೆಗಳನ್ನು ಹಾಗೂ ಪ್ರತಿ ತಾಲೂಕು ಆಸ್ಪತ್ರೆಯಲ್ಲಿ 5 ಹಾಸಿಗೆ ಮೀಸಲಾಗಿಡಲಾಗಿದೆ ಎಂದರು.

ಜಿಲ್ಲೆಯ ಎಲ್ಲಾ ಆಸಪತ್ರೆಗಳಲ್ಲಿ ರೋಗಕ್ಕೆ ಸಂಬಂಧಿಸಿದ ಔಷಧದಾಸ್ತಾನು ಲಭ್ಯವಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದ ಜಾನಕಿ, ಪಟ್ಟಣ ಪ್ರದೇಶಗಳಲ್ಲಿ ಸ್ವಯಂ ಸೇವಕರಿಂದ ಪ್ರತಿ ಶುಕ್ರವಾರ ಲಾರ್ವಾ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗುವುದು. ಇದಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು. ಖಾಲಿ ಜಾಗೆ ಮತ್ತು ಕಟ್ಟಡ ಕಾಮಗಾರಿಗಳ ನೀರು ಸಂಗ್ರಹಣ ತಾಣಗಳಲ್ಲಿ ಸೊಳ್ಳೆ ಮರಿ (ಲಾರ್ವಾ) ಕಂಡು ಬಂದರೆ ಸಂಬಂಧಿಸಿದ ಕಟ್ಟಡ ಮಾಲಿಕರಿಗೆ ನೋಟಿಸ್ ನೀಡಿ ನೀರಿನ ತಾಣಗಳನ್ನು ಸ್ವಚ್ಚಗೊಳಿಸುವಂತೆ ಸೂಚಿಸಲಾಗುತ್ತದೆ ಎಂದು ಹೇಳಿದರು.

ನೋಟಿಸ್‌ಗೆ ಸರಿಯಾಗಿ ಸ್ಪಂದಿಸದೇ ಇದ್ದ ಪಕ್ಷದಲ್ಲಿ ಅಂತಹ ಕಟ್ಟಡ ಮಾಲಿಕರಿಗೆ ದಂಡ ವಿಧಿಸಲಾಗುವುದು. ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಲೆಕ್ಕಾಧಿಕಾರಿಗಳು ಆರೋಗ್ಯ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಯೊಂದಿಗೆ ಕೈ ಜೋಡಿಸಿ ಲಾರ್ವಾ ನಿರ್ಮೂಲನೆಯಲ್ಲಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜೂನ್ ತಿಂಗಳಿನಲ್ಲಿ ಶಾಲೆಗಳು ಪುನ:ಪ್ರಾರಂಭವಾಗುತ್ತಿದ್ದು ಜಿಲ್ಲೆಯ ಎಲ್ಲ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಕೀಟಜನ್ಯ ರೋಗದ ಬಗ್ಗೆ ತಿಳುವಳಿಕೆ ನೀಡುವುದರ ಜೊತೆಗೆ ಶಾಲಾ ಕಾಲೇಜುಗಳ ಸುತ್ತಮುತ್ತಲಿನ ಆವರಣವನ್ನು ಸ್ವಚ್ಚವಾಗಿಟ್ಟುಕೊಳ್ಳುವಂತೆ ತಿಳುವಳಿಕೆ ನೀಡಬೇಕು. ಪೌರ ಕಾರ್ಮಿಕರಿಗೆ ಡೆಂಗಿ ರೋಗದ ಬಗ್ಗೆ ತಿಳುವಳಿಕೆ ನೀಡಬೇಕು. ಸಾರ್ವಜನರಿಗೆ ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಮಂಜುನಾಥ ಮತ್ತು ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

## ಶೋಷಿತರ ಸದೃಢ ಸಮಾಜ ನಿರ್ಮಾಣಕ್ಕೆ ನಾವೆಲ್ಲರೂ ಒಂದಾಗಬೇಕು : ರಾಮು ಪೂಜಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಮ್ಮ ಜಾತಿ ಭೋವಿ (ವಡ್ಡರ) ನಮ್ಮ ಹೆಮ್ಮೆ ನಮ್ಮ ಹಕ್ಕು ನಾವೆಲ್ಲಾ ಶೋಷಿತರ ಸದೃಢ ಸಮಾಜ ನಿರ್ಮಾಣಕ್ಕೆ ನಾವೆಲ್ಲರೂ ಒಂದಾಗಿ ನಿಂತಾಗಲೇ ಬದಲಾವಣೆ ಸಾಧ್ಯವಾಗುತ್ತದೆ ಎಂದು ರಾಮು ಪೂಜಾರ ಹೇಳಿದರು.

ಗೌರವಾನ್ವಿತ ನ್ಯಾಯಮೂರ್ತಿಗಳಾದ ಡಾ.ಹೆಚ್.ಎನ್ ನಾಗಮೋಹನದಾಸ್ ಏಕ ಸದಸ್ಯ ಆಯೋಗ, ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ 2025ರ ಕಾರ್ಯಕ್ರಮದ ಕುರಿತು ಕೊಪ್ಪಳ ನಗರದಲ್ಲಿ ಭೋವಿ (ವಡ್ಡರ) ಸಮಾಜದ ಯುವ ಮುಖಂಡರಾದ ರಾಮು ಪೂಜಾರ ಮಾತನಾಡಿ, ರಾಜ್ಯದ ಸರ್ಕಾರದಿಂದ ಪರಿಶಿಷ್ಟ ಜಾತಿಗಳ ಸಮೀಕ್ಷೆ ನಡೆಯುತ್ತಿದೆ ಅದರಲ್ಲಿ ಒಟ್ಟು 36 ಪ್ರಶ್ನಾವಳಿಗಳು ಅರ್ಜಿ ನಮೂನೆಯಲ್ಲಿ ಇದ್ದು, ಶಿಕ್ಷಕರು ಮನೆ ಮನೆಗೆ ಬಂದು ಸಮೀಕ್ಷೆ ಮಾಡುತ್ತಾರೆ. ಜಾತಿ ಬರೆಸುವಾಗ ಒಳಜಾತಿ ನಮೂದಿಸದೆ ಕೇವಲ ವಡ್ಡರ್, ಭೋವಿ ಎಂದು ಬರೆಸಬೇಕು, ಈ ಸಮೀಕ್ಷೆಯ ಅಭಿಯಾನದಲ್ಲಿ ಪಕ್ಷಾತೀತವಾಗಿ ಎಲ್ಲರೂ ಒಂದಾಗಿ ಸಮುದಾಯದ ಎಲ್ಲಾ ಸದಸ್ಯರು ಹೆಸರನ್ನು ನೋಂದಾಯಿಸಿಕೊಳ್ಳಬೇಕು, ಇದು ನಮ್ಮ ಸಮಾಜಕ್ಕೆ ಸುವರ್ಣ ಅವಕಾಶವಾಗಿದೆ. ಶೋಷಿತರ ಸದೃಢ ಸಮಾಜ ನಿರ್ಮಾಣಕ್ಕೆ ನಾವೆಲ್ಲರೂ ಒಂದಾಗಬೇಕು ಎಂದು ಹೇಳಿದರು.

ನಂತರ ಕೊಪ್ಪಳ ನಗರದ ವಡ್ಡರ ಓಣಿಯಲ್ಲಿ ಪ್ರತಿ ಮನೆ ಮನೆಗೆ ತೆರಳಿ ಸಮಾಜದ ಮುಖಂಡರಿಗೆ ಜಾಗೃತಿ ಮೂಡಿಸುವದರ ಜೊತೆಗೆ ಕೊಪ್ಪಳ ತಾಲೂಕಿನ ಕೊಪ್ಪಳ ವಿಧಾನಸಭಾ ಕ್ಷೇತ್ರದ ಹಳ್ಳಿಗಳಾದ ಮುದ್ದಬಳ್ಳಿ, ಚುಕ್ಕನಕಲ್, ಕುಣಿಕೇರಿ ತಂಡಾ, ಹಾಲವರ್ತಿ, ಗೊಂಡಬಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ಭೇಟಿ ನೀಡಿ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಅಭಿಯಾನದಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಭೋವಿ ಸಮಾಜದ ಕೊಪ್ಪಳ ಜಿಲ್ಲಾ ಸಂಚಾಲಕರದ ರಾಮಣ್ಣ ಅಳವಂಡಿ, ಕೊಪ್ಪಳ ತಾಲೂಕ ಉಪಾಧ್ಯಕ್ಷರಾದ ಹನುಮಂತಪ್ಪ ಕುಷ್ಟಗಿ, ಸಮಾಜದ ಯುವ ಮುಖಂಡರಾದ ದುರ್ಗಪ್ಪ ಭೋವಿ. ಶರಣಪ್ಪ ಅಂಗಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸೇಡಂ (ನೀಲಹಳ್ಳಿ): ಐಟಿಐ ವಿವಿಧ ವೃತ್ತಿಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.15.(ಕ.ವಾ.)– ಸೇಡಂ (ನೀಲಹಳ್ಳಿ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್–2025–26 ಸಾಲಿಗೆ ಐಟಿಐ (ಎನ್.ಸಿ.ವಿ.ಟಿ.ಸಂಯೋಜನೆಪಡೆದ) ಈ ಕೆಳಕಂಡ ವೃತ್ತಿಗಳಿಗೆ ಪ್ರವೇಶ ಪಡೆಯಲು ಎಸ್.ಎಸ್.ಎಲ್.ಸಿ. ಪಾಸಾದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸೇಡಂ (ನೀಲಹಳ್ಳಿ) ಸರ್ಕಾರಿ ಕೈಗಾರಿಕ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಎರಡು ವರ್ಷದ ಫಿಟ್ಟರ್, ಎಲೆಕ್ಟ್ರಿಶಿಯನ್, ಮೆಕ್ಯಾನಿಕ್ ಎಲೆಕ್ಟ್ರಿಕ್ ವಹಿಕಲ್, ಸಿ.ಎನ್.ಸಿ. ಮಶಿನಿಂಗ್ ಟೆಕ್ನಿಶಿಯನ್ ಹಾಗೂ ವರ್ಚುಯಲ್ ಅನಾಲೈಸಿಸ್ ಆಂಡ್ ಡಿಸೈನರ್ ವೃತ್ತಿಗಳಿಗೆ ಹಾಗೂ ಒಂದು ವರ್ಷದ ಇಂಡಸ್ಟ್ರಿಯಲ್ ರೋಬೋಟೈಸ್ ಆಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಿಶಿಯನ್, ಮ್ಯಾನುಫ್ಯಾಕ್ಚರಿಂಗ್ ಪ್ರೋಸೆಸ್ ಕಂಟ್ರೋಲ್ ಆಂಡ್ ಅಟೋಮೇಶನ್ ಹಾಗೂ ಇಂಜನಿಯರಿಂಗ್ ಡಿಸೈನ್ ಟೆಕ್ನಿಶಿಯನ್ ವೃತ್ತಿಗಳಿಗೆ ಪ್ರವೇಶ ಪಡೆಯಬಹುದಾಗಿದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು www.cite.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಮೇ 28ರೊಳಗಾಗಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸೇಡಂ (ನೀಲಹಳ್ಳಿ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಮೊಬೈಲ್ ಸಂಖ್ಯೆ 8310935051, 9480292108, 7892876505, 9481000523 ಹಾಗೂ ಪ್ರಾಚಾರ್ಯರ ಮೊಬೈಲ್ ಸಂಖ್ಯೆ 8310880083 ಗೆ ಸಂಪರ್ಕಿಸಲು ಕೋರಲಾಗಿದೆ.

ಜಾಹೀರಾತಿಗಾಗಿ ಇಚಿದೆ
ಸಂಪರ್ಕಿಸಿ:9449732000

## ಬೇರೆ ದೇಶಗಳಲ್ಲೂ ಭಾರತೀಯ ಶುಶ್ರೂಕರಿಗೆ ಬೇಡಿಕೆ–ಸಜ್ಜನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.15–ಜಗತ್ತಿನಾದ್ಯಂತ ಭಾರತೀಯ ಶುಶ್ರೂಶಕರಿಗೆ ಬಾರಿ ಬೇಡಿಕೆಯಿದ್ದು ಅವರ ಅವಶ್ಯಕತೆಯೂ ಹೆಚ್ಚಾಗಿದೆ ಎಂದು ಬವಿವ ಸಂಘದ ಆರೋಗ್ಯ ಶಿಕ್ಷಣ ಸಂಸ್ಥೆಗಳ ಕಾರ್ಯಾಧ್ಯಕ್ಷ ಅಶೋಕ ಸಜ್ಜನ ಹೇಳಿದ್ದಾರೆ.

ಬವಿವ ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ವತಿಯಿಂದ ಅಂತರಾಷ್ಟ್ರೀಯ ಶುಶ್ರೂಷಕರ ದಿನಾಚರಣೆಯ ನಿಮಿತ್ಯ ಹಾನಗಲ್ ಕುಮಾರೇಶ್ವರ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ರೋಗಿಗಳಿಗೆ ಹಣ್ಣು–ಹಂಪಲುಗಳನ್ನು ವಿತರಿಸಿ ಅವರು ಮಾತನಾಡಿದರು.

ಭಾರತದಲ್ಲಿ ಈಗಾಗಲೇ ಒಟ್ಟು 22 ಲಕ್ಷ ಶುಶ್ರೂಷಕರು ಕಾರ್ಯ ನಿರ್ವಹಿಸುತ್ತಿದ್ದು, ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಇನ್ನೂ 45 ಲಕ್ಷ ಶುಶ್ರೂಷಕರ ಅವಶ್ಯಕತೆ ಇದೆ. ನಮ್ಮ ದೇಶದಲ್ಲಿ ತರಬೇತಿ ಹೊಂದಿದ ಶುಶ್ರೂಷಕರಿಗೆ ಹೊರ ದೇಶಗಳಲ್ಲಿ ಬೇಡಿಕೆ ಹೆಚ್ಚುತ್ತಿರುವ ಕಾರಣ ಜಗತ್ತಿನಾದ್ಯಂತ ಭಾರತೀಯ ಶುಶ್ರೂಶಕರಿಗೆ ಅಪಾರ ಬೇಡಿಕೆ ಮತ್ತು ಅವಶ್ಯಕತೆ ಹೆಚ್ಚಾಗಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ದಿಲೀಪ ನಾಟೇಕರ, ನರ್ಸಿಂಗ್ ವೃತ್ತಿ ಶಿಕ್ಷಣದಲ್ಲಿ ಜಿ.ಎನ್.ಎಂ ಹಾಗೂ ಬಿ.ಎಸ್ಸಿ. ನರ್ಸಿಂಗ್ ಕೋರ್ಸಗಳಷ್ಟೇ ಸೀಮಿತವಾಗಿರದೇ ಸ್ನಾತಕೋತ್ತರ ಮತ್ತು ಡಾಕ್ಟರೇಟ್ ಪದವಿಯವರೆಗೂ ಶಿಕ್ಷಣ ಪೂರೈಸುವ ಅವಕಾಶ ಇರುವುದು ಹೆಮ್ಮೆಯ ಸಂಗತಿ. ಅಲ್ಲದೇ ಶುಶ್ರೂಷಕರಿಗೆ ಸ್ಟಾಫ್ ನರ್ಸದಿಂದ ನರ್ಸಿಂಗ್ ಆಫೀಸರ್ ಎಂದು ಮರುನಾಮಕರಣ ಮಾಡಿರುವುದು ಖುಷಿಯ ಸಂಗತಿ ಎಂದರು.

ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಭುವನೇಶ್ವರಿ ಎಳಮೇಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ನರ್ಸಿಂಗ್ ಅಧೀಕ್ಷಕರು ಹಾಗೂ ಮಹಾವಿದ್ಯಾಲಯದ ಎಲ್ಲ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಈ ವಿಶೇಷ ದಿನದ ಅಂಗವಾಗಿ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿಗಳಿಂದ ಭಾಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

# ಮುಂಗಾರು ಕೃಷಿ: ಬೀಜ, ಗೊಬ್ಬರ ಕೊರತೆಯಾಗದಂತೆ ಕ್ರಮಕೈಗೊಳ್ಳಿ:ಉಸ್ತುವಾರಿ ಕಾರ್ಯದರ್ಶಿ.ಡಿ.ರಂದೀಪ

ಮಲ್ಲಮ್ಮ ನುಡಿ ವಾರ್ತೆ




ಬೀದರ: ಮೇ.15: ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಬೀಜ ಹಾಗೂ ಗೊಬ್ಬರಗಳ ಕೊರತೆಯಾಗದಂತೆ ಪೂರ್ವಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಿ.ರಂದೀಪ ತಿಳಿಸಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿಂದು ಪ್ರಮುಖ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು.

ಜೂನ್ ಮೊದಲ ವಾರದಲ್ಲಿ ಮುಂಗಾರು ಆರಂಭಗೊಳ್ಳುವ ಸಾಧ್ಯತೆಯಿದ್ದು, ರೈತರಿಗೆ ಯಾವುದೇ ತೊಂದರೆಯಾಗದಂತೆ ಬೀಜ ಹಾಗೂ ರಸಗೊಬ್ಬರಗಳನ್ನು ಒದಗಿಸಬೇಕು. ಬೀಜ ವಿತರಣೆಗೆ ಸೂಕ್ತ ಕೇಂದ್ರಗಳನ್ನು ಗುರುತಿಸಿ ಗದ್ದಲ ಆಗದಂತೆ ಕ್ರಮ ವಹಿಸಬೇಕೆಂದು ಕಾರ್ಯದರ್ಶಿಗಳು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ ಮುಖ್ಯಮಂತ್ರಿಗಳು ಬಜೇಟ್‌ನಲ್ಲಿ ಘೋಷಿಸಿರುವ ಯೋಜನಾ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಆದ್ಯತೆ ನೀಡಿ ಕ್ರಮ ವಹಿಸಬೇಕೆಂದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ, ಅಲ್ಪಸಂಖ್ಯಾತರ, ವಿವಿಧ ನಿಗಮಗಳ ವಸತಿ ನಿಲಯಗಳಿಗೆ ಹಾಗೂ ಇತರೇ ಇಲಾಖೆಗಳ ಕಾರ್ಯಕ್ರಮವನ್ನು ಕಟ್ಟಡಗಳ ನಿರ್ಮಾಣಕ್ಕೆ ನಿವೇಶನಗಳನ್ನು ಆದ್ಯತೆ ಮೇರೆಗೆ ಗುರುತಿಸಿ ಕ್ರಮ ವಹಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮಾತನಾಡಿ ತಾವು ಹಾಗೂ ಜಿಲ್ಲಾ ಪಂಚಾಯತ ಸಿಇಓ ಅವರು ಈಗಾಗಲೇ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಲಾಗಿದೆ ಎಂದರು. ಕೃಷಿ ಹಾಗೂ ತೋಟಗಾರಿಕೆ ಹಾನಿಯನ್ನು ವರದಿ ಮಾಡಲಾಗಿದೆಯೆಂದರು.

ಜಂಟಿ ಕೃಷಿ ನಿರ್ದೇಶಕ ಜಿಯಾವುಲ್ಲಾ ಮಾತನಾಡಿ, ಜಿಲ್ಲೆಗೆ ಸೋಯಾ ಅವರೆ ಹೆಚ್ಚು ಬೇಡಿಕೆ ಇದ್ದು ಉಳಿದಂತೆ ತೊಗರಿ, ಉದ್ದು, ಹೆಸರು, ಜೋಳ ಬಿತ್ತನೆ ಬೀಜಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ. ಸಧ್ಯ 76120 ಕ್ವಿ.ಬೀಜ ಬೇಡಿಕೆಯಿದ್ದು ಈಗಾಗಲೇ ವಿವಿಧ ಬೀಜ ಸಂಸ್ಥೆಗಳಿಗೆ ಇಂಡೆಂಟ್ ನೀಡಲಾಗಿದ್ದು, ಮೇ.15 ರೊಳಗಾಗಿ ದಸ್ತಾನುಕರಿಸಲಾಗುವುದೆಂದರು. ಒಟ್ಟು 4.21 ಲಕ್ಷ ಹೆಕ್ಟರ್ ಬಿತ್ತನೆ ಗುರಿಯಿದ್ದು, ಈ ಪೈಕಿ 2.22 ಲಕ್ಷ ಹೆಕ್ಟರ್ ಸೋಯಾ ಅವರೆ ಹಾಗೂ 1.33 ಲಕ್ಷ ಹೆಕ್ಟರ್ ತೊಗರಿ ಬೆಳೆಯಾಗಿರುತ್ತವೆ. ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ವಿತರಿಸಲಾಗುತ್ತದೆ. ಅಲ್ಲದೆ 115 ಹೆಚ್ಚುವರಿ ಕೇಂದ್ರಗಳನ್ನು ತೆರೆಯಲಾಗುವುದು ಎಂದು ತಿಳಿಸಿದರು. ಒಟ್ಟು 37.106 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಇದ್ದು, ರಸಗೊಬ್ಬರ ಸಮಸ್ಯೆ ಇಲ್ಲವೆಂದು ತಿಳಿಸಿದರು. ಅರಣ್ಯೀಕರಣ: ಮುಂಗಾರಿನಲ್ಲಿ ಒಟ್ಟು 150 ಸೆ.ಮಿ. ರಸ್ತೆ ಬದಿ, 50 ಕಿ.ಮೀ. ನಗರ ಹಸರೀಕರಣ, 330 ಬ್ಲಾಕ್ ಪ್ಲಾಂಟೇಶನ್ ಮಾಡಲಾಗುವುದು. ರೈತರಿಗೆ ಜಮೀನುಗಳಲ್ಲಿ ಬೆಳೆಸಲು ರಿಯಾಯಿತಿ ದರದಲ್ಲಿ ಸಸಿ ವಿತರಿಸಲಾಗುವುದೆಂದು ಸಾಮಾಜಿಕ ಅರಣ್ಯ ಉಪ ಸಂರಕ್ಷಣಾಧಿಕಾರಿ ಎ.ಬಿ.ಪಾಟೀಲ ತಿಳಿಸಿದರು.

ರೈತರಿಗೆ ಕಳೆದ ಬಾರಿಯ ಬೆಳೆ ಪರಿಹಾರ ವಿತರಣೆಯಾಗಿದೆ. 2023–24ನೇ ಸಾಲಿನಲ್ಲಿ 75 ರೈತ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದೆ. 2021–22ನೇ ಸಾಲಿನ 13 ರೈತರು ಆತ್ಮಹತ್ಯೆ ಪರಿಹಾರ ಕೆಲ ತಾಂತ್ರಿಕ ಅಂಶಗಳಿಂದಾಗಿ ಬಾಕಿಯಿದ್ದು, ಈಗಾಗಲೇ ವರದಿ ಕಳುಹಿಸಲಾಗಿದೆಯೆಂದು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ತಿಳಿಸಿದರು. ಕಳೆದ ಸಾಲಿನಲ್ಲಿ 24 ಜಾನುವಾರು ಜೀವ ಹಾನಿಯಾಗಿದ್ದು ಪರಿಹಾರ ನೀಡಲಾಗಿದೆ. ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ 18 ಕೋಟಿ ಅನುದಾನ ಲಭ್ಯವಿದೆ ಎಂದರು.

ಪಿಂಚಣಿ ಯೋಜನೆಯಡಿ 349 ಅಂಗವಿಕಲರು, 238 ವಿಧವಾ ವೇತನ ಹಾಗೂ 580 ಸಂಧ್ಯಾ ಸುರಕ್ಷಾ ವೇತನವನ್ನು ವಿತರಿಸಲಾಗುತ್ತಿದೆ ಎಂದರು. ಆಲಿಕಲ್ಲು ಮಳೆಯಿಂದಾಗಿ ಜಿಲ್ಲೆಯಲ್ಲಿ 217 ಹೆಕ್ಟರ್ ತೋಟಗಾರಿಕೆ ಬೆಳೆಗಳಾದ ಮಾವು, ಟೋಮೋಟೋ, ಕಲ್ಲಂಗಡಿ ಹಾನಿಯಾಗಿದ್ದು, ಜಂಟಿ ಸರ್ಮೀಕ್ಷೆ ಮಾಡಿ ವರದಿ ಸಲ್ಲಿಸಲಾಗಿದೆಯೆಂದು ತೋಟಗಾರಿಕೆ ಉಪನಿರ್ದೇಶಕರು ಸಭೆಗೆ ತಿಳಿಸಿದರು.

ಜನತಾ ದರ್ಶನದಲ್ಲಿ ಎಲ್ಲ ಅರ್ಜಿಗಳು ವಿಲೇವಾರಿಯಾಗಿದ್ದು, ಯಾವುದೇ ಬಾಕಿ ಇಲ್ಲವೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಐದು ಗ್ಯಾರಂಟಿ ಯೋಜನೆಗಳಡಿ ಜಿಲ್ಲೆಯಲ್ಲಿ ಒಟ್ಟು 7.81 ಕೋಟಿ ಫಲಾನುಭವಿಗಳು ಪ್ರಯೋಜನ ಪಡೆದಿದ್ದಾರೆ. ಇದರಿಂದಾಗಿ ಒಟ್ಟು 2280 ಕೋಟಿ ಆರ್ಥಿಕ ವೆಚ್ಚ ವ್ಯವಹಾರ ಆಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯಯೋಜನಾಧಿಕಾರಿ ಕಿಶೋರ ದುಬೆ ಸಭೆಗೆ ತಿಳಿಸಿದರು. ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿ ಪರೀಕ್ಷೆಗಳ ಫಲಿತಾಂಶ ಪ್ರಗತಿಗೆ ಈಗಿನಿಂದಲೇ ನೂತನ ಕಾರ್ಯಕ್ರಮಗಳನ್ನು ರೂಪಿಸುವಂತೆ ಉಸ್ತುವಾರಿ ಕಾರ್ಯದರ್ಶಿ ರಂದೀಪ ತಿಳಿಸಿದರು. ಜಿಲ್ಲೆಯಲ್ಲಿ ಕಂದಾಯ, ಜಿಲ್ಲಾ ಪಂಚಾಯತ, ಸಣ್ಣ ನೀರಾವರಿ ವ್ಯಾಪ್ತಿಯ 344 ಕೆರೆಗಳಿದ್ದು, ಬಹುತೇಕ ಅತಿಕ್ರಮಣ ತೆರವು ಕಾರ್ಯ ಮುಗಿದಿದೆ. ಸಣ್ಣ ನೀರಾವರಿಯ 108 ಕೆರೆಗಳ ಗಡಿ ಗುರುತಿಸಿ ಕ್ರಮ ಕೈಗೊಳ್ಳಲಾಗಿದೆಂದು ಅಧಿಕಾರಿಗಳು ಸಭೆಗೆ ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ವಿಷಯಗಳನ್ನು ಚರ್ಚಿಸಲಾಯಿತು.

ಈ ಸಭೆಯಲ್ಲಿ ಹಿರಿಯ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಹರ್ಷಿ ಭಗೀರಥ ಜಯಂತಿ ವೈಭವ





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಉಪಾರ ಸಮಾಜದ ವತಿಯಿಂದ ಗುರುವಾರ ಆಯೋಜಿಸಿದ್ದ ಮಹರ್ಷಿ ಭಗೀರಥ ಜಯಂತಿ ಮೆರವಣಿಗೆ ಕಾರ್ಯಕ್ರಮ ವೈಭವದಿಂದ ಜರುಗಿತು. ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ಮೆರವಣಿಗೆ ನಾಗಣ್ಣ ಕಟ್ಟಿ, ಬಸವೇಶ್ವರ ವೃತ್ತ, ನಗರೇಶ್ವರ ದೇವಸ್ಥಾನ, ಅಗಸೆ (ಬೇಸ್) ಸೇರಿ ಪ್ರಮುಖ ಮಾರ್ಗಗಳ ಮೂಲಕ ಉಪಾರ ಗಲ್ಲಿಯ ಮರಗೇಮ್ಮ ದೇವಸ್ಥಾನದ ವರೆಗೆ ಸಂಭ್ರಮದಿಂದ ಜರುಗಿತು.

ಮೆರವಣಿಗೆ ದಾರಿಯುದ್ದಕ್ಕೂ ಡಿಜೆ ಹಾಡುಗಳಿಗೆ ಪುರಸಭೆ ಸದಸ್ಯರು, ಉಪಾರ ಸಮಾಜದ ಮುಖಂಡರು ಸೇರಿ ಯುವಕ ಯುವಕರು ಕುಣಿದು ಕುಪ್ಪಳಿಸಿದರು. ಉಪಾರ ಸಮಾಜದ ಪುಟ್ಟ ಮಕ್ಕಳು ಪ್ರಸ್ತುತ ಪಡಿಸಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಕಣ್ಮನ ಸೆಳೆಯಿತು.

ಈ ವೇಳೆ ಉಪಾರ ಸಮಾಜ ಅಧ್ಯಕ್ಷ ಮಹೇಶ ಸಗರ, ಉಪಾಧ್ಯಕ್ಷ ಅನಿಲ್ ಸಗರ್, ಗೌರವಾಧ್ಯಕ್ಷ ಪೀರಪ್ಪ ಪಡತಲ್ ಸಗರ್, ಪುರಸಭೆ ಸದಸ್ಯ ವಿಜಯಕುಮಾರ, ದೇವಿ ಸಗರ್, ಮಾರುತಿ ಸಗರ, ಕಲ್ಲಪ್ಪ ಸಗರ್ ದುಬಲಗುಂಡಿ, ಶರಣಪ್ಪ ಸಗರ್, ಸುಶೀಲಕುಮಾರ ಭೊಕಲಾ, ಸಿದ್ದಾರ್ಥ ಜಾನವೀರ್, ಅನಿಲ ಹೊನ್ನಿಕೇರಾ, ಅನಂತ ಮಾಳಗೆ ಸೇರಿ ಅನೇಕರಿದ್ದರು.

# ನರೇಗಾ ಯೋಜನೆ ಸದ್ಬಳಕೆಯಾಗಲಿ : ದೀಪಿಕಾ ನಾಯ್ಕರ್



> ಗ್ರಾಮೀಣ ಭಾಗದಲ್ಲಿ ಸರಕಾರದ ವತಿಯಿಂದ ನಡೆಯುತ್ತಿರುವ ರಾಷ್ಟ್ರೀಯ ಉದ್ಯೋಗ ಖಾತ್ರಿ, ನರೇಗಾ ಯೋಜನೆಯ ಕಾಮಗಾರಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹೆಣ್ಣು ಮಕ್ಕಳು ಕೆಲಸ ಮಾಡುತ್ತಿರುವುದು ಬಹಳ ಸಂತೋಷ ತಂದಿದೆ. ಕುಟುಂಬ ನಿರ್ವಹಣೆಯಲ್ಲಿ ಹೆಣ್ಣು ಮಕ್ಕಳ ಪಾತ್ರ ದೊಡ್ಡದಾಗಿದೆ. ಇದನ್ನು ಅರಿತುಕೊಂಡು ಹೆಣ್ಣು ಮಕ್ಕಳು ಒತ್ತಡದಲ್ಲಿ ಕೆಲಸ ಮಾಡುವುದನ್ನು ಕೈಬಿಟ್ಟು ತಮ್ಮ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ಮತ್ತು ಮುಂಜಾಗೃತ ಕ್ರಮಗಳನ್ನು ಅನುಸರಿಸಿ ಕೆಲಸ ಮಾಡುವ ಮೂಲಕ ತಮ್ಮ ಕುಟುಂಬದ ಆರ್ಥಿಕ ಮಟ್ಟ ಸುಧಾರಣೆ ಮಾಡಿಕೊಳ್ಳಬೇಕು.
>
> ದೀಪಿಕಾ ನಾಯ್ಕರ್
> ತಾಪಂ. ಇಓ ಹುಮನಾಬಾದ್

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಗ್ರಾಮೀಣ ಭಾಗದ ಹಳ್ಳಿಗಳ ಬಡಜನರ ಕಲ್ಯಾಣಕ್ಕೆ ಪೂರಕವಾದ ನರೇಗಾ ಯೋಜನೆ ಸದ್ಬಳಕೆ ಆಗುವಂತೆ ಎಚ್ಚರ ವಹಿಸಿ ಸ್ಥಳೀಯ ಅಧಿಕಾರಿಗಳು ಕೆಲಸ ಮಾಡಬೇಕು ಎಂದು ತಾಪಂ. ಇಓ ದೀಪಿಕಾ ನಾಯ್ಕರ್ ಸೂಚನೆ ನೀಡಿದರು.

ತಾಲೂಕಿನ ಚಂದನಹಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯ ಸೋನಕೇರಾ ಗ್ರಾಮದ ಹೊರ ವಲಯದಲ್ಲಿ ರಾಷ್ಟ್ರೀಯ ಉದ್ಯೋಗ ಖಾತ್ರಿ, ನರೇಗಾ ಯೋಜನೆ ಅಡಿಯಲ್ಲಿ ಆಯೋಜಿಸಿದ್ದ ದುಡಿಯೋಣ ಬಾ ಅಭಿಯಾನ, ಕಾಯಕ ಮಾಸಾಚಾರಣೆ ಹಾಗೂ ಆರೋಗ್ಯ ಶಿಬಿರದಲ್ಲಿ ನರೇಗಾ ಕೂಲಿ ಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ಜನರಿಗೆ 1 ವರ್ಷದಲ್ಲಿ 100 ದಿನ ಕೆಲಸ ನೀಡಿ ಕುಟುಂಬ ನಿರ್ವಹಣೆಗೆ ಅನುಕೂಲ ಮಾಡಿಕೊಡುವುದು ಉದ್ಯೋಗ ಖಾತ್ರಿ ಯೋಜನೆ ಗುರಿಯಾಗಿದೆ. ತಾಲೂಕಿನ ಯಾವುದೇ ಗ್ರಾಪಂ. ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೆಲಸ ಬೇಡಿಕೆ ಇದ್ದಾಗ 15 ದಿನದೊಳಗೆ ಕೆಲಸ ನೀಡಲು ಅಯಾ ಗ್ರಾಮ ಪಂಚಾಯಿತಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ನರೇಗಾ ಯೋಜನೆಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಗ್ರಾಮ ಪಂಚಾಯತಿ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ನರೇಗಾ ಯೋಜನೆ ಅಡಿಯಲ್ಲಿ ಕೆಲಸ ನೀಡಲು ನಿರಾಕರಿಸಿದರೆ, ಸ್ಥಳೀಯರು ನನಗೆ ಮಾಹಿತಿ ನೀಡಬೇಕು. ನಿರ್ಲಕ್ಷ್ಯ ವಹಿಸಿದವರ ವಿರುದ್ಧ ಕಾನೂನು ಚೌಕಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಗ್ರಾಪಂ. ಅಧ್ಯಕ್ಷೆ ಮಂಗಲಾ ಮೇತ್ರೆ, ಗ್ರಾಪಂ. ಸದಸ್ಯರಾದ ವಿಶ್ವನಾಥ ಕಾಡಗೊಂಡ, ರಾಜಕುಮಾರ ಸಂಗ್ರಾಮ, ತೇಜಮ್ಮ, ಪಿಡಿಓ ವೀರಣ್ಣ ಜಮಾದಾರ, ದಯಾಗೊಂಡ ಹೈಬತೆ, ವಿಜಯಲಕ್ಷ್ಮಿ ದೋಮಲ್, ಮನೋಜಕುಮಾರ ಸೇರಿ ಅನೇಕರಿದ್ದರು.

# ರಕ್ತದಾನ ಶಿಬಿರ



ಕಲಬುರಗಿ: ಮೇ.15: ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಪಹಲ್ಗಾಮ್ ಘಟನೆಯಲ್ಲಿ ಮೃತ ಪಟ್ಟಿರುವ ನಾಗರಿಕರು ಮತ್ತು ಪಾಕಿಸ್ತಾನ ವಿರುದ್ಧ ಕಾರ್ಯಾಚರಣೆಯಲ್ಲಿ ಹುತಾತ್ಮರಾದ ಸೈನಿಕರ ಸ್ಮರಣಾರ್ಥ ಹಿನ್ನೆಲೆಯಲ್ಲಿ ಗುರುವಾರ ಕಾಂಗ್ರೆಸ್ ಪಕ್ಷದ ಯುವ ಘಟಕದ ಜಿಲ್ಲಾಧ್ಯಕ್ಷ ಶಕೀಲ್ ಅಹಮದ್ ಸರಡಗಿ ಅವರ ನೇತೃತ್ವದಲ್ಲಿ ರಕ್ತದಾನ ಶಿಬಿರ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಶಿವಾನಂದ ಹೊನಗುಂಟಿ, ಈರಣ್ಣ ಪಾಟೀಲ್ ಝಳಕಿ, ಕಾರ್ತಿಕ್ ನಾಟಿಕಾರ್, ರಾಜು ಮಳಗಿ, ಮೊಹಮ್ಮದ್ ಅಸ್ವಾನ್, ಅಜರ್ ಬಾದಲ್, ರಾಮಪ್ರಸಾದ್ ಕಾಂಬಳೆ, ಶರಣು ವಾರದ್, ಏಜಾಜ್ ನಿಂಬಾಳ್ಕರ್, ಟೈಗರ್ ವಿಘ್ನೇಶ್ವರ್, ಮಿಸ್ತ್ರಿ ಶರ್ಫುದ್ದೀನ್, ಕಾರ್ತಿಕ್ ಹೊಸಮನಿ, ಅಸ್ಲಂ ಸಿಂದಗಿ, ಪರಶುರಾಮ ನಾಟಿಕಾರ, ನಿಕಿಲ್ ನಾಗತಿಲಕ್, ಮಹಿಬೂಬ್, ಶೇಖ ಸಮರಿನ್ ಸೇರಿದಂತೆ ಇತರರು ಇದ್ದರು.

# ರೈಲ್ವೆ ಯೋಜನೆಗಳನ್ನು ಪ್ರತಿ ಹಳ್ಳಿಗೂ ತಲುಪಿಸಲಾಗುವುದು: ಸಚಿವ ವಿ. ಸೋಮಣ್ಣ

ಮಲ್ಲಮ್ಮ ನುಡಿ ವಾರ್ತೆ




ಕೊಪ್ಪಳ :ಮೇ.15: ರೈಲ್ವೆ ಯೋಜನೆಗಳನ್ನು ಪ್ರತಿ ಹಳ್ಳಿಗೂ ತಲುಪಿಸುವ ಚಿಂತನೆ ನಮ್ಮ ಸರ್ಕಾರದ್ದಾಗಿದೆ. ಅದಕ್ಕಾಗಿ ಪ್ರಧಾನ ಮಂತ್ರಿಗಳು ದೇಶದಲ್ಲಿ 7 ಲಕ್ಷ ಕೋಟಿ ರೂ ಹಳೆಯ ರೈಲ್ವೆ ಯೋಜನೆಗಳನ್ನು ಕೈಗೆತ್ತಿಕೊಂಡಿದ್ದಾರೆ ಎಂದು ಭಾರತ ಸರ್ಕಾರದ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಹೇಳಿದರು.

ಅವರು ಗುರುವಾರ ಕುಷ್ಟಗಿ ರೈಲು ನಿಲ್ದಾಣದಲ್ಲಿ ನೈಋತ್ಯ ರೈಲ್ವೆ ವಿಭಾಗದ ಗದಗ (ತಳಕಲ್ಲ) ಕುಷ್ಟಗಿ ಹೊಸ ರೈಲು ಮಾರ್ಗದ ಉದ್ಘಾಟನೆ ಹಾಗೂ ರೈಲು ಸಂಖ್ಯೆ. 17323 ಕುಷ್ಟಗಿ–ಎಸ್.ಎಸ್.ಎಸ್. ಹುಬ್ಬಳ್ಳಿ ಪ್ಯಾಸೆಂಜರ್ ರೈಲಿಗೆ ಹಸಿರು ನಿಶಾನೆ ಕಾರ್ಯಕ್ರಮವನ್ನು ನೆರವೇರಿಸಿ ಮಾತನಾಡಿದರು.

ರೈಲ್ವೆ ಸಾರಿಗೆಯಿಂದ ಜನರಿಗೆ ಅನುಕೂಲವಾಗಲಿದೆ. ರೈಲು ಒಂದು ಇಂಥ ಇಲಾಖೆ ಇದೆ ಇದರಲ್ಲಿ ಎಲ್ಲರೂ ಓಡಾಡುತ್ತಾರೆ. ದೇವೆಗೌಡರು ಪ್ರಧಾನಿಗಳಾಗಿದ್ದ ಸಮಯದಲ್ಲಿ ಬಸವರಾಜ ರಾಯರೆಡ್ಡಿ ಅವರು ಈ ಭಾಗದ ಸಂಸದರಾಗಿದ್ದ ಸಮಯದಲ್ಲಿ ಗದಗ–ವಾಡಿ ರೈಲು ಮಾರ್ಗದ ಯೋಜನೆ ಕೈಗೆತ್ತಿಕೊಂಡಿದ್ದರು. ಬಹು ದಿನಗಳ ನಂತರ ಈ ಭಾಗದ ಜನರ ಕನಸು ಈಗ ನನಸಾಗಿದೆ ಎಂದರು.

ವಾಜಪೇಯಿ ಅವರು ಪ್ರಧಾನಿಗಳಾಗಿದ್ದ ಸಮಯದಲ್ಲಿ ಅವರು ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿಗೆ ಒತ್ತು ನೀಡಿದರೆ ನರೇಂದ್ರ ಮೋದಿಜಿ ಅವರು ರೈಲ್ವೆ ಅಭಿವೃದ್ಧಿಗೆ ಒತ್ತು ನೀಡುತ್ತಿದ್ದಾರೆ. ಕಳೆದ ಹತ್ತು ವರ್ಷಗಳಲ್ಲಿ 45 ಸಾವಿರ ಕೋಟಿ ರೂ ರೈಲ್ವೆ ಯೋಜನೆಯನ್ನು ಕರ್ನಾಟಕದಲ್ಲಿ ಮಾಡುತ್ತಿದ್ದೇವೆ. 2014 ರಿಂದ 2024 ರವರೆಗೆ 5 ಲಕ್ಷ ಉದ್ಯೋಗ ರೈಲ್ವೆ ಇಲಾಖೆಯಲ್ಲಿ ಜನರಿಗೆ ನೀಡಲಾಗಿದೆ. ರೈಲ್ವೆ ಇಲಾಖೆಯಲ್ಲಿ ಕರ್ನಾಟಕದವರಿಗೆ ಉದ್ಯೋಗ ಸಿಗಲು ಅನುಕೂಲವಾಗಲು ಕನ್ನಡದಲ್ಲಿ ಪರೀಕ್ಷೆ ಬರೆಯಲು ಅನುಮತಿ ನೀಡಲಾಗಿದೆ. ಒಂದೇ ಭಾರತ 50 ಎಸಿ ಸ್ಲೀಪರ್ ಕೋಚ್ ಟ್ರೈನಗಳನ್ನು ಇನ್ನೂ ಒಂದುವರೆ ತಿಂಗಳಲ್ಲಿ ದೇಶದಲ್ಲಿ ಬಿಡುಗಡೆ ಮಾಡಲಿದ್ದೇವೆ ಎಂದು ಹೇಳಿದರು.

2025–26ನೇ ಸಾಲಿನಲ್ಲಿ ಗದಗ–ವಾಡಿ ರೈಲು ಯೋಜನೆಗೆ 549.45 ಕೋಟಿ ರೂ ಹಣವನ್ನು ಇರಿಸಿದ್ದೇವೆ. ಗದಗ–ವಾಡಿ ಮಧ್ಯ ಒಟ್ಟು 27 ರೈಲು ನಿಲ್ದಾಣಗಳು ಬರುತ್ತವೆ. ಎಲ್ಲಾ ರೈಲು ನಿಲ್ದಾಣಗಳ ಅಭಿವೃದ್ಧಿಗೆ ನಮ್ಮ ಸರ್ಕಾರದ ಆದ್ಯತೆ ನೀಡಿದೆ. ಇಂದು ಕುಷ್ಟಗಿ–ಹುಬ್ಬಳ್ಳಿ ಪ್ಯಾಸೆಂಜರ್ ರೈಲಿಗೆ ಚಾಲನೆ ನೀಡಿದ್ದು, ಪ್ರತಿದಿನ ಕುಷ್ಟಗಿ–ಹುಬ್ಬಳ್ಳಿ ಮಧ್ಯ ಈ ರೈಲು ಸಂಚರಿಸಲಿದೆ. ಟಿಕೆಟ್ ದರ 70 ರೂ ಇದ್ದು. ಬೆಳಿಗ್ಗೆ 7 ಗಂಟೆಗೆ ಕುಷ್ಟಗಿಯಿಂದ ಹೊರಟ ರೈಲು 10.40ಕ್ಕೆ ಹುಬ್ಬಳ್ಳಿ ತಲುಪಲಿದೆ ಮತ್ತೆ ಸಂಜೆ 5 ಗಂಟೆಗೆ ಹುಬ್ಬಳ್ಳಿಯಿಂದ ಹೊರಟು ರಾತ್ರಿ 8.30 ಕುಷ್ಟಗಿ ಬಂದು ತಲುಪಲಿದೆ ಇದರಿಂದ ಈ ಭಾಗದ ಜನರಿಗೆ ಅನುಕೂಲವಾಗಲಿದೆ ಎಂದು ಹೇಳಿದರು. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್ ತಂಗಡಗಿ ಮಾತನಾಡಿ ಗದಗ–ವಾಡಿ ರೈಲು ಮಾರ್ಗದ ಬಹುದಿನಗಳ ಕನಸು ಈಗ ಇಡೇರಿದೆ. ಬಸವರಾಜ ರಾಯರೆಡ್ಡಿ ಅವರು ಸಂಸದರಾಗಿದ್ದ ಸಮಯದಲ್ಲಿ ಇದನ್ನು ಪ್ರಾರಂಭಿಸಿದರು. ಇದಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಶೇ. 50:50 ಪ್ರತಿ ಶತದಲ್ಲಿ ಅನುದಾನವನ್ನು ನೀಡುತ್ತವೆ. ಈ ಯೋಜನೆಗೆ ನಮ್ಮ ಸರ್ಕಾರ ಭೂಮಿ ಒದಗಿಸುವ ಕೆಲಸವನ್ನು ಮಾಡಿದೆ. ಈ ಭಾಗದಿಂದ ಬೆಂಗಳೂರಿಗೆ ಹೋಗುವ ಟ್ರೇನ್ ವ್ಯವಸ್ಥೆ ಆಗಬೇಕು. ದರೋಜಿ–ಬಾಗಲಕೋಟ ಸರ್ವೆ ಆಗಬೇಕು ಇದ–ರಿಂದ ವಾಣಿಜ್ಯೋದ್ಯಮಿಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ ಅವರು ಮಾತನಾಡಿ, ಗದಗ–ವಾಡಿ ರೈಲ್ವೆ ಮಾರ್ಗ ಸ್ಥಾಪನೆಯು ಬಹು ವರ್ಷಗಳ ಬೇಡಿಕೆಯಾಗಿತ್ತು. ಈ ಮಾರ್ಗದಲ್ಲಿ ಬರುವ ಕುಷ್ಟಗಿ ಪಟ್ಟಣಕ್ಕೆ ಇಂದಿ??ಂದ ರೈಲು ಸಂಚಾರ ಆರಂಭವಾಗಿದ್ದು, ಈ ಭಾಗದ ಅನೇಕ ಹಿರಿಯರು ಕಂಡ ಕನಸು ಇಂದು ನನಸಾಗಿದೆ. ಗದಗ–ವಾಡಿ ರೈಲು ಲೈನ್ ನಿಂದ ನಮ್ಮ ಭಾಗದ ಅಭಿವೃದ್ಧಿಗೆ ತುಂಬಾ ಅನುಕೂಲವಾಗಲಿದೆ. ಸದ್ಯ ಕುಷ್ಟಗಿಯಿಂದ ಹುಬ್ಬಳ್ಳಿವರೆಗೆ ರೈಲು ಸಂಚಾರ ಆರಂಭವಾಗಿದ್ದು, ಮುಂದಿನ ದಿನಮಾನಗಳಲ್ಲಿ ಈ ಮಾರ್ಗದಿಂದ ಲಿಂಕ್ ಲೈನ್ ಮಾಡಿ ಬೆಂಗಳೂರಿಗೂ ಪ್ರಯಾಣಿಸಲು ಅನುಕೂಲ ಮಾಡಿಕೊಡಬೇಕೆಂದು ರೈಲ್ವೆ ಸಚಿವರಲ್ಲಿ ಮನವಿ ಮಾಡಿದರು. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಮಾತನಾಡಿ, ರೈಲ್ವೆ ಮಾರ್ಗಗಳನ್ನು ಮಾಡುವುದು ಅಷ್ಟು ಸುಲಭದ ಕೆಲಸವಲ್ಲ. ಇದಕ್ಕಾಗಿ ಬಹಳ ಪರಿಶ್ರಮಬೇಕು. 1996ರಲ್ಲಿ ನಾನು ಸಂಸದಾನ ಸಂದರ್ಭದಲ್ಲಿ ಮೊದಲನೆ ಬಾರಿಗೆ ಕೊಪ್ಪಳ ದಿಂದ ರಾಯಚೂರು ಮಾರ್ಗವಾಗಿ ಹೈದ್ರಾಬಾದಿಗೆ ರೈಲ್ವೆ ಮಾರ್ಗ ಆಗಬೇಕೆಂದು ಮುನಿರಾಬಾದ್–ಮಹೆಬೂಬ್ ನಗರ ರೈಲ್ವೆ ಮಾರ್ಗವನ್ನು ವಾಯಾ ಗಂಗಾವತಿ, ಸಿಂದನೂರ, ರಾಯಚೂರು ಮೂಲಕ ರೈಲ್ವೆ ಲೈನ್ ಮಾಡಿಸಲು ಪ್ರಯತ್ನಿಸಿದ್ದೆ. ತದನಂತರ 1997ರಲ್ಲಿ ಅಂದಿನ ಪ್ರಧಾನಮಂತ್ರಿಗಳಾದ ಹೆಚ್.ಡಿ.ದೇವೆಗೌಡ ಅವರನ್ನು ಕರೆಸಿ ಈ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಸರ್ವೆ ಮಾಡಿಸಲಾಯಿತು. ಅದೇ ಸಂದರ್ಭದಲ್ಲಿ ಗದಗ–ವಾಡಿ ರೈಲ್ವೆ ಮಾರ್ಗ ಆಗಬೇಕೆಂದು ಒತ್ತಾಯಿಸಲಾಯಿತು. ನಂತರದಲ್ಲಿ ಸರ್ವೆಯನ್ನು ಮಾಡಿಸಲಾಗಿತ್ತು. ಆಗ ಕೆಲವು ತಿಂಗಳುಗಳಲ್ಲಿ ಸಂಸತ್ ವಿಸರ್ಜನೆಗೊಂಡ ಕಾರಣ ಗದಗ–ವಾಡಿ ರೈಲ್ವೆ ಮಾರ್ಗ ವಿಳಂಭವಾಯಿತು ಎಂದರು.

2009 ರಲ್ಲಿ ಸಂಸದರಾಗಿ ಆಯ್ಕೆಯಾಗಿದ್ದ ಮಲ್ಲಿಕಾರ್ಜುನ ಖರ್ಗೆ ಅವರ ಮೂಲಕ ಗದಗ–ವಾಡಿ ರೈಲ್ವೆ ಮಾರ್ಗವನ್ನು ಅಪ್‌ಡೇಟ್ ಮಾಡಲು ಒತ್ತಾಯಿಸಲಾಯಿತು. ನಂತರ 2013–14ರಲ್ಲಿ ಗದಗ–ವಾಡಿ ರೈಲ್ವೆ ಮಾರ್ಗಕ್ಕೆ ಅನುಮೋದನೆ ದೊರೆಯಿತು. ಅಂದೂ ಸಹ ಮುಖ್ಯಮಂತ್ರಿಗಳು ಆಗಿದ್ದ ಸಿದ್ದರಾಮ್ಯನವರು ಈ ಕಾಮಗಾರಿಗೆ ಶೇ. 50ರಷ್ಟು ಹಣವನ್ನು ಮತ್ತು ಭೂಸ್ವಾಧೀನಕ್ಕೆ ಒಪ್ಪಿಗೆ ನೀಡಿದ್ದರು. ಈ ಮಾರ್ಗಕ್ಕೆ ಒಟ್ಟು 257 ಕಿ.ಮೀ.ಗೆ 4195 ಎಕರೆ ಜಮೀನು ಬೇಕಿದ್ದು, ಈಗಾಗಲೇ 3867 ಎಕರೆ ಅಂದರೆ, ಶೇ.99ರಷ್ಟು ಭೂಸ್ವಾಧೀನ ಆಗಿದೆ. ನಮ್ಮ ರಾಜ್ಯದಲ್ಲಿ ಇಷ್ಟೊಂದು ತ್ವರಿತವಾಗಿ ಭೂಸ್ವಾಧೀನ ಆಗಿದ್ದು, ಗದಗ–ವಾಡಿ ಯೋಜನೆಯ ಮಾರ್ಗಕ್ಕೆ ಮಾತ್ರ ಆಗಿದೆ. ತಳಕಲ್ ನಿಂದ ಕುಷ್ಟಗಿ ವರೆಗೆ ಸುಮಾರು 56 ಕಿ.ಮೀ ವರೆಗೆ ಕಾಮಗಾರಿಯು ಪೂರ್ಣಗೊಂಡಿದೆ. ವಾಡಿಯಿಂದ ಶಹಪುರ ವರೆಗೆ 48 ರೈಲ್ವೆ ಲೈನ್ ಮುಕ್ತಾಯದ ಹಂತದಲ್ಲಿದೆ. 165 ಕಿ.ಮೀ ಕುಷ್ಟಗಿಯಿಂದ ಸುರಪೂರ ವರೆಗೆ ಕಾಮಗಾರಿಕೆ ಟೆಂಡರ್ ಮಾಡಲಾಗುತ್ತಿದ್ದು, ಇದನ್ನು ಒನ್ ಸಾಟ್ ಟೆಂಡರ್ ಮಾಡಿದರೇ ರಾಜ್ಯ ಸರ್ಕಾರದಿಂದ ಶೇ.50ರಷ್ಟು ಅನುದಾನವನ್ನು ಬಿಡುಗಡೆ ಮಾಡಿಸಲಾಗುವುದು. ಈ ಹಿನ್ನೆಲೆಯಲ್ಲಿ ಒನ್ ಸಾಟ್ ಟೆಂಡರ್ ಮಾಡಿಸಲು ಮನವಿ ಮಾಡಿಕೊಳ್ಳುತ್ತೇನೆ. ಇದರ ಜೊತೆಗೆ ಈ ಮಾರ್ಗದ ವಿದ್ಯುದ್ದೀಕರಣ ಆಗಬೇಕು. ಗದಗ–ವಾಡಿ ಕಾಮಗಾರಿ ಪೂರ್ಣಗೊಂಡರೆ, ಈ ಭಾಗದ ಜನರ ಪ್ರಯಾಣದ ಜೊತೆಗೆ ವಾಣಿಜ್ಯ ವ್ಯವಹಾರಗಳಿಗೆ ತುಂಬಾ ಅನುಕೂಲವಾಗಲಿದೆ ಎಂದು ಹೇಳಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಕುಷ್ಟಗಿ ಪುರಸಭೆ ಅಧ್ಯಕ್ಷರಾದ ಮಹಾಂತೇಶ , ಜಿಲ್ಲಾಧಿಕಾರಿ ನಲಿನ್ ಅತುಲ್, ನೈರುತ್ಯ ರೈಲ್ವೆ ಹುಬ್ಬಳ್ಳಿಯ ವಿಭಾಗೀಯ ವ್ಯವಸ್ಥಾಪಕರಾದ ಬೇಲಾ ಮೀನಾ, ಕಾಮಗಾರಿ ನಿರ್ಮಾಣ ವಿಭಾಗದ ಸಿಎಓ ಅಜಯ್ ಶರ್ಮಾ, ಮಾಜಿ ಸಚಿವರಾದ ಅಮರೇಗೌಡ ಪಾಟೀಲ್ ಬಯ್ಯಾಪುರ ಹಾಗೂ ಮಾಜಿಸಚಿವ ಹಾಲಪ್ಪ ಆಚಾರ್, ಮಾಜಿ ಸಂಸದರಾದ ಕೆ.ವಿರೂಪಾಕ್ಷಪ್ಪ, ಮಾಜಿ ಶಾಸಕರಾದ ಕೆ.ಶರಣಪ್ಪ ಹಾಗೂ ಬವರಾಜ ದಢೇಸೂಗೂರು, ಮುಖಂಡರಾದ ಡಾ. ಕೆ. ಬಸವರಾಜ, ಹಾಗೂ ಸೇರಿದಂತೆ ರೈಲ್ವೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕುಷ್ಟಗಿ–ಹುಬ್ಬಳ್ಳಿ ಪ್ಯಾಸೆಂಜರ್ ರೈಲಿಗೆ ಹಸಿರು ನಿಶಾನೆ: ಕಾರ್ಯಕ್ರಮದ ನಂತರ ರೈಲು ಸಂಖ್ಯೆ. 17323 ಕುಷ್ಟಗಿ–ಎಸ್.ಎಸ್.ಎಸ್. ಹುಬ್ಬಳ್ಳಿ ಪ್ಯಾಸೆಂಜರ್ ರೈಲಿಗೆ ಕೇಂದ್ರ ಸರ್ಕಾರದ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಅಧಿಕಾರಿಗಳು ಹಾಗೂ ಇತರೆ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.


## ಕರ್ನಾಟಕ ಅರಣ್ಯ ಇಲಾಖೆ

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಾರ್ಯಾಲಯ, ಸಾಮಾಜಿಕ ಅರಣ್ಯ ಉಪ ವಿಭಾಗ, ಬಾಗಲಕೋಟೆ.

ನಂ: ಸಅಸಂ/ಸಾಅಬಾ/ಇ–ಪೋರ್ಟಲ್/ಸಿಆರ್–01/2025–26

ದಿನಾಂಕ: 15–05–2025

### ಟೆಂಡರ್ ಪ್ರಕಟಣೆ

(ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಮಾತ್ರ)

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, 2025–26ನೇ ಸಾಲಿನಲ್ಲಿ ಬಾಗಲಕೋಟ ಸಾಮಾಜಿಕ ಅರಣ್ಯ ವಿಭಾಗದ ಬಾಗಲಕೋಟೆ ಸಾಮಾಜಿಕ ಅರಣ್ಯ ಉಪ–ವಿಭಾಗದ ವ್ಯಾಪ್ತಿಯಲ್ಲಿ ಬರುವ ಬಾಗಲಕೋಟ, ಬಾದಾಮಿ ಹಾಗೂ ಹುನಗುಂದ (ಸಾಅ) ವಲಯಗಳಲ್ಲಿ ವಿವಿಧ ಯೋಜನೆಗಳಡಿ ಕೈಗೊಳ್ಳುವ ನೆಡುತೋಪು ಬೆಳೆಸುವುದು / ನಿರ್ವಹಣೆ ಸಸಿ ಬೆಳೆಸುವುದು / ನಿರ್ವಹಣೆ ಹಾಗೂ ಇತರೆ ಚಟುವಟಿಕೆಗಳಿಗಾಗಿ ಅರಣ್ಯ ಗುತ್ತಿಗೆದಾರರೆಂದು ಹೆಸರನ್ನು ನೋಂದಾಯಿಸಿಕೊಂಡಿರುವಂತಹ ಅರ್ಹ ಗುತ್ತಿಗೆದಾರರಿಗೆ ಮಾತ್ರ ಕರ್ನಾಟಕ ಸರ್ಕಾರದ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ (http://kppp.karnataka.gov.in) ಟೆಂಡರ್ ಆಹ್ವಾನಿಸಲಾಗಿದೆ. ವಿವರ ಈ ಕೆಳಗಿನಂತಿದೆ.

1) ಟೆಂಡರ್ ಷರತ್ತು ಸಂಬಂಧ ವಿವರ / ಸ್ಪಷ್ಟೀಕರಣ ಪಡೆಯಲು ಕೊನೆಯ ದಿನಾಂಕ 27–05–2025 ಅಪರಾಹ್ನ 01.00 ಘಂಟೆಗೆ. 2) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 28–05–2025 ಅಪರಾಹ್ನ 01.00 ಘಂಟೆಗೆ. 3) ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 30–05–2025 ಅಪರಾಹ್ನ 01.00 ಘಂಟೆಗೆ. 4) ಆರ್ಥಿಕ ಬಿಡ್ ತೆರೆಯುವ ದಿನಾಂಕ: 31–05–2025 ಅಪರಾಹ್ನ 01.00 ಘಂಟೆಗೆ. 5) ಇ.ಎಂ.ಡಿ ಮೊತ್ತ : 2.5%.

ಸದರಿ ಟೆಂಡರ್‌ಗಳಲ್ಲಿ ಯಾವುದೇ ಗುತ್ತಿಗೆದಾರರು ಭಾಗವಹಿಸದೇ ಇದ್ದಲ್ಲಿ ಇದನ್ನೇ ಮರು ಟೆಂಡರ್ ಪ್ರಕಟಣೆ ಎಂದು ತಿಳಿದು ದಿನಾಂಕ: 03–06–2025ರ ವರೆಗೆ ವಿಸ್ತರಿಸಿ ಇ–ಟೆಂಡರ್‌ಗಳನ್ನು ಸ್ವೀಕರಿಸಲಾಗುವುದು.

ಸಹಿ/– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ,
ಸಾಮಾಜಿಕ ಅರಣ್ಯ ಉಪ ವಿಭಾಗ,
ಬಾಗಲಕೋಟೆ.

ಡಿಐಪಿಆರ್/ಬಾಗಲಕೋಟೆ/67/ಮಣಿಪಾಲ್/2025-26



Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.